♦ ಮಂಡ್ಯ ♦ ಮೈಸೂರು ♦ ಚಾಮರಾಜನಗರ ♦ ಹಾಸನ ♦ ರಾಮನಗರ ♦ ತುಮಕೂರು ♦ ಬೆಂಗಳೂರು ಗ್ರಾಮಾಂತರ ♦ ಬೆಂಗಳೂರು ನಗರ

E-mail:kayakayogi @gmail.com

website: www.kayakayogi.com

ಕಾಯಕ ಯೋಗಿನಿ

ಸಂಪಾದಕರು:ಅರುಣಜ್ಯೋತಿ ಬಿ.ಕೆ. KAYAKA YOGI - Regional Daily ಪ್ರಾದೇಶಿಕ ದಿನಪತ್ರಿಕೆ

Connecting hearts in the cultural capital

askಮೈಸೂರು®

#askmysuru

RNI NO.KARKAN/2018/77805 | POST NO.KA/SK/MND/999/2022-2024 | ಮಂಡ್ಯ Mandya | ಸಂಪುಟ volume 06 | ಸಂಚಿಕೆ Issue 307 | ಗುರುವಾರ Thursday | 28-03-2024 | ಪುಟಗಳು Pages 06 | ಬೆಲೆ Rate 02 | ಸಂಪರ್ಕ 9980605484

ಬಿಜೆಪಿ ಜೆಡಿಎಸ್ ಮೈತ್ರಿ ಸೋಲಿಸಲು ಸಿಎಂ ಕರೆ

ರಾಜೀವ್ ಸೇರ್ಪಡೆಯಿಂದ ಕಾಂಗ್ರೆಸ್ ಪಕ್ಷಕ್ಕೆ ಶಕ್ತಿ: ಹಲವು ಮುಖಂಡರು 'ಕೈ' ವಶ

■ ಕಾಯಕಯೋಗಿ ಸುದ್ದಿ

ಮೈಸೂರು: ಕರ್ನಾಟಕದಲ್ಲಿ ಭಯದಿಂದ ಬಿಜೆಪಿ–ಜೆಡಿಎಸ್ ಒಂದಾಗಿದೆ. ಇವರನ್ನು ಜನತೆ ಸೋಲಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದರು.

ಅನ್ಯ ಪಕ್ಷಗಳ ವಿವಿಧ ಮುಖಂಡರುಗಳ ಪಕ್ಷ ಸೇರ್ಪಡೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಕಾಂಗ್ರೆಸ್‌ಗೆ ಶಕ್ತಿ: ಕಾಂಗ್ರೆಸ್ ಸಿದ್ಧಾಂತವನ್ನು ಒಪ್ಪಿ ಯಾವುದೇ ಷರತ್ತು ವಿಧಿಸದೇ ಕಾಂಗ್ರೆಸ್ ಸೇರಿದವರನ್ನು ಕಾಂಗ್ರೆಸ್ ಸ್ವಾಗತಿಸುತ್ತದೆ ಎಂದರು.ಸ್ವಾಭಿಮಾನಕ್ಕಾಗಿ ಅಲ್ಲದೇ ಕಾಂಗ್ರೆಸ್ ಪಕ್ಷ ಬಿಜೆಪಿ ಬಿಡಲು ಅಲ್ಲಿ ಗೌರವಯುತವಾಗಿ ನಡೆಸಿಕೊಳ್ಳಲಿಲ್ಲ ಹಾಗೂ ಪಕ್ಷ ಬಡವರ ಪರವಾಗಿದೆ ಎಂಬ ಕಾರಣಕ್ಕಾಗಿ ಕಾಂಗ್ರೆಸ್ ಸೇರಿದ್ದಾರೆ. ರಾಜಕೀಯ, ಸಾಮಾಜಿಕ ಕ್ಷೇತ್ರದಲ್ಲಿ ಮೂರು ದಶಕಗಳಿಂದ ತೊಡಗಿಸಿಕೊಂಡಿರುವ ರಾಜೀವ್ ಅವರು ಕಾಂಗ್ರೆಸ್ಸಿನ ಕಾರ್ಯಕ್ರಮಗಳನ್ನು ಒಪ್ಪಿಕೊಂಡು ಪಕ್ಷಕ್ಕೆ ಸೇರ್ಪಡೆಯಾಗಿರುವುದು ಒಳ್ಳೆಯ ಬೆಳವಣಿಗೆ ಹಾಗೂ ಪಕ್ಷದ ಸಿದ್ಧಾಂತ ಒಪ್ಪಿ ಬರುವುದನ್ನು ಸೇರ್ಪಡೆ ಮಾಡಿಕೊಳ್ಳುವುದು ನಮ್ಮ ಕರ್ತವ್ಯ ಮತ್ತು ಜವಾಬ್ದಾರಿ ಎಂದರು.

ಕಾಂಗ್ರೆಸ್ ಪಕ್ಷ ಗೆಲ್ಲಿಸಬೇಕೆಂಬ ಗುರಿಯೊಂದಿಗೆ ಕೆಲಸ ಮಾಡಬೇಕು

ಕಾಂಗ್ರೆಸ್ ಪಕ್ಷಕ್ಕೆ ರಾಜೀವ್ ಮತ್ತು ಸೇರ್ಪಡೆಯಿಂದಾಗಿ ಶಕ್ತಿ ಬಂದಂತಾಗಿದೆ ಲೋಕಸಭಾ ಚುನಾವಣೆಯಲ್ಲಿ ರಾಜೀವ್ ಅವರು ಸೇರಿರುವುದರಿಂದ ಕೃಷ್ಣರಾಜ ಕ್ಷೇತ್ರದಲ್ಲಿ ನಮ್ಮ ಅಭ್ಯರ್ಥಿ ಲಕ್ಷ್ಮಣ್ ಗೆಲ್ಲುವ ವಿಶ್ವಾಸವಿದೆ ಎಂದರು. ಎಲ್ಲರೂ ಒಟ್ಟಾಗಿ ಕೆಲಸ ಮಾಡಬೇಕು. ಭಿನ್ನಾಭಿಪ್ರಾಯಗಳನ್ನು ಮರೆತು ಕಾಂಗ್ರೆಸ್ ಪಕ್ಷ ಗೆಲ್ಲಿಸಬೇಕೆಂಬ ಗುರಿಯೊಂದಿಗೆ ಕೆಲಸ ಮಾಡಬೇಕು. ಈ ಕ್ಷೇತ್ರದಲ್ಲಿ ಬಡವರಿದ್ದಾರೆ. ಯಾವುದೇ ಜಾತಿ, ಧರ್ಮ ಅಥವಾ ಪಕ್ಷದ ಆಧಾರದ ಮೇಲೆ ಕಾಂಗ್ರೆಸ್ ಬಡವರನ್ನು ಕಡೆಗಣಿಸಿಲ್ಲ ಎಂದರು.

ಬಾಯಿಯಲ್ಲಿ ಮಾತ್ರ ಸಬ್ ಕಾ ಸಾಥ್

ಬಿಜೆಪಿಯವರು ಸಬ್ ಕಾ ಸಾಥ್ ಸಬ್ ಕಾ ವಿಕಾಸ್ ಎಂದು ಹೇಳುತ್ತಾರೆ. ಬುರ್ಖಾ, ಗಡ್ಡ, ಶಿಲುಬೆ ಹಾಕಿದವರು ಬರಬಾರದು ಎನ್ನುತ್ತಾರೆ. ಇದು ಯಾವ ಸಬ್ ಕಾ ಸಾಥ್ ಎಂದು ಪ್ರಶ್ನಿಸಿದರು. ಈ ದೇಶದಲ್ಲಿ ಹೆಚ್ಚು ಸುಳ್ಳು ಹೆಳುವ ಪ್ರಧಾನಿ ನರೇಂದ್ರ ಮೋದಿ ಎಂದರು. ಸುಳ್ಳು ಬಿಜೆಪಿಯ ಮನೆದೇವರು. 15 ಲಕ್ಷ ಪ್ರತಿ ಕುಟುಂಬದ ಖಾತೆಗೆ 15 ಲಕ್ಷ ಹಾಕುತ್ತೇವೆ ಎಂದಿದ್ದರು. ಅಚ್ಛೇ ದಿನ್ ಬರುತ್ತದೆ ಎಂದರು– ಬಂತೇ ಎಂದು ಪ್ರಶ್ನಿಸಿದರು.



ಗ್ಯಾಸ್, ಗೊಬ್ಬರ, ಬೆಲೆ ಏರಿದ್ದು, ರೂಪಾಯಿ ಬೆಲೆ ಕುಸಿಯಿತು. ಇಂದಿನವರೆಗೆ ಏನೂ ಮಾಡಿಲ್ಲ. ರೈತರ ಆದಾಯ ದುಪ್ಪಟ್ಟು ಮಾಡುತ್ತೇನೆ, ಭಾರತದ ಆರ್ಥಿಕತೆಯನ್ನು 5 ಟ್ರಿಲಿಯನ್ ಡಾಲರ್‌ಗೆ ಕೊಂಡೊಯ್ಯುತ್ತೇನೆ ಎಂದರು. ಆಗಿದೆಯೇ ? ಯುವಕರಿಗೆ ಪ್ರತಿ ವರ್ಷ 20 ಕೋಟಿ ಉದ್ಯೋಗ ಸೃಷ್ಟಿ ಮಾಡುತ್ತೇನೆ ಎಂದವರಿಗೆ ಇಂದಿನವರೆಗೆ ಮಾಡಲಾಗಿಲ್ಲ. ನರೇಂದ್ರ ಮೋದಿಯವರು ನುಡಿದಂತೆ ನಡೆದಿಲ್ಲ. ಬಿಜೆಪಿಗೆ ಮತ ಹಾಕಬೇಕೆ ಎಂದು ಜನರನ್ನು ಪ್ರಶ್ನಿಸಿದಾಗ ಅವರು ಇಲ್ಲ ಎಂದು ಕೂಗಿದರು.

ಮಾಡಿರುವ ಕೆಲಸವನ್ನು ಜನರಿಗೆ ಮುಟ್ಟಿಸುವ ಕೆಲಸ ಮಾಡಿ

ನಮ್ಮ ಕಾರ್ಯಕರ್ತರು ನಾವು ಮಾಡಿರುವ ಕೆಲಸವನ್ನು ಜನರಿಗೆ ಮುಟ್ಟಿಸುವ ಕೆಲಸ ಮಾಡಬೇಕು ಎಂದು ತಿಳಿಸಿದ್ದೇನೆ. ಸುಳ್ಳು ಹೇಳಬೇಡಿ ಎಂದು ಹೇಳಿದ್ದೇನೆ ಎಂದರು. ಹಿಂದಿನ ಬಾರಿ ನಮ್ಮ ಸರ್ಕಾರ 168 ಭರವಸೆಗಳಲ್ಲಿ 158 ಭರವಸೆಗಳನ್ನು ಈಡೇರಿಸಿದ್ದೆವು. ನುಡಿದಂತೆ ನಡೆದಿದ್ದೇವೆ ಎಂದು ಹೆಮ್ಮೆಯಿಂದ ಹೇಳುತ್ತೇವೆ ಎಂದರು. ನಾವು ಹಣ ಕೇಳುತ್ತಿರುವುದು ಗ್ಯಾರಂಟಿಗಳಿಗೆ ಎಂದು ನಿರ್ಮಲಾ ಸೀತಾರಾಮನ್ ಹೇಳುತ್ತಾರೆ. ಈ ಬಗ್ಗೆ ಒಂದೇ ವೇದಿಕೆಯಲ್ಲಿ ಚರ್ಚೆ ಮಾಡಲು ಬಿಜೆಪಿಯವರಿಗೆ ನಾವು ಆಹ್ವಾನ ನೀಡಿದ್ದೇವೆ ಎಂದರು. ಗ್ಯಾರಂಟಿಗಳಿಗೆ ಒಂದು ಪೈಸೆಯನ್ನೂ ಕೊಡಬೇಡಿ. ಮುಂದಿನ ವರ್ಷದಲ್ಲಿ ಗ್ಯಾರಂಟಿ ಯೋಜನೆಗಳಿಗೆ 52009 ಕೋಟಿ ರೂ.ಗಳನ್ನು ಬಜೆಟ್ ನಲ್ಲಿ ಮೀಸಲಿರಿಸಲಾಗಿದೆ ಎಂದರು.

ಕರ್ನಾಟಕದ ಜನರನ್ನು ಅತ್ಯಂತ ಅಲಕ್ಷ್ಯದಿಂದ ಕಾಣುತ್ತಿದ್ದಾರೆ

2023–24ರ ಬಜೆಟ್‌ನಲ್ಲಿ ಭದ್ರಾ ಮೇಲ್ದಂಡೆ ಯೋಜನೆಗೆ 5300 ಕೋಟಿ ರೂ.ಗಳನ್ನು ಕೊಡುತ್ತೇವೆ ಎಂದಿದ್ದರು. ಈ ವರ್ಷ ಒಂದೇ ಒಂದು ಪೈಸೆ ಬಂದಿಲ್ಲ ಎಂದರು. ಈ ಬಗ್ಗೆ ದೇವರ ಮೇಲೆ ಪ್ರಮಾಣ ಮಾಡಿ ಹೇಳಲಿ ಸತ್ಯ ಅಲ್ಲ ಎಂದು ನೋಡೋಣ ಎಂದರು.

18171 ಕೋಟಿ ರೂ.ಗಳ ಪರಿಹಾರವನ್ನು ಕೊಡಲು ಮನವಿ ಮಾಡಿ 5 ತಿಂಗಳಾಗಿದ್ದರೂ ಒಂದು ರೂಪಾಯಿ ನೀಡಿಲ್ಲ. ರೈತರು ಕಷ್ಟದಲ್ಲಿದ್ದರೂ ಈವರೆಗೆ ಒಮದು ರೂಪಾಯಿ ಬಿಡಿಗಡೆ ಮಾಡಿಲ್ಲ. ಇದು ಸತ್ಯ ಎಂದರು. ಕರ್ನಾಟಕದ ಜನರನ್ನು ಅತ್ಯಂತ ಅಲಕ್ಷ್ಯದಿಂದ ಕಾಣುತ್ತಿದ್ದು, ಮಲತಾಯಿ ಧೋರಣೆ ತೋರುತ್ತಿದ್ದಾರೆ ಎಂದರು.

ನ್ಯಾಯಕ್ಕಾಗಿ ಸರ್ವೋಚ್ಚ ನ್ಯಾಯಾಲಯಕ್ಕೆ ಮೊರೆ

15ನೇ ಹಣಕಾಸಿನ ಆಯೋಗದಲ್ಲಿ ನಮಗೆ 5495 ಕೋಟಿ ನೀಡಿದ್ದರೂ, ಕೆರೆಗಳ ಅಭಿವೃದ್ಧಿ ಹಾಗೂ ಪೆರಿಫೆರಲ್ ರಿಂಗ್ ರಸ್ತೆಗೆ ಬಿಡುಗಡೆಯಾದ ಮೊತ್ತ ಸೇರಿ ಒಟ್ಟು 11495 ಕೋಟಿ ರೂ.ಗಳ ಪೈಕಿ ಒಂದು ರೂ ನೀಡದೆ ಸುಳ್ಳು ಹೇಳುತ್ತಿದ್ದಾರೆ. ಅವರ ತಾಳಕ್ಕೆ ಕುಣಿಯುವ ಬಿಜೆಪಿ ಅವರು 7 ಕೋಟಿ ಕನ್ನಡಿಗರಿಗೆ ಮಾಡುತ್ತಿರುವ ದ್ರೋಹ ಎಂದರು. ಅದಕ್ಕಾಗಿಯೇ ನಾವು ಸರ್ವೋಚ್ಚ ನ್ಯಾಯಾಲಯಕ್ಕೆ ಹೋಗಿದ್ದೇವೆ. ಕಾನೂನಿನಲ್ಲಿ ಒಂದು ತಿಂಗಳೊಳಗೆ ಪರಿಹಾರ ಕೊಡಬೇಕೆಂದಿದ್ದರೂ ನಮಗೆ ಪರಿಹಾರ ನೀಡಿಲ್ಲ ಎಂದರು.

ಕರ್ನಾಟಕಕ್ಕೆ ಅನ್ಯಾಯ ಮಾಡುತ್ತಿರುವ ಬಿಜೆಪಿಗೆ ಮತ ಹಾಕಬೇಕೆ*

ಕರ್ನಾಟಕಕ್ಕೆ ಅನ್ಯಾಯ ಮಾಡುತ್ತಿರುವ ಬಿಜೆಪಿಗೆ ಮತ ಹಾಕಬೇಕೆ ಎಂದು ಕೇಳಿದರು. ಬಿಜೆಪಿ ತುಟಿ ಬಿಚ್ಚದ ಸಂಸದರದ್ದು ಬರೀ ಪ್ರಲಾಪ. ಮಕ್ಕಳ ಆಸ್ಪತ್ರೆ, ಮೈಸೂರು ಜಿಲ್ಲಾ ಆಸ್ಪತ್ರೆ, ಮೈಸೂರು– ಬೆಂಗಳೂರು ಕಾರಿಡಾರ್, ಕಾಲೇಜು, ಹಾಸ್ಟೆಲ್‌ಗಳನ್ನು ಜಿಲ್ಲಾಧಿಕಾರಿಗಳ ಕಚೇರಿ ಕಟ್ಟಿಸಿದ್ದು ನಾವು. ಬಿಜೆಪಿಯವರು ಏನೂ ಮಾಡಿಲ್ಲ ಎಂದರು.

6ನೇ ಪುಟಕ್ಕೆ

ಚುಟುಕು ಸುದ್ದಿ

ಸುಮಲತಾಗೆ ಸೂಕ್ತ ಸ್ಥಾನಮಾನ ಸಿಗಲಿದೆ: ಯಡಿಯೂರಪ್ಪ

ಬೆಳಗಾವಿ: ಮಂಡ್ಯ ಕ್ಷೇತ್ರದಿಂದ ಹೆಚ್ಡಿ ಕುಮಾರಸ್ವಾಮಿ ಸ್ಪರ್ಧಿಸುವುದು ಖಚಿತವಾಗಿರುವುದರಿಂದ ಸುಮಲತಾ ಅವರೊಂದಿಗೆ ದೆಹಲಿ ವರಿಷ್ಠರು ಮಾತಾಡಲಿದ್ದಾರೆ, ಅವರಿಗೆ ಸೂಕ್ತ ಸ್ಥಾನಮಾನ ಖಂಡಿತವಾಗಿಯೂ ನೀಡಲಾಗುತ್ತದೆ ಎಂದು ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ಹೇಳಿದ್ದಾರೆ.

ಕೇಂದ್ರ ಸರ್ಕಾರ ರಾಜ್ಯಕ್ಕೆ ಬರ ಪರಿಹಾರ ನಿಧಿ ಇದುವರೆಗೆ ಬಿಡುಗಡೆ ಮಾಡಿಲ್ಲ ಎಂದು ಕಾಂಗ್ರೆಸ್ ಹೇಳುತ್ತಿರುವ ಬಗ್ಗೆ ಕೇಳಿದ ಪ್ರಶ್ನೆಗೆ ಅವರು, ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ವಿಷಯದ ಬಗ್ಗೆ ಈಗಾಗಲೇ ಸ್ಪಷ್ಟೀಕರಣ ನೀಡಿದ್ದಾರೆ ಎಂದು ಹೇಳಿದ್ದಾರೆ.

ಶಿವರಾಜ್ ಕುಮಾರ್ ಸಿನಿಮಾ ಮೇಲಿಲ್ಲ ನಿರ್ಬಂಧ: ಚುನಾವಣಾ ಆಯೋಗ ಸ್ಪಷ್ಟನೆ

ಬೆಂಗಳೂರು: ಗೀತಾ ಶಿವರಾಜ್ ಕುಮಾರ್ ಶಿವಮೊಗ್ಗ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಟಿಕೆಟ್ ಪಡೆದು ಸ್ಪರ್ಧೆಗೆ ಇಳಿದಿದ್ದಾರೆ. ಶಿವರಾಜ್ ಕುಮಾರ್ ಅವರು ಪತ್ನಿ ಪರವಾಗಿ ನಿರಂತರವಾಗಿ ಪ್ರಚಾರ ಮಾಡುತ್ತಿದ್ದಾರೆ. ಅವರು ಪ್ರಭಾವಿ ವ್ಯಕ್ತಿ ಆಗಿರುವುದರಿಂದ ಅವರು ನಟಿಸಿದ ಸಿನಿಮಾ, ಜಾಹೀರಾತುಗಳ ಮೇಲೆ ಬ್ಯಾನ್ ಹೇರುವಂತೆ ಚುನಾವಣಾ ಆಯೋಗಕ್ಕೆ ಮನವಿ ಸಲ್ಲಿಕೆ ಆಗಿತ್ತು. ಸಿನಿಮಾಗಳ ಮೇಲೆ ಬ್ಯಾನ್ ಹೇರಲು ಸಾಧ್ಯವಿಲ್ಲ ಎಂದು ಚುನಾವಣಾ ಆಯೋಗ ಸ್ಪಷ್ಟನೆ ನೀಡಿದೆ. ಚುನಾವಣೆಗೆ ಸ್ಪರ್ಧಿಸುವ ಅಥವಾ ಪ್ರಚಾರ ಮಾಡುವ ನಟರನ್ನು ಒಳಗೊಂಡ ಸಿನಿಮಾಗಳ ಪ್ರದರ್ಶನವನ್ನು ಸರ್ಕಾರದ ಹಣದಿಂದ ನಡೆಸಲ್ಪಡುವ ದೂರದರ್ಶನದಲ್ಲಿ ಮಾತ್ರ ನಾವು ನಿಷೇಧಿಸಬಹುದು. ಖಾಸಗಿ ಟಿವಿ ಚಾನೆಲ್‌ಗಳು ಮತ್ತು ಸಿನಿಮಾ ಥಿಯೇಟರ್ ಗಳಲ್ಲಿ ವಾಣಿಜ್ಯ ಪ್ರದರ್ಶನಗಳನ್ನು ನಿಲ್ಲಿಸಲು ಸಾಧ್ಯವಿಲ್ಲ' ಎಂದು ಕರ್ನಾಟಕದ ಮುಖ್ಯ ಚುನಾವಣಾಧಿಕಾರಿ ಮನೋಜ್ ಕುಮಾರ್ ಮೀನಾ ಹೇಳಿದ್ದಾರೆ.

ರಾಜ್ಯದ ಹಲವಡೆ ಲೋಕಾಯುಕ್ತ ದಾಳಿ: ಪಿಡಿಓ ವಶಕ್ಕೆ

ಬೆಂಗಳೂರು: ಅಕ್ರಮ ಆಸ್ತಿ ಗಳಿಕೆ ಆರೋಪದ ಹಿನ್ನೆಲೆಯಲ್ಲಿ ಲೋಕಾಯುಕ್ತ ಅಧಿಕಾರಿಗಳು ಬೆಳ್ಳಂ ಬೆಳಿಗ್ಗೆ ರಾಜ್ಯದ ಹಲವಡೆ ದಾಳಿ ಮಾಡಿದ್ದಾರೆ. ರಾಮನಗರ ತಾಲೂಕಿನ ಬಿಡದಿಯ ಮಂಚನಾಯಕನಹಳ್ಳಿ ಗ್ರಾಮ ಪಂಚಾಯತಿಯ ಪಿಡಿಓ ಯತೀಶ್ ಚಂದ್ರ ಮನೆ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ಮಾಡಿದ್ದಾರೆ. ಈಗಲ್ಟನ್ ರೆಸಾರ್ಟ್‌ನಲ್ಲಿ ಪಿಡಿಓ ಯತೀಶ್‌ನನ್ನು ಅಧಿಕಾರಿಗಳು ವಶಕ್ಕೆ ಪಡೆದುಕೊಂಡು ವಿಚಾರಣೆ ನಡೆಸಿದ್ದಾರೆ.

ಸರ್ಕಾರಿ ಪ್ರಥಮ ದರ್ಜೆ ಕಾಲೇಜು ವಿದ್ಯಾರ್ಥಿಗಳ ಕುಲ್ಲಂ..ಕುಲ್ಲ..! ಅಶ್ಲೀಲ ವರ್ತನೆ ನೋಡಿ ಸಾರ್ವಜನಿಕರಿಂದ ವ್ಯಾಪಕ ಆಕ್ರೋಶ..!

■ ಕಾಯಕಯೋಗಿ ಸುದ್ದಿ

ನಂಜನಗೂಡು : ಹಡೆದ ಮಕ್ಕಳನ್ನು ತಂದೆ ತಾಯಿ ತಮ್ಮ ಕಷ್ಟಗಳನ್ನೆಲ್ಲ ಬದಿಗೊತ್ತಿ ಉತ್ತಮ ವಿದ್ಯಾಭ್ಯಾಸ ಮಾಡಿ ಸರ್ಕಾರಿ ಕೆಲಸ ಗಿಟ್ಟಿಸಿಕೊಳ್ಳಲಿ ಎಂದು ಬೆಟ್ಟದಷ್ಟು ಆಸೆ ಹೊತ್ತು ಕಾಲೇಜಿಗೆ ಕಳುಹಿಸುತ್ತಾರೆ.

ಆದರೆ, ದುರಂತ ಕಾಲೇಜಿಗೆ ಬಂದ ವಿದ್ಯಾರ್ಥಿಗಳು ಪಾಠ ಪ್ರವಚನಕ್ಕೆ ಬ್ರೇಕ್ ಹಾಕಿ ಗೆಳೆಯನ ಜೊತೆ ಸೇರಿ ಲವ್ವಿ ಡವ್ವಿ ಎಂದು ತುಟಿಗೆ ತುಟಿ ಕಚ್ಚುತ್ತಾರೆ. ಈ ದೃಶ್ಯವನ್ನು ನೋಡಿದ ಸಾರ್ವಜನಿಕರು ನಮ್ಮ ಮಕ್ಕಳನ್ನಂತೂ ಕಾಲೇಜಿಗೆ ಕಳಿಸುವುದೇ ಬೇಡ ಎಂಬ ಗಟ್ಟಿ ನಿರ್ಧಾರಕ್ಕೆ ಬಂದಿದ್ದಾರೆ. ಹಾಗಾದ್ರೆ ಆ ಘಟನೆ ನಡೆಯುತ್ತಿರುವುದು ಎಲ್ಲಿ ಅಂತೀರಾ..! ನಂಜನಗೂಡಿನ ಮಿನಿ ವಿಧಾನಸೌಧದ ಹಿಂಬದಿಯಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ದಿನನಿತ್ಯ ನಡೆಯುತ್ತಿರುವ ಕಾಲೇಜು ವಿದ್ಯಾರ್ಥಿಗಳ ಕುಲ್ಲಂ ಕುಲ್ಲ.. ವರ್ತನೆ ನೋಡಿ ಸಾರ್ವಜನಿಕರೇ ಬೆಚ್ಚಿ ಬಿದ್ದಿದ್ದಾರೆ. ದಿನನಿತ್ಯ ಸಾವಿರಾರು ಜನರು ಮಿನಿ ವಿಧಾನಸೌಧಕ್ಕೆ ತಮ್ಮ ಕೆಲಸ ಕಾರ್ಯಗಳಿಗೆ ಆಗಮಿಸುತ್ತಾರೆ. ಇದನ್ನು ಲೆಕ್ಕಿಸದೆ ಕಾಲೇಜು ವಿದ್ಯಾರ್ಥಿಗಳು ಮೈ ಮರೆತು ತಮ್ಮ ಅಶ್ಲೀಲ ವರ್ತನೆಯನ್ನು ತೋರುತ್ತಿದ್ದಾರೆ. ಇದನ್ನು ನೋಡಿದ ಸಾರ್ವಜನಿಕರು ಚಿ...ಥೂ ಎನ್ನುವ ಮಟ್ಟಕ್ಕೆ ಬಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮಹಿಳಾ ಪ್ರಾಂಶುಪಾಲಯ ಬೇಜವಾಬ್ದಾರಿ ಕಾರ್ಯ ವೈಖರಿಯ ವಿರುದ್ಧ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಶಾಲಾ ಕಾಲೇಜುಗಳ ಕಡೆ ಬರುವ ಬೀಟ್ ಪೊಲೀಸರು ಕಣ್ಮುಚ್ಚಿ ಕುಳಿತಿದ್ದಾರೆ. ಕೂಡಲೇ ಸರ್ಕಾರಿ ಕಾಲೇಜು ವ್ಯವಸ್ಥೆಯನ್ನು ಸರಿಪಡಿಸಲಾಗದ ಪ್ರಾಂಶುಪಾಲರ ವಿರುದ್ಧ ಕ್ರಮ ಕೈಗೊಳ್ಳಬೇಕಿದೆ.


ಸಿಇಸಿ ಸಭೆಗೂ ಮುನ್ನ ಸುನೀಲ್‌ಬೋಸ್ ನಾಮಪತ್ರ ಸಲ್ಲಿಕೆ ಡೇಟ್ ಫಿಕ್ಸ್

■ ಕಾಯಕಯೋಗಿ ಸುದ್ದಿ

ಚಾಮರಾಜನಗರ: ಕಾಂಗ್ರೆಸ್ ಸಿಇಸಿ ಸಭೆಗೂ ಮುನ್ನವೇ ಸಚಿವ ಎಚ್.ಸಿ. ಮಹದೇವಪ್ಪ ಪುತ್ರ ಸುನೀಲ್ ಬೋಸ್ ಅವರ ನಾಮಪತ್ರ ಸಲ್ಲಿಸುವ ದಿನಾಂಕ ಫಿಕ್ಸ್ ಆಗಿದ್ದು, ಏ.3 ರಂದು ಅವರು ನಾಮಪತ್ರ ಸಲ್ಲಿಸಲಿದ್ದಾರೆ ಎಂದು ಮೈಸೂರು ಜಿಲ್ಲಾ ಕಾಂಗ್ರೆಸ್ ಸಮಿತಿ ಪ್ರಚಾರದ ಪ್ರವಾಸಪಟ್ಟಿ ಹೊರಡಿಸಿದೆ.

ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ. ಶಿವಕುಮಾರ್ ಹಾಗೂ ಸಚಿವರ ಅನುಮತಿಯೊಂದಿಗೆ ಪ್ರವಾಸಪಟ್ಟಿ ಹೊರಡಿಸಿದ್ದು, ಸುನೀಲ್ ಬೋಸ್ ಚಾಮರಾಜನಗರ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಎಂದು ಹೆಸರಿಸಲಾಗಿದೆ. ಇಂದು ಸಂಜೆ ದೆಹಲಿಯಲ್ಲಿ ಕಾಂಗ್ರೆಸ್ ಸಿಇಸಿ ಸಭೆ ನಡೆಯಲಿದ್ದು, ಬಳಿಕ ಅಧಿಕೃತವಾಗಿ ಟಿಕೆಟ್ ಘೋಷಣೆ ಮಾಡಲಾಗುವುದು ಎಂದು ತಿಳಿದುಬಂದಿದೆ.

ಚಾಮರಾಜನಗರ ಲೋಕಸಭಾ ಕ್ಷೇತ್ರಕ್ಕೆ ಒಳಪಡುವ ಮೈಸೂರಿನ ನಾಲ್ಕು ವಿಧಾನಸಭಾ



ಕ್ಷೇತ್ರಗಳಲ್ಲಿ ಏ.1 ಹಾಗೂ 2 ರಂದು ಕಾರ್ಯಕರ್ತರ ಸಭೆ ನಡೆಸಲಿದ್ದು, ಏ.3ರ ಬೆಳಗ್ಗೆ 11ಕ್ಕೆ ಸುನಿಲ್ ಬೋಸ್ ನಾಮಪತ್ರ ಸಲ್ಲಿಸಲಿದ್ದಾರೆ ಎಂದು ಪ್ರವಾಸ ಪಟ್ಟಿಯಲ್ಲಿ ತಿಳಿಸಲಾಗಿದೆ. ತೀವ್ರ ಕಗ್ಗಂಟಾಗಿ ಉಳಿದಿದ್ದ ಕಾಂಗ್ರೆಸ್ಸಿನ ಟಿಕೆಟ್ ಕೊನೆಗೂ ತಮ್ಮ ಪುತ್ರನಿಗೆ ಕೊಡಿಸುವಲ್ಲಿ ಮಹದೇವಪ್ಪ ಯಶಸ್ವಿಯಾಗಿದ್ದಾರೆ. ಇನ್ನು, ಚಾಮರಾಜನಗರದ ಕೈ ಶಾಸಕರು ಈಗಾಗಲೇ ಮುಖಂಡರ ಸಭೆ ನಡೆಸಿ ಕಾಂಗ್ರೆಸ್ ಅಭ್ಯರ್ಥಿಯನ್ನು ಗೆಲ್ಲಿಸಲು ರಣತಂತ್ರ ಹೆಣೆದಿದ್ದಾರೆ.



ಕಾರು ಪಲ್ಟಿ ; ಓರ್ವ ಸಾವು ಮೂವರು ಗಂಭೀರ ಗಾಯ

■ ಕಾಯಕಯೋಗಿ ಸುದ್ದಿ

ಶ್ರೀರಂಗಪಟ್ಟಣ: ರಸ್ತೆ ಅಪಘಾತದಲ್ಲಿ ಕಾರೊಂದು ಮಗುಚಿ ಬಿದ್ದ ಪರಿಣಾಮ ಸ್ಥಳದಲ್ಲೇ ಒಬ್ಬರು ಮೃತಪಟ್ಟು, ಮೂವರಿಗೆ ಗಂಭೀರವಾಗಿ ಗಾಯವಾಗಿರುವ ಘಟನೆ ತಾಲೂಕಿನ ಟಿ.ಎಂ.ಹೊಸೂರು ಗೇಟ್ ಬಳಿಯ ಬೆಂಗಳೂರು–ಮೈಸೂರು ಹೆದ್ದಾರಿಯ ಸರ್ವಿಸ್ ರಸ್ತೆಯಲ್ಲಿ ಸಂಭವಿಸಿದೆ.

ಬೆಂಗಳೂರಿನ ನಾಗರಬಾವಿ ನಿವಾಸಿ ವೆಂಕಟೇಶ್ (50) ಮೃತ ವ್ಯಕ್ತಿಯಾಗಿದ್ದು, ಬೆಂಗಳೂರಿನಿಂದ ಮೈಸೂರು ಕಡೆಗೆ ಬಲೆನೋ ಕಾರಿನಲ್ಲಿ ತೆರಳುತ್ತಿದ್ದ ವೇಳೆ ಟಿ.ಎಂ ಹೊಸೂರು ಬಳಿಯ ಸರ್ವಿಸ್ ರಸ್ತೆಯಲ್ಲಿ ಅಡ್ಡಲಾಗಿ ವಾಹನವೊಂದು ಆಗಮಿಸಿದೆ. ಈ ವೇಳೆ ಕಾರನ್ನು ತಮ್ಮ ಎಡಬದಿಗೆ ಸರಿಸುತ್ತಿದ್ದಂತೆ ಸರ್ವಿಸ್ ರಸ್ತೆಯಿಂದ ಕೆಳಗೆ ಮಗುಚಿ ಬಿದ್ದು ಈ ಘಟನೆ ಸಂಭವಿಸಿದೆ.

ಗಂಭೀರವಾಗಿ ಗಾಯಗೊಂಡಿರುವ ಮೂರು ಮಂದಿಯನ್ನು ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಈ ಸಂಬಂಧ ಶ್ರೀರಂಗಪಟ್ಟಣ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮಾಜಿ ಪ್ರಧಾನಿ ದೇವೇಗೌಡರ ಸೋಲಿಗೆ ನಾನು ಕಾರಣನಲ್ಲ
ಹಾಲಿ ಸಂಸದನಾಗಿ ನನ್ನ ಕ್ಷೇತ್ರವನ್ನು ತ್ಯಾಗ ಮಾಡಿದ್ದೇನೆ: ಎಸ್‌ಪಿಎಂ

■ ಕಾಯಕಯೋಗಿ ಸುದ್ದಿ

ತುಮಕೂರು : ಕಲ್ಪತರು ನಾಡು ಎಂದು ಕರೆಯುವ ತುಮಕೂರ

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ-2

28-03-2024

ಮಂಡ್ಯ

ಹೊಳಲು ಗ್ರಾಮದಲ್ಲಿ ವಿಜೃಂಭಣೆಯ ದೊಡ್ಡಮ್ಮತಾಯಿ ಹಬ್ಬ



ಮಂಡ್ಯ : ತಾಲ್ಲೂಕಿನ ಹೊಳಲು ಗ್ರಾಮದ ಗ್ರಾಮದೇವತೆ ಶ್ರೀದೊಡ್ಡಮ್ಮತಾಯಿಯ ವಾರ್ಷಿಕ ಹಬ್ಬ ಸಡಗರ ಸಂಭ್ರಮ ಮತ್ತು ವಿಜೃಂಭಣೆಯಿಂದ ಜರುಗಿತು.

ಹಬ್ಬದ ಅಂಗವಾಗಿ ಇಡೀ ಗ್ರಾಮವೇ ವಿದ್ಯುತ್ ದೀಪಾಲಂಕಾರಗಳಿಂದ ಕಂಗೊಳಿಸಿದ್ದು, ಪ್ರತಿ ಮನೆಯ ಮುಂದೆಯೂ ಮಹಿಳೆಯರು ಚಿತ್ತಾಕರ್ಷಕ ರಂಗೋಲಿ ಬಿಡಿಸಿ ಸಿಂಗರಿಸಿದ್ದರು. ಎಲ್ಲೆಡೆ ತಳಿರು ತೋರಣ, ಬಾಳೆಕಂದು ಹೂಗಳಿಂದ ಶೃಂಗಾರಗೊಂಡ ಬೀದಿಗಳು ಹಬ್ಬದ ಸಂಭ್ರಮವನ್ನು ಇಮ್ಮಡಿಗೊಳಿಸಿತ್ತು.

ಹಬ್ಬದ ಅಂಗವಾಗಿ ಮಹಿಳೆಯರು ತಂಬಿಟ್ಟಿನ ಆರತಿಯೊಂದಿಗೆ ಬೃಹತ್ ಮೆರವಣಿಗೆಯಲ್ಲಿ ತೆರಳಿ, ತಮಟೆ ನಗಾರಿಯ ಸದ್ದಿನೊಂದಿಗೆ ಗ್ರಾಮದ ಬಲಮುರಿ ಗಣಪತಿ ದೇವಾಲಯ ಪ್ರದಕ್ಷಿಣೆ ಮಾಡಿ ಶ್ರೀದೊಡ್ಡಮ್ಮತಾಯಿ ದೇವಾಲಯದ ಮುಂಭಾಗಕ್ಕೆ ಆಗಮಿಸಿದರು. ಬಳಿಕ ಸಾಂಪ್ರದಾಯಿಕ ಪೂಜಾ ವಿಧಿ ವಿಧಾನಗಳನ್ನು ನೆರವೇರಿಸಿದ ಬಳಿಕ ಆರತಿ ಬೆಳಗುವ ಮೂಲಕ ಮಹಿಳೆಯರು ತಾವು ಕಟ್ಟಿಕೊಂಡಿದ್ದ ಹರಕೆಯನ್ನು ತೀರಿಸಿದರು. ಈ ವೇಳೆ ಮಾಜಿ ಶಾಸಕ ಎಚ್.ಬಿ.ರಾಮು, ಮುಖಂಡರಾದ ಜಟ್ಟಿ ಕುವಾರ್, ಲಿಂಗಪ್ಪ, ಎಸ್.ಸಿ. ಲಿಂಗರಾಜು, ವಿಜಯ್ ಕುಮಾರ್, ಶ್ರೀಧರ್, ಎಚ್.ಡಿ.ರವಿ, ಚೇತನ್, ನಂದೀಶ್ ಪೂಜಾರಿ ಶಿವರಾಜ್, ಮಾದಯ್ಯ, ಪುಟ್ಟಸ್ವಾಮಿ, ಪೂಜಾರಿ ಶಂಕರ್, ನಾರಾಯಣಪ್ಪ ಪಾಲ್ಗೊಂಡಿದ್ದರು.

ಸೆಕ್ಟರ್ ಅಧಿಕಾರಿಗಳು ಮತಗಟ್ಟೆಗೆ 4-5 ಬಾರಿ ಭೇಟಿ ನೀಡಿ

■ ಕಾಯಕಯೋಗಿ ಸುದ್ದಿ

ಮಂಡ್ಯ : ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ನೇಮಕವಾಗಿರುವ ಸೆಕ್ಟರ್ ಅಧಿಕಾರಿಗಳು ತಮ್ಮ ವ್ಯಾಪ್ತಿಗೆ ಬರುವ ಮತಗಟ್ಟೆಗಳನ್ನು ಪಟ್ಟಿ ಮಾಡಿಕೊಂಡು ಕನಿಷ್ಟ 4 ರಿಂದ 5 ಬಾರಿ ಭೇಟಿ ನೀಡಿ ಪರಿಶೀಲನೆ ನಡೆಸಿ ಎಂದು ಜಿಲ್ಲಾಧಿಕಾರಿ ಡಾ:ಕುಮಾರ ಅವರು ತಿಳಿಸಿದರು.

ಅವರು ಇಂದು ಜಿಲ್ಲಾ ಪಂಚಾಯತ್ ಕಾವೇರಿ ಸಭಾಂಗಣದಲ್ಲಿ ನಡೆದ ಸೆಕ್ಟರ್ ಅಧಿಕಾರಿಗಳ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಮತಗಟ್ಟೆಗಳಲ್ಲಿ ಶೌಚಾಲಯ, ಕುಡಿಯುವ ನೀರು, ರ್ಯಾಂಪ್, ವಿದ್ಯುತ್ ದೀಪ ಸೇರಿದಂತೆ ಎಲ್ಲಾ ಮೂಲಭೂತ ವ್ಯವಸ್ಥೆಗಳು ಇರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳಿ ಎಂದರು.

ಸೆಕ್ಟರ್ ಅಧಿಕಾರಿಗಳಿಗೆ ಚುನಾವಣಾ ಸಂದರ್ಭದಲ್ಲಿ ವಿಶೇಷವಾಗಿ ದಂಡಾಧಿಕಾರಿಗಳ ಅಧಿಕಾರ ನೀಡಲಾಗಿರುತ್ತದೆ. ತಮ್ಮ ವ್ಯಾಪ್ತಿಯಲ್ಲಿ ಮಾದರಿ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ನೋಡಿಕೊಳ್ಳಿ, ಯಾವುದೇ ದೂರುಗಳು ಬಂದಲ್ಲಿ ತಕ್ಷಣ



ಪರಿಹರಿಸಿ ಎಂದರು.

ಕಳೆದ ಬಾರಿ ಕಡಿಮೆ ಮತದಾನವಾಗಿರುವ ಮತಗಟ್ಟೆಗಳಲ್ಲಿ ವ್ಯಾಪ್ತಿಯಲ್ಲಿ ಸ್ವೀಪ್ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಿ, ದುರ್ಬಲ ಮತಗಟ್ಟೆಗಳು ಎಂದು ಗುರುತಿಸಿರುವ ಮತಗಟ್ಟೆಗಳ ವ್ಯಾಪ್ತಿಯ ಮತದಾರರೊಂದಿಗೆ ಸಭೆ ನಡೆಸಿ ಮತದಾನ ಪ್ರಕ್ರಿಯೆಯಲ್ಲಿ ಪಾಲ್ಗೊಂಡು ನೈತಿಕ ಮತದಾನ ಮಾಡುವಂತೆ ಆತ್ಮಸ್ಥೈರ್ಯ ತುಂಬಿ ಎಂದರು.

ಸೆಕ್ಟರ್ ಅಧಿಕಾರಿಗಳು ತಮ್ಮ ವಾಹನದಲ್ಲಿ ಅವಶ್ಯಕವಿರುವ ಕಡೆ ಬದಲಿ ಇ.ವಿ.ಎಂ. ವ್ಯವಸ್ಥೆ ಮಾಡಬೇಕಿರುತ್ತದೆ. ಆದರಿಂದ ಕಡ್ಡಾಯವಾಗಿ ಚುನಾವಣಾ ತುರ್ತು ಹಾಗೂ ಸೆಕ್ಟರ್ ಅಧಿಕಾರಿಗಳು ಎಂದು ನಾಮಪಲಕವನ್ನು ಕಡ್ಡಾಯವಾಗಿ ಅಳವಡಿಸಿಕೊಳ್ಳಬೇಕು. ತಮ್ಮ ವಾಹನವನ್ನು ಮತದಾನದ ದಿನದಂದು ಯಾವುದೇ ಕಾರಣಕ್ಕೂ ಖಾಸಗಿ ಸ್ಥಳಗಳಲ್ಲಿ ನಿಲುಗಡೆ ಮಾಡದಂತೆ ಎಚ್ಚರಿಕೆ ವಹಿಸಿ ಎಂದರು.

ತಮ್ಮ ವ್ಯಾಪ್ತಿಯಲ್ಲಿ ಬರುವ ಮತಗಟ್ಟೆಗಳ ರೂಟ್ ಮ್ಯಾಪ್, ಸಂವಾಹನ ಯೋಜನೆ ಸಿದ್ಧಪಡಿಸಿಕೊಳ್ಳಿ. ಒಂದು ಮತಗಟ್ಟೆಯಿಂದ ಇನ್ನೊಂದು ಮತಗಟ್ಟೆಗೆ ಇರುವ ಉತ್ತಮ ಹಾಗೂ ಹತ್ತಿರದ ಮಾರ್ಗವನ್ನು ತಿಳಿದುಕೊಳ್ಳಿ. ಇದರಿಂದ ಮತದಾನದ ದಿನದಂದು ಕೆಲಸ ಸುಲಭವಾಗುತ್ತದೆ ಎಂದು ಕಿವಿಮಾತು ಹೇಳಿದರು.

ಮಾಸ್ಟರ್ ಟ್ರೈನರ್ಸ್ ಹಾಗೂ ಸೆಕ್ಟರ್ ಅಧಿಕಾರಿಗಳು ಒಟ್ಟಿಗೆ ನಿಗದಿ ಪಡಿಸುವ ದಿನದಂದು ಪಿ.ಆರ್.ಓ, ಪಿ.ಓ ಗಳಿಗೆ ತರಬೇತಿ ನೀಡಬೇಕು ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎನ್.ಯತೀಶ್ ಮಾತನಾಡಿ, ಪ್ರತಿ ಸೆಕ್ಟರ್ ಅಧಿಕಾರಿಗಳಿಗೆ ಒಬ್ಬರೂ ಆರ್ಮಡ್ ಪೊಲೀಸ್ ಮೆನ್ ನಿಯೋಜಿಸಲಾಗುವುದು. ಮತದಾನದ ದಿನದಂದು ಯಾವುದೇ ಗೊಂದಲಕ್ಕೂ ಆಸ್ಪದ ನೀಡದೇ ಎಚ್ಚರಿಕೆಯಿಂದ ಕಾರ್ಯನಿರ್ವಹಿಸಿ ಎಂದರು. ಚುನಾವಣಾ ಮಾಸ್ಟರ್ ಟ್ರೈನರ್ ಶ್ರೀನಿವಾಸ್ ಅವರು ಸೆಕ್ಟರ್ ಅಧಿಕಾರಿಗಳಿಗೆ ತರಬೇತಿ ನೀಡಿದರು.

ನಾಲೆಗಳಿಗೆ ನೀರು ಹರಿಸುವಂತೆ ಒತ್ತಾಯ

ಶ್ರೀರಂಗಪಟ್ಟಣ: ಜನ-ಜಾನುವಾರು ಹಾಗೂ ಬೆಳೆದು ನಿಂತಿರುವ ರೈತರ ಬೆಳೆಗಳನ್ನು ಉಳಿಸಿಕೊಳ್ಳಲು ಅಣೆಕಟ್ಟೆ ಮೂಲಕ ಒಂದೆರಡು ದಿನಗಳಲ್ಲಿ ರಾಜ್ಯ ಸರ್ಕಾರ ನೀರು ಹರಿಸದಿದ್ದರೆ ಉಗ್ರ ಹೋರಾಟ ನಡೆಸುವುದಾಗಿ ಬಿಜೆಪಿ ತಾಲೂಕು ಅಧ್ಯಕ್ಷ ಪೀಹಳ್ಳಿ ರಮೇಶ್ ಎಚ್ಚರಿಸಿದ್ದಾರೆ.

ಈ ಸಂಬಂಧ ರಮೇಶ್ ಪ್ರತಿಕ್ರಿಯಿಸಿ, ಭೀಕರ ಬರಗಾಲದಿಂದಾಗಿ ನೀರಿಲ್ಲದೆ ಜನರ ಬದುಕು ಹೀನಾಯ ಸ್ಥಿತಿಗೆ ತಲುಪಿದೆ, ಮಳೆ ಹಾಗೂ ನಾಲೆಗಳಲ್ಲಿ ನೀರಿಲ್ಲದೆ ಬಹುತೇಕ ಬೆಳೆಗಳು ಒಣಗಿ ಹೋಗಿದ್ದು ಸದ್ಯ ಬೆಳೆದು ನಿಂತಿರುವ ರೈತರ ಬೆಳಗಳು ಸಹ ಕೈ ತಪ್ಪಿ ಹೋಗುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಕೆಆರ್‌ಎಸ್ ಅಣೆಕಟ್ಟೆಯಲ್ಲಿ 86 ಅಡಿ ನೀರು ಸಂಗ್ರಹವಾಗಿದ್ದರೂ ಸಹ ಸರ್ಕಾರ ಕುಡಿಯುವ ಬಳಕೆಗೆ ಎಂದು ನೆಪಹೇಳಿ ಕದ್ದು ಮುಚ್ಚಿ ತಮಿಳುನಾಡಿಗೆ ನೀರು ಹರಿಸುವ ಮೂಲಕ ಸ್ಥಳೀಯ ರೈತರ ಹಿತಕಾಯದೆ ವಂಚನೆ ಮಾಡಿದೆ. ಸರ್ಕಾರ ಕಟ್ಟು ಪದ್ದತಿಯಲ್ಲಿ ನೀರು ಬಿಡಲಿದೆ ಎಂಬ ಭರವಸೆಯಿಂದ ರೈತರು ತಮ್ಮ ಜಮೀನುಗಳಲ್ಲಿ ಬೆಳೆದಿದ್ದ ಕಬ್ಬಿನ ಬೆಳೆಗಳು ಇನ್ನೇನು ಎರಡು ತಿಂಗಳಲ್ಲಿ ಕಟಾವು ಹಂತಕ್ಕೆ ಬರಲಿದ್ದು, ನೀರಿಲ್ಲದೆ ಒಣಗುತ್ತಿವೆ. ಕೇವಲ ಎರಡು ಕಟ್ಟು ನೀರು ಕೊಟ್ಟರೆ ರೈತರು ಬದುಕಿಕೊಳ್ಳಲಿದ್ದಾರೆ. ಅಣೆಕಟ್ಟೆಯಲ್ಲಿ 75 ಅಡಿ ವರೆವಿಗೂ ಬೆಳೆಗಳಿಗೆ ನೀರು ಹರಿಸಬಹುದು ಎಂಬ ಕಾನೂನು ಇದೆ. ಈ ಹಿಂದೆ ಹಲವು ಸರ್ಕಾರಗಳು 75 ಅಡಿ ವರೆವಿಗೂ ಬೆಳೆಗಳಿಗೆ ನೀರು ಕೊಟ್ಟಿರುವ ನಿದರ್ಶನಗಳಿವೆ. ಆದರೆ ಕಾಂಗ್ರೆಸ್ ಸರ್ಕಾರ ಇದನ್ನ ಕಡೆಗಣಿಸಿ, ಸ್ಥಳೀಯ ರೈತರ ಹಿತಕಾಯದೆ ತಮಿಳುನಾಡಿಗೆ ನೀರು ಹರಿಸುತ್ತಿರುವುದು ಸರಿಯಲ್ಲ ಎಂದು ಕಿಡಿಕಾರಿದರು.

ಅಲ್ಲದೆ ತೆಂಗು, ಅಡಿಕೆ, ಬಾಳೆ ಸೇರಿದಂತೆ ಇತರೆ ದೀರ್ಘಾವಧಿಯ ಬೆಳೆಗಳು ಸಹ ನೀರಿಲ್ಲದೆ ಒಣಗಿ ಬೀಳುವ ಪರಿಸ್ಥಿತಿಗೆ ತಲುಪಿವೆ. ಇದರಿಂದಾಗಿ ತಾಲೂಕಿನದ್ಯಂತ ಅಸಂಖ್ಯಾತ ರೈತರು ತಮ್ಮ ಬೆಳೆ ನಷ್ಟದಿಂದಾಗಿ ಸಂಕಷ್ಟದ ಸುಳಿಗೆ ಸಿಲುಕುವಂತಾಗಿದೆ. ಇನ್ನು ರಾಜ್ಯ ಸರ್ಕಾರ ಬರಪರಿಹಾರ ಎಕರೆಗೆ 2 ಸಾವಿರ ರು. ನೀಡಿರುವುದಾಗಿ ಹೇಳುತ್ತಿದೆ. ಆದರೆ ಯಾವೊಬ್ಬ ರೈತರಿಗೂ ಸಹ ಬರಪರಿಹಾರದ ಹಣ ತಲುಪಿಲ್ಲ. ಆದರೂ ಎಲ್ಲಾ ರೈತರಿಗೆ 2 ಸಾವಿರ ರು. ಹಣ ತಲುಪಿರುವುದಾಗಿ ಸರ್ಕಾರ ಸುಳ್ಳು ಹೇಳಿ ಜನರನ್ನು ವಂಚಿಸುತ್ತಿದೆ. ರಾಜ್ಯ ಸರ್ಕಾರ ಎಚ್ಚೆತ್ತು ಕಟ್ಟು ಪದ್ದತಿಯಲ್ಲಿ ಸ್ಥಳೀಯ ನಾಲೆಗಳ ಮೂಲಕ ನೀರು ಹರಿಸಬೇಕು ಇಲ್ಲದಿದ್ದಲ್ಲಿ ಮುಂದಿನ ದಿನಗಳಲ್ಲಿ ತಾಲೂಕಿನಾದ್ಯಂತ ಉಗ್ರ ಹೋರಾಟ ನಡೆಸಬೇಕಾಗುತ್ತದೆ ಎಂದು ಎಚ್ಚರಿಸಿದ್ದಾರೆ.

ಜಿಲ್ಲೆಯ ಹಿತ ಕಾಯದ ನೀವು ಕೃಷಿ ಸಚಿವರಾಗಿರಲು ಅನರ್ಹರು

■ ಕಾಯಕಯೋಗಿ ಸುದ್ದಿ

ಮಂಡ್ಯ :ಕನ್ನಂಬಾಡಿ ಅಣೆಕಟ್ಟೆಯಲ್ಲಿ ಸಾಕಷ್ಟು ನೀರು ಲಭ್ಯವಿದ್ದರೂ ನಾಲೆಗಳಿಗೆ ನೀರು ಹರಿಸದ ಹಿನ್ನೆಲೆಯಲ್ಲಿ ಜನ-ಜಾನುವಾರುಗಳು ನರಕಯಾತನೆ ಅನುಭವಿಸುವಂತಾಗಿದೆ. ಕೃಷಿ ಚಟುವಟಿಕೆ ನಾಶವಾಗಿದ್ದು, ಜಿಲ್ಲೆಯ ಹಿತ ಕಾಯದ ನೀವು ಕೃಷಿ ಸಚಿವರಾಗಿರಲು ಅನರ್ಹರು, ಕೂಡಲೇ ರಾಜೀನಾಮೆ ನೀಡಿ, ಅಧಿಕಾರದಿಂದ ಕೆಳಗಿಳಿಯಿರಿ ಎಂದು ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಅವರನ್ನು ಮಾಜಿ ಶಾಸಕ ರವಿಂದ್ರಶ್ರೀಕಂಠಯ್ಯ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಸಿಲ ಬೇಗೆ ತಾರಕಕ್ಕೇರಿದೆ. ಕೆರೆ-ಕಟ್ಟೆಗಳು ಬರಿದಾಗಿವೆ. ಕಳೆದ ಎರಡೂವರೆ ತಿಂಗಳಿಂದ ನಾಲೆಗಳಿಗೆ ನೀರು ಹರಿಸದೆ, ನಾಲ್ಕಾರು ವರ್ಷಗಳಿಂದ ಬೆಳೆದಿರುವ ತೆಂಗು, ಅಡಿಕೆ ಸೇರಿದಂತೆ ಹಲವು ತೋಟಗಾರಿಕೆ ಬೆಳೆಗಳು ಒಣಗುತ್ತಿವೆ. ಕಬ್ಬಿನ ಫಸಲು ಒಣಗಿ ನಿಂತಿದೆ. ಬೆಳೆಗಾರರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಪರಿಸ್ಥಿತಿ ಇದೇ ರೀತಿ ಮುಂದುವರಿದರೆ ರೈತರು ಆತ್ಮಹತ್ಯೆಯ ದಾರಿ ಹಿಡಿಯಬೇಕಾಗುತ್ತದೆ. ಇದು ತಮಗೆ ಅರಿವಿಲ್ಲವೇ ಎಂದು ಪ್ರಶ್ನಿಸಿದರು.

ಕೆ.ಆರ್.ಎಸ್‌ನಲ್ಲಿ ಪ್ರಸ್ತುತ 86.05 ಅಡಿ ಅಂದರೆ 13.09 ಟಿಎಂಸಿಗೂ ಹೆಚ್ಚು ನೀರು ಬಳಕೆಗೆ ಲಭ್ಯವಿದ್ದು, ವಿ.ಸಿ.ನಾಲೆ, ವಿರಿಜಾ, ಮಾದವಮಂತ್ರಿ ಸೇರಿದಂತೆ ಇತರೆ ನಾಲೆಗಳಿಗೆ ನೀರು ಹರಿಸಿದರೆ ಕೇವಲ ಒಂದೂವರೆ ಟಿಎಂಸಿ ಯಷ್ಟು ನೀರು ಸಾಕು. 74 ಅಡಿ ಸಾಮರ್ಥ್ಯದ ನೀರಿದ್ದರೆ ಕೃಷಿ ಚಟುವಟಿಕೆಗೆ ಬಳಸಬಹುದು ಎಂಬ ಕಾನೂನು ಇದೆ. ನೀರನ್ನು ಇಟ್ಟು ಕೊಂಡಿರುವುದಾದರೂ ಏಕೆ? ತಮಿಳುನಾಡಿನವರು ನೀರು ಕೇಳಿದರೆ ಬಿಡಲಿ ಎಂದು ವ್ಯಂಗ್ಯವಾಡಿದರು.

ಬೆಳೆದು ನಿಂತಿರುವ ಬೆಳೆ ಹಾಗೂ ಜಾನುವಾರುಗಳಿಗೆ ಕುಡಿಯಲು ಅಗತ್ಯಕ್ಕೆ ಕೇವಲ 5 ದಿನವಾದರೂ ನಾಲೆಗಳಿಗೆ ನೀರು ಹರಿಕೆರೆ-ಕಟ್ಟೆ ತುಂಬಿಸುವ ಮೂಲಕ ಜನ-ಜಾನುವಾರುಗಳನ್ನು ರಕ್ಷಿಸಬೇಕು.

ಕೃಷಿ ನಂತರದಲ್ಲಿ ಹೈನುಗಾರಿಕೆಯನ್ನೇ ನಂಬಿ ಜೀವನ ಸಾಗಿಸುತ್ತಿರುವ ಜಿಲ್ಲೆಯ ರೈತರು ನೀರಿಲ್ಲದ ಕಾರಣ ಮೇವು ಬೆಳೆ ಬೆಳೆಯಲು ಸಾಧ್ಯವಾಗುತ್ತಿಲ್ಲ. ಇದರಿಂದಾಗಿ ಹೈನುಗಾರಿಕೆ ಮೇಲೆ ತೀವ್ರ ಹೊಡೆತ ಬಿದ್ದಿದೆ. ನೀವು ಜಾನುವಾರುಗಳನ್ನು ಸಾಕಿದ್ದರೆ, ಅದರ ಕಷ್ಟ ಏನೆಂದು ಗೊತ್ತಾಗುತ್ತಿತ್ತು. ನಿಮಗೆ ಇದಾವು ದರ ಅರಿವಿಲ್ಲದ ಕಾರಣ ನೀರು ಹರಿಸುತ್ತಿಲ್ಲ ಎಂದು ತರಾಟೆಗೆ ತೆಗೆದುಕೊಂಡರು.

ಬೆಂಗಾಡಾದ ಕನ್ನಂಬಾಡಿ ಬಯಲು :

ತಮಗೆ ಸಿಕ್ಕಿರುವ ಕೃಷಿ ಖಾತೆಯ ಹುದ್ದೆಯನ್ನು ಸಮರ್ಪಕವಾಗಿ ನಿಭಾಯಿಸಲು ಬಾರದ ನೀವು ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಅವರ ಬಗ್ಗೆ ಟೀಕೆ ಮಾತನಾಡುತ್ತೀರಾ? ಜಿಲ್ಲೆಯ ಅಭಿವೃದ್ಧಿ ಬಗ್ಗೆ ಯೋಚಿಸದೆ ಪ್ರತಿದಿನ ಕೇವಲ ರಾಜಕೀಯ ವನ್ನೇ ಮಾಡುತ್ತೀರಾ? ಮತ ನೀಡಿರುವ ಜನತೆಯನ್ನು ಕಂಡರೆ ನಿಮಗೆ ಭಯವಿಲ್ಲವೇ? ಸ್ವಾರ್ಥವಿಲ್ಲದ ಜಿಲ್ಲೆ ಮಂಡ್ಯ. ಕೃಷಿ ಪ್ರಧಾನ ಜಿಲ್ಲೆ ಮಂಡ್ಯದವರು ಕೃಷಿ ಸಚಿವರಾಗಿದ್ದಾರೆ ಎಂದರೆ ಒಂದು ಕಾಲದಲ್ಲಿ ಹೆಮ್ಮೆ ಇತ್ತು. ಆದರೆ, ನೀವು ನೀರು ಕೊಡದೆ ಹಸಿರು ಜಿಲ್ಲೆಯನ್ನು ಬೆಂಗಾಡಾಗಿ ಪರಿವರ್ತಿಸಿದ್ದೀರಿ? ಇದಕ್ಕೆ ನೀಡು ಕೃಷಿ ಸಚಿವರಾರಬೇಕೆ? ಮಂಡ್ಯ ಜಿಲ್ಲೆಯ ರೈತರ ಹಿತ ಕಾಯದೆ, ತಮಿಳುನಾಡಿನವರ ಹಿತ ಕಾಯಲು ಹೊರಟಿರುವ ನೀವು ಕೃಷಿ ಸಚಿವ ಸ್ಥಾನದಲ್ಲಿರಬಾರದು ಎದು ಛೇಡಿಸಿದರು.

ಗೋಷ್ಠಿಯಲ್ಲಿ ಶ್ರೀರಂಗಪಟ್ಟಣ ತಾಲ್ಲೂಕು ಜಾ.ದಳ ಕಾಯಾಧ್ಯಕ್ಷ ತಗ್ಗಹಳ್ಳಿ ಪ್ರಸನ್ನ, ಪ್ರಧಾನ ಕಾರ್ಯದರ್ಶಿ ಶಂಕರೇಗೌಡ, ಕಾಯಾಧ್ಯಕ್ಷ ತಿಲಕ್ ಇದ್ದರು.

ಇಂದು ಮುಖಂಡರ ಸಭೆ


ಮಂಡ್ಯ : ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ನಾಳೆ (ಮಾ.28) ಗುರುವಾರ ಬೆಳಗ್ಗೆ 11 ಗಂಟೆಗೆ ಜಿಲ್ಲಾ ಬಿಜೆಪಿ ಹಾಗೂ ಜೆಡಿಎಸ್ ಮುಖಂಡರ ಸಮನ್ವಯ ಸಮಿತಿ ಸಭೆ ಸುರಭಿ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆಯಲಿದೆ.

ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಸೇರಿದಂತೆ ಜಿಲ್ಲೆಯ ಮಾಜಿ ಸಚಿವರು, ಹಾಲಿ ಹಾಗೂ ಮಾಜಿ ಶಾಸಕರು, ಉಭಯ ಪಕ್ಷಗಳ ವಿವಿಧ ಹಂತದ ಪದಾಧಿಕಾರಿಗಳು, ಸ್ಥಳೀಯ ಜನಪ್ರತಿನಿಧಿಗಳು, ಭಾಗವಹಿಸಲಿದ್ದಾರೆ.

ಏ.4ರಂದು ನಾಮಪತ್ರ ಸಲ್ಲಿಸಲಿರುವ ಮೈತ್ರಿ ಅಭ್ಯರ್ಥಿ ಎಚ್.ಡಿ.ಕುಮಾರಸ್ವಾಮಿ ಗೆಲುವಿಗೆ ಅನುಸರಿಸಬೇಕಾದ ಕಾರ್ಯಕರ್ತರ ಬಗ್ಗೆ ಚರ್ಚೆ ನಡೆಸಲಿದ್ದಾರೆ.

ಬಿಜೆಪಿ ಹಾಗೂ ಜೆಡಿಎಸ್‌ನ ಎಲ್ಲಾ ಮುಖಂಡರು, ಕಾರ್ಯಕರ್ತರು ಸಭೆಗೆ ಆಗಮಿಸಬೇಕು ಎಂದು ಬಿಜೆಪಿ ವಕ್ತಾರ ಸಿ.ಟಿ.ಮಂಜುನಾಥ್ ಮನವಿ ಮಾಡಿದ್ದಾರೆ.

ಮೋದಿ ವಿರುದ್ಧ ಅವಹೇಳನಕಾರಿ ಹೇಳಿಕೆ: ದೂರು



ಮಂಡ್ಯ : ಪ್ರಧಾನ ಮಂತ್ರಿ ನರೇಂದ್ರ ಮೋದಿ ವಿರುದ್ಧ ಹಾವೇಳನಕಾರಿ ಹೇಳಿಕೆ ನೀಡಿರುವ ರಾಜ್ಯ ಸರ್ಕಾರದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ತಂಗಡಗಿ ವಿರುದ್ಧ ಕ್ರಮ ಕೈಗೊಳ್ಳುವಂತೆ ಭಾರತೀಯ ಜನತಾ ಪಕ್ಷದ ಯುವ ಮೋರ್ಚ ಪದಾಧಿಕಾರಿಗಳು ಜಿಲ್ಲಾಧಿಕಾರಿ ಮೂಲಕ ರಾಜ್ಯ ಸರ್ಕಾರಕ್ಕೆ ದೂರು ನೀಡಿದರು.

ಬಿಜೆಪಿ ಯುವ ಮೋರ್ಚ ಜಿಲ್ಲಾಧ್ಯಕ್ಷ ಎಚ್.ಎಂ.ರಘುಗೌಡ ಮಾತನಾಡಿ, ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರ ಹೆಸರನ್ನು ಕೂಗುವ ಯುವಕರ ಕಪಾಳಕ್ಕೆ ಹೊಡೆಯಿರಿ ಎಂದು ಕಾಂಗ್ರೆಸ್ಸು ಸಮಾವೇಶದಲ್ಲಿ ಕಾಂಗ್ರೆಸ್ ಕಾರ್ಯಕರ್ತರಿಗೆ ಕರೆ ನೀಡಿರುವ ಸಚಿವ ಶಿವರಾಜ್ ತಂಗಡಗಿ ವಿರುದ್ಧ ದೂರು ದಾಖಲಿಸುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೂ ಕೂಡ ಮನವಿ ಸಲ್ಲಿಸಿದ್ದೇವೆ ಎಂದು ಹೇಳಿದರು.

ದೇಶದ ಮುಂದಿನ ಪ್ರಜೆಗಳಾದ ಯುವಕರಿಗೆ ಹೊಡೆಯಿರಿ ಎಂದು ಜಮಕಿ ಹಾಕಿರುವುದರಿಂದ ಯುವಕರು ಮತ ಚಲಾಯಿಸಲು ಮತಗಟ್ಟೆಗಳಿಗೆ ಬರಲು ಎದುರುವ ಸಾಧ್ಯತೆಗಳಿವೆ ರಾಜ್ಯದ ಹಾಗೂ ಮಂಡ್ಯ ಜಿಲ್ಲೆಯ ಯುವಕರಿಗೆ ರಕ್ಷಣೆ ನೀಡಬೇಕು ಮತ್ತು ಪ್ರಧಾನ ಮಂತ್ರಿಗಳ ಬಗ್ಗೆ ಕೇವಲವಾಗಿ ಮಾತನಾಡಿರುವ ಹಾಗೂ ಯುವಕರಿಗೆ ಭಯ ದಿಗಿಲು ಹುಟ್ಟಿಸಿರುವ ಕಾರಣ ಸಚಿವ ಶಿವರಾಜ ತಂಗಡಗಿ ಅವರ ಮೇಲೆ ದೂರು ದಾಖಲು ಮಾಡಬೇಕೆಂದು ಮನವಿ ಸಲ್ಲಿಸಿದ್ದೇವೆ ಎಂದು ತಿಳಿಸಿದರು.

ರಾಜ ಸರ್ಕಾರವು ಕೂಡಲೇ ಸಚಿವ ಶಿವರಾಜ್ ತಂಗಡಗಿ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳದಿದ್ದರೆ ಮಂಡ್ಯ ಜಿಲ್ಲೆಗೆ ಸಚಿವ ಬಂದಾಗ ಎಚ್ಚರಿಕೆ ನೀಡಿದ್ದಾರೆ.

ಇದೇ ಸಂದರ್ಭದಲ್ಲಿ ಯುವ ಮೋರ್ಚಾ ಪ್ರಧಾನ ಕಾರ್ಯದರ್ಶಿ ಪ್ರದೀಪ್ ಕುಮಾರ್ ಮಂಜುನಾಥ ಮೋಹನ್ ನಾಗರಾಜು ಸಚಿನ್ ರಘುನಂದನ್ ರೋಹಿತ್ ಮತಿತರರು ಇದ್ದರು.

ಚೆಕ್ ಪೋಸ್ಟ್ ಪರಿಶೀಲನೆ

ಮಂಡ್ಯ : ಲೋಕಸಭಾ ಸಾರ್ವತ್ರಿಕ ಚುನಾವಣೆಯ ಅಂಗವಾಗಿ ಸ್ಥಾಪಿತವಾಗಿರುವ ಚೆಕ್ ಪೋಸ್ಟ್‌ಗಳನ್ನು ಜಿಲ್ಲಾಧಿಕಾರಿ ಡಾ: ಕುಮಾರ ಅವರು ಇಂದು ಪರಿಶೀಲನೆ ನಡೆಸಿದರು.

ಶ್ರೀರಂಗಪಟ್ಟಣ ತಾಲ್ಲೂಕಿನ ಗೆಂಡೆ ಹೊಸಹಳ್ಳಿ ಬಳಿ ಸ್ಥಾಪಿತವಾಗಿರುವ ಚೆಕ್ ಪೋಸ್ಟ್‌ಗಳಲ್ಲಿ ಸಿಬ್ಬಂದಿಗಳ ನಿಯೋಜನೆ, ಸಿ.ಸಿ. ಕ್ಯಾಮರಾ, ವಾಹನಗಳ ತಪಾಸಣೆ

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ-3

28-03-2024

ಮೈಸೂರು

E-mail: kayakayoginews@gmail.com

ಬಿಜೆಪಿ ಮತ್ತು ಮಿತ್ರ ಪಕ್ಷಗಳನ್ನು ಸೋಲಿಸಿ ರೈತ ಸಮುದಾಯ ಉಳಿಸಿ: ರಾಜ್ಯಾದ್ಯಂತ ಪ್ರಚಾರ

■ ಕಾಯಕಯೋಗಿ ಸುದ್ದಿ

ಮಂಡ್ಯ : ರೈತರ, ಕಾರ್ಮಿಕರ ದಲಿತರ ವಿರೋಧಿಯಾದ ಎನ್‌ಡಿಎ ಮೈತ್ರಿಕೂಟ ಅಧಕಾರಕ್ಕೆ ಬರುವುದನ್ನು ತಡೆಯಲು ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಮತ್ತು ಮಿತ್ರ ಪಕ್ಷಗಳನ್ನು ಸೋಲಿಸಿ-ರೈತ ಮುದಾಯವನ್ನು ಉಳಿಸಿ ಎಂಬ ಘೋಷಣೆಯಡಿ ರಾಜ್ಯಾದ್ಯಂತ ಪ್ರಚಾರ ನಡೆಸಲು ಕರ್ನಾಟಕ ರಾಜ್ಯ ರೈತಸಂಘ ಸರ್ವಾನುಮತದಿಂದ ತೀರ್ಮಾನ ಕೈಗೊಂಡಿದೆ.

ಈ ಕುರಿತು ಸುದ್ದಿಗೋಷ್ಠಿ ನಡೆಸಿ ರೈತಸಂಘದ ನಿಲುವನ್ನು ಸ್ಪಷ್ಟಪಡಿಸಿದ ಕರ್ನಾಟಕ ರಾಜ್ಯ ರೈತಸಂಘದ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ ಅವರು, ರೈತ ವಿರೋಧಿ ಎನ್‌ಡಿಎ ಒಕ್ಕೂಟವು ಮತ್ತೆ ಅಧಿಕಾರಕ್ಕೆ ಬರದಂತೆ ತಡೆಯಲು ರೈತಸಂಘದ ರಾಜ್ಯ ಕಾರ್ಯಕಾರಿಣಿ ಸಭೆಯಲ್ಲಿ ತೀರ್ಮಾನಿಸಲಾಗಿದೆ ಎಂದು ತಿಳಿಸಿದರು.

10ವರ್ಷದಿಂದ ನರೇಂದ್ರ ಮೋದಿ ನೃತೃತ್ವದ ಎನ್‌ಡಿಎ ಆಡಳಿತದಲ್ಲಿ ರೈತ ಸಮುದಾಯವನ್ನು ನಿರ್ಲಕ್ಷ್ಯ ಮಾಡಿ ಇಡೀ ಕೃಷಿ ಕ್ಷೇತ್ರವನ್ನೇ ಕಾರ್ಪೋರೇಟ್ ವಲಯಕ್ಕೆ ಒಪ್ಪಿಸುವಂತಹ ಕೆಟ್ಟ ನೀತಿಗಳು ರೂಪುಗೊಂಡಿವೆ. ಮತ್ತೆ ನರೇಂದ್ರ ಮೋದಿ ನೇತೃತ್ವದಲ್ಲಿ ಎನ್‌ಡಿಎ ಒಕ್ಕೂಟ ಅಧಿಕಾರಕ್ಕೆ ಮರಳಿದಲ್ಲಿ ರೈತ ಕುಲ ಸಂಪೂರ್ಣ ನಾಶವಾಗುತ್ತದೆ.

ಕಳೆದ ಮಾ.14ರಂದು ದೆಹಲಿಯ ರಾಮ್‌ಲೀಲಾ ಮೈದಾನದಲಲಿ ನಡೆದ ಬೃಹತ್ ರೈತ-ಕಾರ್ಮಿಕ ಮಹಾಪಂಚಾಯತ್‌ನಲ್ಲಿ ಎನ್‌ಡಿಎಯನ್ನು ಅಧಿಕಾರದಿಂದ ಕಿತ್ತೊಗೆಯಲು ದೇಶದ ರೈತರ ನಿರ್ಣಯ ಕೈಗೊಂಡಿದ್ದಾರೆ. ಈ ತೀರ್ಮಾನವನ್ನು ರಾಜ್ಯ ರೈತಸಂಘ ಮಂಡ್ಯ ಲೋಕಸಭಾ ಕ್ಷೇತ್ರದ ಪ್ರತಿ ಹಳ್ಳಿಗೂ, ಪ್ರತಿ ಕುಟುಂಬಕ್ಕೂ ತಲುಪಿಸಿ ಎನ್‌ಡಿಎ ವಿರುದ್ಧ ಮತ ಚಲಾಯಿಸಲು ರೈತ ಸಮುದಾಯಕ್ಕೆ ಕರೆ ನೀಡುತ್ತದೆ ಎಂದು ಹೇಳಿದರು.

ಗೋಷ್ಠಿಯಲ್ಲಿ ರೈತಸಂಘದ ಜಿಲ್ಲಾಧ್ಯಕ್ಷ ಎ.ಎಲ್.ಕೆಂಪೂಗೌಡ, ಮುಖಂಡರಾದ ತಗ್ಗಹಳ್ಳಿ ಪ್ರಸನ್ನ, ಪ್ರಶಾಂತ್, ಲಿಂಗಪ್ಪಾಜಿ, ನಾಗರಾಜು, ಕುಮಾರ್ ಮತ್ತಿತರರಿದ್ದರು.

ಅತ್ಯುತ್ತಮ ಸ್ವೀಪ್ ಚಟುವಟಿಕೆ ಕೈಗೊಂಡು ಮತದಾನ ಪ್ರಮಾಣ ಹೆಚ್ಚಿಸಿ

ಜಿಲ್ಲಾ ಪಂಚಾಯತ್ ಸಿಇಒ ಕೆ.ಎಂ.ಗಾಯಿತ್ರಿ

■ ಕಾಯಕಯೋಗಿ ಸುದ್ದಿ

ಮೈಸೂರು: ಲೋಕಸಭಾ ಚುನಾವಣೆ ಹಿನ್ನೆಲೆ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲೂ ವಿನೂತನವಾದ ಸ್ವೀಪ್ ಚಟುವಟಿಕೆ ನಡೆಸಿ ಮತದಾರರಿಗೆ ಜಾಗೃತಿ ಮೂಡಿಸುವ ಮೂಲಕ ಮತದಾನದ ಶೇಖಡವಾರು ಪ್ರಮಾಣ ಹೆಚ್ಚಿಸಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾ ಸ್ವೀಪ್ ಸಮಿತಿಯ ಅಧ್ಯಕ್ಷರಾದ ಕೆ.ಎಂ.ಗಾಯಿತ್ರಿ ಅವರು ತಿಳಿಸಿದರು.

ಲೋಕಸಭಾ ಚುನಾವಣೆ ಅಂಗವಾಗಿ ಮತದಾರರಿಗೆ ಜಾಗೃತಿ ಮೂಡಿಸುವ ಸಲುವಾಗಿ ಸ್ವೀಪ್ (ವ್ಯವಸ್ಥಿತ ಮತದಾರರ ಶಿಕ್ಷಣ ಮತ್ತು ಚುನಾವಣೆಯಲ್ಲಿ ಪಾಲ್ಗೊಳ್ಳುವಿಕೆ) ಚಟುವಟಿಕೆಯಡಿ ಮೈಸೂರು ತಾಲ್ಲೂಕು ಸ್ವೀಪ್ ಸಮಿತಿ ವತಿಯಿಂದ ತಾಲ್ಲೂಕು ಆಡಳಿತ ಸೌಧದ ಆವರಣದಲ್ಲಿ ಬುಧವಾರ ಹಮ್ಮಿಕೊಳ್ಳಲಾಗಿದ್ದ 'ಹಸ್ತಾಕ್ಷರ ಸಂಗ್ರಹ ಅಭಿಯಾನಕ್ಕೆ' ಸಹಿ ಹಾಕುವ ಮೂಲಕ ಚಾಲನೆ ನೀಡಿ ಮಾತನಾಡಿದರು.

ಗ್ರಾಮೀಣ ಭಾಗದ ಎಲ್ಲಾ ಸಾರ್ವಜನಿಕರಿಗೂ ಏಪ್ರಿಲ್ 26 ರಂದು ಮತದಾನ ಮಾಡುವಂತೆ ಅರಿವು ಮೂಡಿಸಬೇಕು. ಮತದಾನದ ಮಹತ್ವ ಕುರಿತು ಅವರಿಗೆ ಮನವರಿಕೆ ಮಾಡುವಂತಹ ಸ್ವೀಪ್ ಚಟುವಟಿಕೆ ನಡೆಸಬೇಕು ಎಂದು ಎಲ್ಲಾ ಗ್ರಾಮ ಪಂಚಾಯಿತಿಯ ಪಿಡಿಒ ಅವರಿಗೆ ಸೂಚನೆ ನೀಡಿದರು.

ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮತಗಟ್ಟೆಗಳಿಗೆ ಗುಣಮಟ್ಟದ ಮೂಲಭೂತ ಸೌಕರ್ಯವನ್ನು ಸಕಾಲಕ್ಕೆ ಒದಗಿಸಬೇಕು. ಪಿಡಿಒ ಅವರು ಚಲನವಲನ ವಹಿ ನಿರ್ವಹಿಸಿ, ಎಲ್ಲಾ ಮಾಹಿತಿ ನಮೂದಿಸಬೇಕು. ಮತಗಟ್ಟೆ ಅಧಿಕಾರಿಗಳ ಜೊತೆ ಚರ್ಚಿಸಿ ಅವರಿಗೆ ಅಗತ್ಯವಿರುವ ವಸ್ತುಗಳನ್ನು ನಿಗದಿತ ಸಮಯಕ್ಕೆ ಪೂರೈಸಲು ಕ್ರಮವಹಿಸಿ ಎಂದು ತಿಳಿಸಿದರು.

ಮತಗಟ್ಟೆ ವ್ಯಾಪ್ತಿಯಲ್ಲಿ ಸುಸಜ್ಜಿತವಾದ ಶೌಚಾಲಯ, ಕುಡಿಯುವ ನೀರಿನ ವ್ಯವಸ್ಥೆ, ನೆರಳು, ಪ್ರಾಥಮಿಕ ಚಿಕಿತ್ಸಾ ಪೆಟ್ಟಿಗೆ ಸೇರಿದಂತೆ ಅಗತ್ಯ ಸೌಲಭ್ಯಕ್ಕಾಗಿ ಮತಗಟ್ಟೆಗೆ ಭೇಟಿ ನೀಡಿ ಪರಿಶೀಲಿಸಬೇಕು. ವಿಶ್ರಾಂತಿ ಕೊಠಡಿ ಮೀಸಲಿರಸಲು ಕ್ರಮವಹಿಸಬೇಕು. ವಿಷೇಶ ಮತಗಟ್ಟೆಯನ್ನು ಅಚ್ಚುಕಟ್ಟಾಗಿ ಸಿದ್ಧಪಡಿಸಿ ಎಂದು ಸಲಹೆ ನೀಡಿದರು.

ಪ್ರತಿಯೊಬ್ಬರೂ ಕಡ್ಡಾಯವಾಗಿ ಸಿ-ವಿಜಿಲ್ ಆಪ್ ಡೌನ್ಲೋಡ್ ಮಾಡಿಕೊಳ್ಳಬೇಕು. ಚುನಾವಣಾ ಅಕ್ರಮಗಳು ಕಂಡುಬಂದರೆ ಕೂಡಲೇ ಆಪ್ ಮೂಲಕ ದೂರು ಸಲ್ಲಿಸಿ. ಪ್ರಥಮ ಬಾರಿಗೆ ಮತ ಹಾಕುವವರಿಗೆ ತಿಳುವಳಿಗೆ ನೀಡಲು ತರಬೇತಿ ಆಯೋಜಿಸಬೇಕು. ಹಿರಿಯ ನಾಗರಿಕರ ಸಹಾಯಕ್ಕಾಗಿ ಸ್ವಯಂ ಸೇವಕರನ್ನು ನೇಮಿಸಿಕೊಳ್ಳಿ. ಒಟ್ಟಾರೆ ಯಾವುದೇ ಲೋಪ ಉಂಟಾಗದಂತೆ ಪರಸ್ಪರ ಚರ್ಚಿಸಿ ಅತ್ಯುತ್ತಮವಾಗಿ ಕರ್ತವ್ಯ ನಿರ್ವಹಿಸಿ ಎಂದರು.

ಚುನಾವಣೆ ಸಿದ್ಧತೆಯ ಜೊತೆಗೆ ಬರಗಾಲ ಅನೇಕ ಗ್ರಾಮಗಳನ್ನು ವ್ಯಾಪ್ತಿಸಿದ್ದು, ಸಮರ್ಪಕ ಕುಡಿಯುವ ನೀರಿನ ಪೂರೈಸಲು ನಿಗಾವಹಿಸಿ ಕೆಲಸ ಮಾಡಬೇಕು. ನರೇಗಾ ಯೋಜನೆಯಡಿ ಹೆಚ್ಚಿನ ಜನರಿಗೆ ಉದ್ಯೋಗ ಕಲ್ಪಿಸುವ ಮೂಲಕ ಗುಳೆ ಹೋಗುವುದನ್ನು ತಡೆಗಟ್ಟಬೇಕು. ಹೆಚ್ಚಾಗಿ ನೈಸರ್ಗಿಕ ಸಂಪನ್ಮೂಲ ನಿರ್ವಹಣೆ ಕಾಮಗಾರಿಯನ್ನು ಕೈಗೆತ್ತಿಕೊಳ್ಳ ಬೇಕು ಎಂದು ಸೂಚಿಸಿದರು.

ಈ ಸಂದರ್ಭದಲ್ಲಿ ಸಹಾಯಕ ಸ್ವೀಪ್ ನೋಡಲ್ ಅಧಿಕಾರಿ ಶಾಂತ.ಎಂ, ತಾಲ್ಲೂಕು ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿ ಎಸ್.ಪಿ.ಧರಣೇಶ್, ಅನುಷ್ಠಾನ ಇಲಾಖೆಯ ತಾಲ್ಲೂಕು ಮಟ್ಟದ ಅಧಿಕಾರಿಗಳು, ತಾ.ಪಂ. ಸಹಾಯಕ ನಿರ್ದೇಶಕರಾದ ಭವ್ಯ, ಗಂಗಾಧರ, ತಾಲ್ಲೂಕು ಪಂಚಾಯತ್ ಹಾಗೂ ತಾಲ್ಲೂಕು ಕಚೇರಿ ಸಿಬ್ಬಂದಿ, ಎಲ್ಲಾ ಗ್ರಾಮ ಪಂಚಾಯಿತಿಯ ಪಿಡಿಒ, ಕಾರ್ಯದರ್ಶಿ, ಎಸ್ಡಿಎಎ ಮತ್ತು ಡಿಇಒ ಹಾಜರಿದ್ದರು.

ಅಕ್ರಮ ವಸ್ತುಗಳ ವಶ

ಮೈಸೂರು: ಲೋಕಸಭಾ ಸಾರ್ವತ್ರಿಕ ಚುನಾವಣೆ 2024ರ ಅಂಗವಾಗಿ ಅಬಕಾರಿ ಅಧಿಕಾರಿಗಳು ಮಾ.26 ರಂದು ತಿ.ನರಸೀಪುರ ಟೌನ್, ಗುಂಜಾ ನರಸಿಂಹದೇವಸ್ಥಾನದ ಬಳಿ ರಸ್ತೆಗಾವಲು ನಡೆಸುತ್ತಿದ್ದ ಸಮಯದಲ್ಲಿ ಹ್ಯುಂಡಾಯ್ ಇಯಾನ್ ನಾಲ್ಕು ಚಕ್ರವಾಹನದಲ್ಲಿ ಅಕ್ರಮವಾಗಿ 6.480 ಲೀಟರ್ ಮದ್ಯ ಮತ್ತು 3.900 ಲೀಟರ್ ಬಿಯರ್‌ನ್ನು ಹೊಂದಿ, ಸಾಗಾಣಿಕೆ ಮಾಡುತ್ತಿದ್ದದು ಕಂಡುಬದ ಹಿನ್ನಲೆಯಲ್ಲಿ ಟಿ.ನರಸೀಪುರ ವಲಯದ ಅಬಕಾರಿ ಉಪ ನಿರೀಕ್ಷಕರಾದ ಶಿವಪ್ರಕಾಶ್ ಅವರು ಪ್ರಕರಣ ದಾಖಲಿಸಿದ್ದು, ಇದರ ಒಟ್ಟು ಮೌಲ್ಯ 5,03,480 ರೂ.ಗಳು ಆಗಿರುತ್ತವೆ.

ಚುನಾವಣೆ ನೀತಿ ಸಂಹಿತೆ ಜಾರಿಯಾದ ದಿನಾಂಕದಿಂದ ಮಾ.26 ರವರೆಗೆ ಮೈಸೂರು ಗ್ರಾಮಾಂತರ ಜಿಲ್ಲೆಯಲ್ಲಿ ಅಬಕಾರಿ ಇಲಾಖಾ ವತಿಯಿಂದ ಅಕ್ರಮ ಮದ್ಯ ಚಟುವಟಿಕೆಗಳನ್ನು ಪತ್ತೆಹಚ್ಚಿ ಒಟ್ಟು 113 ಮೊಕದ್ದಮೆಗಳನ್ನು ದಾಖಲಿಸಿ, 296.590 ಲೀ. ಮದ್ಯ, 339654.060 ಲೀ. ಬಿಯರ್ ಮತ್ತು ಒಟ್ಟು 16 (15 ದ್ವಿಚಕ್ರ, 01 ನಾಲ್ಕು ಚಕ್ರ) ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ. ಇವುಗಳ ಒಟ್ಟಾರೆ ಮೌಲ್ಯ ರೂ. 8,04,33,082 ರೂ.ಗಳಾಗಿರುತ್ತದೆ.

ಕಸದ ರಾಶಿಯಲ್ಲಿ ಬಸವನಹಳ್ಳಿ



ಬೋಗಾದಿ ಪಟ್ಟಣ ಪಂಚಾಯತಿ ಯಲ್ಲಿಕಾಣಿಸಿಗುವ ದೃಶ್ಯವಿದು. ವಿಜಯನಗರ 4ನೇ ಹಂತದ ಬಳಿ ಇರುವುದೇ ಈ ಬಸವನಹಳ್ಳಿ .ಬೋಗಾದಿ ಪಟ್ಟಣ ಪಂಚಾಯತಿ ಅಡಿಯಲಿ ಬರುವ ಈ ಹಳ್ಳಿಯಲ್ಲಿ ಎಲ್ಲಿನೋಡಿದರು ಕಸದರಾಶಿಯೆ! ಜನರಿಗೆ ಕಸವಿಲೇವಾರಿಬಗ್ಗೆ ಸರಿಯಾದ ಮಾಹಿತಿ ಇಲ್ಲದಿರುವುದೇ ಈ ರಾಶಿ ಕಸಕ್ಕೆಕಾರಣ ಎಂದರೂ ತಪ್ಪಾಗಲಾರದು

ಈ ಬಗ್ಗೆ ಯಾವುದೇಅಧಿಕಾರಿಗಳು ಕ್ರಮಕೈಗೊಳ್ಳುತ್ತಿಲ್ಲ. ಜನರಿಗೆ ಈ ಕುರಿತುಸರಿಯಾದ ಮಾಹಿತಿ ನೀಡಿ ಈ ಕಸವನ್ನು ತೆರವುಗೊಳಿಸಬೇಕಾಗಿ ಮನವಿ

ಎನ್‌ಎಸ್‌ಎಸ್ ಶಿಬಿರದಲ್ಲಿ ಮೂಢನಂಬಿಕೆ-ಪವಾಡ ರಹಸ್ಯ ಬಯಲು ಕಾರ್ಯಕ್ರಮ

■ ಕಾಯಕಯೋಗಿ ಸುದ್ದಿ

ನಂಜನಗೂಡು: ವೈಜ್ಞಾನಿಕವಾಗಿ ನಾವು ಸಮಾಜದಲ್ಲಿ ಎಷ್ಟೇ ಎತ್ತರಕ್ಕೆ ಬೆಳೆದಿದ್ದರೂ ಮೂಢನಂಬಿಕೆಗಳು ವಿರಾಜಮಾನವಾಗಿ ರಾರಾಜಿಸುತ್ತಿವೆ. ಅಮಾಯಕ ಜನರು ಇನ್ನೂ ಮೌಢ್ಯಕ್ಕೆ ಬಲಿಯಾಗುತ್ತಿದ್ದಾರೆ ಎಂದು ಮುಖ್ಯ ಶಿಕ್ಷಕ ಭವನಿ ಶಂಕರ್ ಹೇಳಿದರು.

ನಂಜನಗೂಡು ತಾಲ್ಲೂಕಿನ ಸಿಂಧುವಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ನಂಜನಗೂಡಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಆಯೋಜನೆ ಮಾಡಲಾಗಿದ್ದ ರಾಷ್ಟ್ರೀಯ ಸೇವಾ ಯೋಜನೆ ವಿಶೇಷ ವಾರ್ಷಿಕ ಶಿಬಿರದಲ್ಲಿ ಮೂಢನಂಬಿಕೆ ಮತ್ತು ಪವಾಡ ರಹಸ್ಯ ಬಯಲು ಕಾರ್ಯ ಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಪ್ರಸ್ತುತ ಸಮಾಜದಲ್ಲಿ ಪ್ರತಿಯೊಬ್ಬರು ವಿದ್ಯಾವಂತರಾಗುತ್ತಿರುವುದು ಸಂತೋಷದ ಸಂಗತಿ. ಅಕ್ಷರಸ್ಥರಾಗುತ್ತಿದ್ದಂತೆ ಮೌಢ್ಯವೂ



ಹೆಚ್ಚಾಗುತ್ತಿರುವುದು ದುರಂತ. ದೇವರ ಹೆಸರಿನಲ್ಲಿ ಮೋಸ ಮಾಡುವವರು, ಶಾಸ್ತ್ರ, ಭವಿಷ್ಯ ಹೇಳುವಂತಹ ಆಚರಣೆಗಳು ಸಮಾಜದಲ್ಲಿ ಕಾಣಿಸುತ್ತಿವೆ ಎಂದರು.

ಎಲ್ಲಿಯ ತನಕ ಮೋಸ ಹೋಗುವವರು, ಇಂತಹ ಆಚರಣೆಯನ್ನು ನಂಬುವವರು ಇರುತ್ತಾರೋ ಅಲ್ಲಿಯವರೆಗೂ ಇದನ್ನೇ ಬಂಡವಾಳ ಮಾಡಿಕೊಂಡು ಜನರನ್ನು ವಂಚಿಸುವವರೂ ಇರುತ್ತಾರೆ ಎಂದು ಎಚ್ಚರಿಸಿದರು. ಮಾಧ್ಯಮಗಳು ಕೂಡ ಮೂಢನಂಬಿಕೆಗಳನ್ನು ವಿಜೃಂಭಣೆಯಿಂದ ತೋರಿಸುತ್ತಿವೆ. ಮೂಢನಂಬಿಕೆಗಳಿಂದ ಸಾಕಷ್ಟು ಮೋಸ ಹೋಗುತ್ತಿದ್ದಾರೆ. ಇದನ್ನು ತಡೆಗಟ್ಟಲು ನಾವು ಮೌಢ್ಯದಿಂದ ಆಚೆ ಬರಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ರೈತ ಸಂಘ ಮತ್ತು ಹಸಿರು ಸೇನೆಯ ತಾಲ್ಲೂಕು ಅಧ್ಯಕ್ಷ ಸತೀಶ್, ಸ್ನೇಕ್ ಬಸವರಾಜ್, ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕಿ ಡಾ.ಹೆಚ್.ಎನ್ ಸೀತಾ, ಪ್ರಾಧ್ಯಾಪಕರಾದ ಕೀರ್ತಿ ಪ್ರಸಾದ್, ಶಶಿಕುಮಾರ್ ಡಾ. ಕರುಣೇಶ್ ಕುಮಾರ್, ರಾಷ್ಟ್ರೀಯ ಸೇವಾ ಯೋಜನೆ ಅಧಿಕಾರಿಗಳಾದ ಡಾ. ಎನ್.ಎಸ್. ಮಹದೇವ ಪ್ರಸಾದ್, ಡಾ.ಡಿ.ಕೆ. ಉಷಾ ಸೇರಿದಂತೆ ಶಿಬಿರಾರ್ಥಿಗಳು ಭಾಗವಹಿಸಿ ದ್ದರು.

ಮೂಲಸೌಕರ್ಯ ಒದಗಿಸದಿದ್ದಲ್ಲಿ ಚುನಾವಣೆ ಬಹಿಷ್ಕರಿಸಿ ಧರಣಿ: ತಹಶೀಲ್ದಾರ್ ಭೇಟಿ

■ ಕಾಯಕಯೋಗಿ ಸುದ್ದಿ

ಹನೂರು: ಅಗತ್ಯ ಮೂಲ ಸೌಕರ್ಯ ಒದಗಿಸದಿದ್ದಲ್ಲಿ ಲೋಕಸಭೆ ಚುನಾವಣೆಯನ್ನು ಬಹಿಷ್ಕರಿಸುವುದಾಗಿ ಕಳೆದ 3 ದಿನಗಳಿಂದ ತಾಲೂಕಿನ ಡಿ.ಎಂ ಸಮುದ್ರ ಗ್ರಾಮದಲ್ಲಿ ರೈತ ಸಂಘದ ಗ್ರಾಮ ಘಟಕದ ಪದಾಧಿಕಾರಿಗಳು ನಡೆಸುತ್ತಿರುವ ಧರಣಿ ನಿರತ ಸ್ಥಳಕ್ಕೆ ಮಂಗಳವಾರ ಸಂಜೆ ತಹಸೀಲ್ದಾರ್ ವೈ.ಕೆ ಗುರುಪ್ರಸಾದ್ ಭೇಟಿ ನೀಡಿ ಅಗತ್ಯ ಭರವಸೆ ನೀಡಿದರು.

ಈ ವೇಳೆ ರೈತರು ಮಾತನಾಡಿ, ಇದೀಗ ಬೇಸಿಗೆ ಆಗಮಿಸಿರುವುದರಿಂದ ಕೃಷಿ ಮಾಡಲು ನೀರಿನ ಸಮಸ್ಯೆ ಎದುರಾಗಿದೆ. ಆದ್ದರಿಂದ ಹುಬ್ಬೆಹುಣಸೆ ಹಾಗೂ ಉಡುತೊರೆ ಜಲಾಶ



ಯದಿಂದ ಹಳ್ಳಗಳಿಗೆ ನೀರು ಹರಿಸಬೇಕು. ಎಂ.ಟಿ ದೊಡ್ಡಿ ಗ್ರಾಮದಲ್ಲಿ ಕುಡಿ ಯುವ ನೀರಿನ ಸಮಸ್ಯೆ ಎದುರಾಗಿದೆ. ಜಾನುವಾರುಗಳಿಗೆ ಮೇವಿನ ಸಮಸ್ಯೆಯಿಂದ ವಾರಾಟ ಮಾಡುವಂತಹ ಪರಿಸ್ಥಿತಿ ನಿರ್ಮಾಣ ವಾಗಿದೆ. ಭೈರನತ್ತ -ಡಿ.ಎಂ ಸಮುದ್ರ ಹಾಗೂ ಕೆ.ವಿ.ಎನ್ ದೊಡ್ಡಿ ಮಾರ್ಗದಲ್ಲಿನ ಹಳ್ಳಕ್ಕೆ ಸೇತುವೆ ಇಲ್ಲದ ಪರಿಣಾಮ ಮಳೆಗಾಲದ ವೇಳೆ ಸಂಚರಿಸಲು ತುಂಬಾ ತೊಂದರೆಯನ್ನು ಅನುಭವಿಸಬೇಕಾಗಿದೆ. ಇತ್ತ ಹಾಳಾಗಿರುವ ರಸ್ತೆಯನ್ನು ಸಂಚರಿಸಲು ಹರಸಾಹಸ ಪಡಬೇಕಿದೆ. ಸಮರ್ಪಕ ಬಸ್ ಸೌಕರ್ಯ ಇಲ್ಲದ ಪರಿಣಾಮ ತೊಂದರೆಯಾಗಿದೆ. ಆಸ್ಪತ್ರೆ ಇಲ್ಲದ ಪರಿಣಾಮ ಹನೂರಿಗೆ ತೆರಳಬೇಕಿದೆ. ಹೀಗೆ ಇನ್ನು ಮುಂತಾದ ಅಗತ್ಯ ಮೂಲ ಸೌಕರ್ಯವನ್ನು ಒದಗಿಸುವಂತೆ ಜನಪ್ರತಿನಿಧಿಗಳಿಗೆ ಹಾಗೂ ಅಧಿಕಾರಿಗಳಿಗೆ ಹಲವು ಬಾರಿ ತಿಳಿಸಿದ್ದರೂ ಯಾವುದೇ ಪ್ರಯೋಜನವಾಗಿಲ್ಲ. ಇದರಿಂದ ತುಂಬಾ ತೊಂದರೆ ಅನುಭವಿಸುವಂತಾಗಿದೆ. ಆದ್ದರಿಂದ ಈ ಬಗ್ಗೆ ಗಮನಹರಿಸಿ ಅಗತ್ಯ ಮೂಲ ಸೌಕರ್ಯವನ್ನು ಒದಗಿಸ

ಮೂರು ತಲೆಮಾರುಗಳಿಂದ ಜೋಪಡಿಯಲ್ಲಿ ವಾಸ...ಹೀನಾಯ ಬದುಕು ಸಾಗಿಸುತ್ತಿರುವ ಕುಟುಂಬ...

ಲೋಕಸಭಾ ಚುನಾವಣೆ ಬಹಿಷ್ಕಾರಕ್ಕೆ ಕುಟುಂಬಸ್ಥರ ನಿರ್ಧಾರ

■ ಕಾಯಕಯೋಗಿ ಸುದ್ದಿ
ಸಿ.ಎಂ ಸುಗಂಧರಾಜು

ನಂಜನಗೂಡು : ವಿದ್ಯುತ್ ಸಂಪರ್ಕ ಇಲ್ಲ, ಕುಡಿಯುವ ನೀರಿನ ವ್ಯವಸ್ಥೆ ಇಲ್ಲ, ತಲೆ ಮೇಲೆ ಸೂರಿಲ್ಲ, ಇಡೀ ಗ್ರಾಮದ ಚರಂಡಿ ನೀರು ಮನೆ ಮುಂದೆ, ಮಕ್ಕಳಿಗೆ ಶಿಕ್ಷಣ ಕೊಡಿಸಲು ಸೌಲಭ್ಯವಿಲ್ಲ ಇದು ಕಳೆದ ಏಳು ದಶಕಗಳಿಂದ ಹಾಗೂ ಮೂರು ತಲೆಮಾರುಗಳಿಂದ ಹೀನಾಯ ಸ್ಥಿತಿಯಲ್ಲಿ ಜೀವನ ಸಾಗಿಸುತ್ತಿರುವ ಪುಟ್ಟಮ್ಮ ಮತ್ತು ಎಲ್ಲಮ್ಮ ಎಂಬ ಎರಡು ಕುಟುಂಬಗಳ ದುಃಸ್ಥಿತಿ.

ನಂಜನಗೂಡು ತಾಲ್ಲೂಕಿನ ಹೊರಳವಾಡಿ ಹೊಸೂರು ಗ್ರಾಮದಲ್ಲಿ ವಾಸವಿರುವ ಹಂದಿಜೋಗಿ ಕುಟುಂಬದ ಪರಿಸ್ಥಿತಿ ನೋಡಿದ್ರೆ ಜನಪ್ರತಿನಿಧಿಗಳಾಗಲಿ, ಅಧಿಕಾರಿಗಳಾಗಲಿ ತಲೆ ತಗ್ಗಿಸುವಂತಾಗುತ್ತದೆ. ಸುಮಾರು 75 ವರ್ಷಗಳಿಂದ ಜೋಪಡಿಯಲ್ಲಿ ವಾಸವಾಗಿದ್ದು ಮೂಲಭೂತ ಸೌಕರ್ಯಗಳಿಲ್ಲದೆ ಬದುಕು ಸಾಗಿಸುತ್ತಿರುವ ಈ ಕುಟುಂಬಗಳು ಚುನಾವಣೆ ಬಂದ್ರೆ ಮತಹಾಕಿ ಹಕ್ಕು ಚಲಾಯಿಸುತ್ತಾರೆ. ಆದ್ರೆ



ಮೂಲಭೂತ ಸೌಕರ್ಯಗಳನ್ನ ಪಡೆಯುವ ತಮ್ಮ ಹಕ್ಕಿನಲ್ಲಿ ನಿರಂತರವಾಗಿ ವಂಚನೆಗೆ ಒಳಗಾಗುತ್ತಿದ್ದಾರೆ. ಚುನಾವಣೆ ಬಂದ್ರೆ ಮತಕ್ಕಾಗಿ ಜೋಪಡಿ ಬಾಗಿಲು ಬಡಿಯುವ ಜನಪ್ರತಿನಿಧಿಗಳಿಗೆ ಇವರ ಬವಣೆ ಮಾತ್ರ ಕಾಣಿಸುತ್ತಿಲ್ಲ. ನಮಗೆ ಮನೆ ಮತ್ತು ಮೂಲಭೂತ ಸೌಕರ್ಯಗಳನ್ನು ನೀಡಿ ಎಂದು ಸಾಕಷ್ಟು ಬಾರಿ ಸಂಬಂಧಪಟ್ಟ ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳಿಗೆ ಎಷ್ಟೇ ಬಾರಿ ಮನವಿ ಮಾಡಿದರು ಯಾವುದೇ ಪ್ರಯೋಜನವಾಗಿಲ್ಲ ಹಾಗಾಗಿ ಮುಂಬರುವ ಲೋಕಸಭಾ ಚುನಾವಣೆಯನ್ನು ಬಹಿಷ್ಕಾರ ಮಾಡುತ್ತೇವೆ ಎಂದು ಕುಟುಂಬಸ್ಥರು ನಿರ್ಧರಿಸಿದ್ದಾರೆ. ವಿದ್ಯುತ್ ಸಂಪರ್ಕ ಇಲ್ಲದ ಕಾರಣ ಮಕ್ಕಳನ್ನ ಶಾಲೆಗೆ ಕಳುಹಿಸುತ್ತಿಲ್ಲ. ಗ್ರಾಮದ ಚರಂಡಿ ನೀರೆಲ್ಲಾ ಇವರ ಜೋಪಡಿಗಳ ಮುಂದೆ ಸಂಗ್ರಹವಾಗಿ ದುರ್ವಾಸನೆ ಕಾಡುತ್ತಿದ್ದರೂ ಸಹಿಸಿಕೊಳ್ಳುತ್ತಿರುವ ಈ ಕುಟುಂಬದ ಸಹನೆಯನ್ನ ಅರ್ಥವಾಡಿಕೊಳ್ಳುವ ಮನುಸ್ಸುಗಳೇ ಇಲ್ಲ. ಈ ದೃಶ್ಯಗಳನ್ನ ನೋಡಿಯಾದ್ರೂ ಅಧಿಕಾರಿಗಳಿಗಾಗಲಿ, ಜನಪ್ರತಿನಿಧಿಗಳಿಗಾಗಲಿ ಕಿಂಚತ್ತಾದರೂ ಹೃದಯವಂತಿಕೆ ತೋರಿ ಇವರ ಬವಣೆ ನೀಗಿಸಬೇಕಿದೆ...



ಸುಮಾರು 70 ವರ್ಷಗಳಿಂದ ಇದೇ ಗ್ರಾಮದಲ್ಲಿ ವಾಸಿಸುತ್ತಿದ್ದೇವೆ. ನಮಗೆ ಸರ್ಕಾರದಿಂದ ಯಾವುದೇ ಸೌಲಭ್ಯಗಳು ಸಿಕ್ಕಿಲ್ಲ. ಸಾಕಷ

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ–4

28–03–2024

ತುಮಕೂರು–ಚಾಮರಾಜನಗರ

ತಾಳವಾಡಿಯಲ್ಲಿ ಜಾತ್ರೆ ಆರಂಭ

■ ಕಾಯಕಯೋಗಿ ಸುದ್ದಿ

ಚಾಮರಾಜನಗರ: ಈ ದೇವಾಲಯಕ್ಕೆ ಮಹಿಳೆಯರು ತೆರಳಿದರೇ ಕಲ್ಲಾಗುತ್ತಾರೆ ಎಂಬ ನಂಬಿಕೆ ಇರುವುದರಿಂದ ಹಾಗೂ ಮಹಿಳೆಯರಿಂದ ಅಂತರ ಕಾಯ್ದುಕೊಂಡು ದೇವರು ತಪಸ್ಸಿಗೆ ಕುಳಿತಿರುವ ಐತಿಹ್ಯ ಇರುವ ಈ ದೇವಾಲಯದಲ್ಲಿ ಸಡಗರದಿಂದ ಜಾತ್ರೆ ನಡೆಯುತ್ತಿದೆ.

ಹೌದು...,ಚಾಮರಾಜನಗರ ಗಡಿಭಾಗದಲ್ಲಿರುವ ತಮಿಳುನಾಡಿನ ತಾಳವಾಡಿ ತಾಲೂಕಿನ ಶ್ರೀ ಕೊಂಗಳ್ಳಿ ಮಲ್ಲಿಕಾರ್ಜುನಸ್ವಾಮಿ ದೇವಾಲಯದಲ್ಲಿ ಸೋಮವಾರದಿಂದ ಜಾತ್ರೆ ಆರಂಭಗೊಂಡಿದ್ದು ಮಂಗಳವಾರ ಬೆಳಗ್ಗೆ ಭಕ್ತಿ ಶ್ರದ್ಧೆಯಿಂದ ಕೊಂಡೊತ್ಸವ ನೆರವೇರಿದೆ.

ಒಂದು ರೀತಿ ಇದು ಪುರುಷ ಭಕ್ತರ ಜಾತ್ರೆ ಇದಾಗಿದ್ದು ಜಾತ್ರೆಗೆ, ದೇವರ ದರ್ಶನಕ್ಕೆ ಮಹಿಳೆಯರ ಪ್ರವೇಶ ಇರುವುದಿಲ್ಲ. ಎರಡು ರಾಜ್ಯಗಳಿಂದ ಕೊಂಗಳ್ಳಿ ಬೆಟ್ಟಕ್ಕೆ ಭಕ್ತಸಾಗರವೇ ಹರಿದು ಬಂದಿದ್ದು ದೇವರಿಗೆ ವಿಶೇಷ ಪೂಜೆ ಸಲ್ಲಿಸಿದ್ದಾರೆ.

ಮಲ್ಲಿಕಾರ್ಜುನಸ್ವಾಮಿ ಮಹಾನ್ ತಪಸ್ಸು ಮಾಡಲು ಈ ಪ್ರದೇಶ ಆರಿಸಿಕೊಂಡಿದ್ದರಿಂದ ದೇಗುಲಕ್ಕೆ ಮಹಿಳೆಯರ ಪ್ರವೇಶ ಇಲ್ಲ. ವರ್ಷಕ್ಕೆ ಒಮ್ಮೆ ಮಾತ್ರ



ಊರಿನಲ್ಲಿ ಉತ್ಸವ ನಡೆಯಲಿದ್ದು, ಗ್ರಾಮಕ್ಕೆ ದೇವರ ಉತ್ಸವ ಮೂರ್ತಿ ತೆರಳಿದ ವೇಳೆ ಮಾತ್ರ ಮಹಿಳೆಯರು ದೇವರಿಗೆ ಪೂಜೆ ಸಲ್ಲಿಸುವ ವಿಶಿಷ್ಟ ಸಂಪ್ರದಾಯ ಇಲ್ಲಿನದ್ದಾಗಿದೆ.

ಕಾಂಗ್ರೆಸ್ ಎಲ್ಲರನ್ನು ಸಮಾನವಾಗಿ ಕಾಣುವ ಪಕ್ಷ: ಗಣೇಶ್

■ ಕಾಯಕಯೋಗಿ ಸುದ್ದಿ

ಗುಂಡ್ಲುಪೇಟೆ:– ತಾಲೂಕಿನ ಹಾಲಹಳ್ಳಿ ಗ್ರಾಮದಲ್ಲಿ ನಡೆದ ಕಾಂಗ್ರೆಸ್ ಬೂತ್ ಮಟ್ಟದ ಕಾರ್ಯಕರ್ತರ ಸಭೆ ನಡೆಯಿತು. ಸಭೆಯಲ್ಲಿ ಅಭಿವೃದ್ಧಿ ವಿಚಾರದಲ್ಲಿ ಯಾವುದೆ ತಾರತಮ್ಯ ಮಾಡದೇ ಈಗಾಗಲೇ 63 ಗ್ರಾಮಗಳಿಗೆ ಅನುದಾನವನ್ನು ನೀಡಿದ್ದೇನೆ ಎಂದು ಶಾಸಕ ಎಚ್.ಎಂ. ಗಣೇಶ ಪ್ರಸಾದ್ ತಿಳಿಸಿದರು.

ನಮ್ಮ ತಂದೆಯವರ ಹೇಳುತ್ತಿದ್ದರು ನನಗೆ ಒಂದು ಓಟು ಕಡಿಮೆ ಅದರು ಪರವಾಗಿಲ್ಲ ನಮ್ಮ ಪಕ್ಷದ ಅಭ್ಯರ್ಥಿಗೆ ಒಂದು ಓಟು ಹೆಚ್ಚು ಬರಬೇಕು ಎಂದು ಎಲ್ಲರಿಗೂ ತಿಳಿಸುತ್ತಿದ್ದರು.

ಪಕ್ಷದ ಕಾರ್ಯಕರ್ತರ ಚಟುವಟಿಕೆಗಳು ಚುರುಕು ಗೊಳ್ಳಬೇಕು. ಕಾಂಗ್ರೆಸ್ ಪಕ್ಷದ ಗ್ಯಾರಂಟಿಗಳನ್ನು ಪ್ರತಿ ಮನೆ ಮನೆಗೆ ತಿಳಿಸಿ ಇದು ಪಕ್ಷದ ಕಾರ್ಯವೈಖರಿ ಮತ್ತು ಸಂಘಟನೆಗೆ ಅನುಕೂಲಕರವಾಗಿದೆ. ಕೇಂದ್ರ ಸರ್ಕಾರವು ನಮ್ಮ ಸರ್ಕಾರದ ಗ್ಯಾರಂಟಿ ಬಗ್ಗೆ ಲಘುವಾಗಿ ಮಾತನಾಡುತ್ತಿದ್ದಾರೆ.

ರೈತರ ಬಗ್ಗೆ ಚಿಂತೆಯಿಲ್ಲ ಕಾರ್ಮಿಕರು, ಯುವಕರು ಹಾಗೂ ಉದ್ಯೋಗದ ಬಗ್ಗೆ ಚಿಂತೆ ಇಲ್ಲ ಎಂದು ಆರೋಪಿಸಿದರು.

ಕಾಂಗ್ರೆಸ್ ಪಕ್ಷ ಎಲ್ಲರನ್ನು ಸಮಾನವಾಗಿ ಕಾಣುವ ಪಕ್ಷ . ಭೇದ ಭಾವವಿಲ್ಲದೇ ಎಲ್ಲರಿಗೂ ಸಹಕರಿಸುತ್ತೇನೆ. ಬಿಜೆಪಿಯವರು ಸುಳ್ಳು ಭರವಸೆಯನ್ನು ನೀಡುತ್ತಿದ್ದಾರೆ. ನನ್ನ ಮೇಲೆ ಆರೋಪ ಮಾಡುವುದು ಸತ್ಯಕ್ಕೆ ದೂರವಾದ



ಮಾತು. ಏಕೆಂದರೆ ನಾನು ತಂದಂತಹ 110 ಕೋಟಿ ಅನುದಾನವನ್ನು ದಾಖಲೆ ಸಮೇತವಾಗಿ ತೋರಿಸುತ್ತೇನೆ. ಆದರೆ ಅವರು ಅದನ್ನು ನಮ್ಮ ಅನುದಾನ ಎಂಬುದು ಸರಿಯಲ್ಲ ಎಂದರು.

ಮಡಹಳ್ಳಿ ರಸ್ತೆಗೆ ಹೊಂದಿಕೊಂಡಂತಿರುವ ರಸ್ತೆಯಲ್ಲಿ ಅವರ ಕಲ್ಯಾಣ ಮಂಟಪ ಕೂಡ ಇದೆ. ಅವರು ಆ ರಸ್ತೆಯನ್ನೆ ಅಭಿವೃದ್ಧಿ ಮಾಡದವರು ಇನ್ನು ತಾಲೂಕನ್ನು ಹೇಗೆ ಅಭಿವೃದ್ಧಿ ಮಾಡಲು ಸಾಧ್ಯ ಎಂದು ತಿಳಿಸಿದರು.

ಹಿಂದಿನ ಚುನಾವಣೆಯನ್ನು ಪ್ರತಿಷ್ಟೆಯಾಗಿ ತೆಗೆದುಕೊಂಡು ನನ್ನ ಗೆಲುವಿಗೆ ಹೆಚ್ಚಿನ ರೀತಿಯಲ್ಲಿ ಸಹಕರಿಸಿದ್ದೀರಿ. ಅದಕ್ಕಿಂತ ಹೆಚ್ಚಾಗಿ ಈ ಚುನಾವಣೆಯಲ್ಲಿ ನಮ್ಮ ಪಕ್ಷದ ಅಭ್ಯರ್ಥಿ ಗೆಲುವಿಗೆ ಸಹಕರಿಸಬೇಕು. ಬಿಜೆಪಿಯವರು ನಮ್ಮ ಪಕ್ಷದ ಅಭ್ಯರ್ಥಿಯ ಪರ ಇಲ್ಲ ಸಲ್ಲದ ಆರೋಪಗಳನ್ನುಮಾಡುವುದು ಸಹಜ. ಯಾಕೆಂದರೆ ಅವರ ತಂದೆಯವರು 6 ಬಾರಿ ಶಾಸಕರಾಗಿ ಮತ್ತು ಸಚಿವರಾಗಿದ್ದಾರೆ. ರಾಜಕೀಯ ಕುಟುಂಬದಿಂದ ಬಂದಂತಹ ವ್ಯಕ್ತಿ ಅವರಿಗೂ ಕೂಡ ರಾಜಕೀಯ ಅನುಭವ ಇದೆ. ನಮ್ಮ ಕಾಂಗ್ರೆಸ್ ಅಭ್ಯರ್ಥಿಯನ್ನು ಗೆಲ್ಲಿಸಿದರೆ ನಿಮ್ಮ ಕೈಗೆ ಸಿಗುವುದಿಲ್ಲ ಎಂದು ಬಿಜೆಪಿಯವರು ಸುಳ್ಳು ಹೇಳುತ್ತಿದ್ದಾರೆ ಎಂದರು.

ಪಟ್ಟಣದಲ್ಲಿ ನೀರಿನ ಸಮಸ್ಯೆ ಕೃತಕ ಸಮಸ್ಯೆ ಹೊರತು ಯಾವುದೇ ಸಮಸ್ಯೆ ಎದುರಾಗಿಲ್ಲ ಇದು ಕೆಲವು ಕಿಡಿಗೇಡಿಗಳಿಂದ ಆಗುವಂತಹ ಕೆಲಸವಾಗಿದೆ. ನೀರಿನ ಸಮಸ್ಯೆಯಾಗದಂತೆ ಸಹಕರಿಸಿ ಎಂದು ಪುರಸಭೆ ಮುಖ್ಯಾಧಿಕಾರಿ ಅವರಿಗೆ ಕಟ್ಟಾಜ್ಞೆಯನ್ನು ಮಾಡಿದ್ದೇನೆ. ಮಾನವಿಯತೆ ಬಹಳ ಮುಖ್ಯ ಹಣದಿಂದ ಎಲ್ಲವನ್ನೂ ಪಡೆದುಕೊಳ್ಳಲು ಸಾಧ್ಯವಿಲ್ಲ. ಏಕೆಂದರೆ ನಮ್ಮ ಮನೆಗೆ ಬಂದಾಗ ನಮ್ಮ ಕೈಯಲ್ಲಿ ಆದಷ್ಟು ಸಹಾಯ ನೀಡುತ್ತೀದ್ದೇನೆ ಹೊರತು ಓಟ್ ಬ್ಯಾಂಕ್ ನಿಂದ ರಾಜಕೀಯ ಮಾಡುತ್ತಿಲ್ಲ. ಮತ್ತು ಯಾವುದೇ ರೀತಿ ಭರವಸೆಯನ್ನು ನೀಡುವುದಿಲ್ಲ. ಮುಂದಿನ ದಿನಗಳಲ್ಲಿ ತಾಲೂಕಿನ ಮತ್ತು ಗ್ರಾಮೀಣ ಭಾಗದ ಅಭಿವೃದ್ಧಿ ಹೆಚ್ಚಿನ ಅನುದಾನ ತಂದು ತಾಲೂಕಿನ್ನು ಅಭಿವೃದ್ಧಿ ಪಡಿಸುವತ್ತ ಗಮನ ಹರಿಸುತ್ತೇನೆ ಎಂದು ತಿಳಿಸಿದರು.

ಇದೇ 29 ರಂದು ಮಧ್ಯಾಹ್ನ 3 ಗಂಟೆಗೆ ಬಸವ ಭವನ ಕಲ್ಯಾಣ ಮಂಟಪದಲ್ಲಿ ಚಾಮರಾಜನಗರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯ ಪೂರ್ವ ಭಾವಿ ಸಭೆ ಏರ್ಪಡಿಸಲಾಗಿದೆ. ಈ ಸಭೆಗೆ ಚಾಮರಾಜನಗರ ಜಿಲ್ಲಾ ಉಸ್ತುವರಿ ಸಚಿವರಾದ ಕೆ ವೆಂಕಟೇಶ ಮತ್ತು ಮಾನ್ಯ ಸಮಾಜ ಕಲ್ಯಾಣ ಇಲಾಖೆ ಸಚಿವರಾದ ಎಚ್.ಸಿ.ಮಹದೇವಪ್ಪ ಭಾಗವಹಿಸಲಿದ್ದಾರೆ. ಈ ಸಭೆಗೆ ಹಿರಿಯ ಮುಖಂಡರು ಹಾಗೂ ಸದಸ್ಯರು ಮತ್ತು ಕಾಂಗ್ರೆಸ್ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಬರಬೇಕೆಂದು ಮನವಿ ಮಾಡಿಕೊಂಡರು.

ಇದೆ ಸಂದರ್ಭದಲ್ಲಿ ಮಾಜಿ ಸಂಸದ ಎ.ಸಿದ್ದರಾಜು, ಮಾಜಿ ಕಾಡಾ ಅಧ್ಯಕ್ಷ ಎಚ್. ಎಸ್ ನಂಜಪ್ಪ, ಕಾಡಾ ಅಧ್ಯಕ್ಷ ಮರಿಸ್ವಾಮಿ, .ಚಾಮುಲ್ ಮಾಜಿ ನಿರ್ದೇಶಕ ನಂಜುಂಡ ಪ್ರಸಾದ್, ಮಾಜಿ ಜಿಪಂ ಉಪಾಧ್ಯಕ್ಷ ಕಬ್ಬಳ್ಳಿ ಮಹೇಶ್, ಚುನಾವಣಾ ಉಸ್ತುವಾರಿ ಎಚ್ ಸಿ ಬಸವರಾಜು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಾಕಶೇಖರ್, ಮುನಿರಾಜು, ನಾಜೀಮುದ್ದಿನ್, ಕೆರೆಹಳ್ಳಿ ನವೀನ್, ಪ್ರಭುಸ್ವಾಮಿ, ಮಾಜಿ ಜಿ.ಪಂ ಸದಸ್ಯರಾದ ಶಿವಸ್ವಾಮಿ, ಮಳವಳ್ಳಿ ಚೆನ್ನಪ್ಪ, ಪುರಸಭೆ ಸದಸ್ಯರು ರಮೇಶ್, ಅಣ್ಣಯ್ಯಸ್ವಾಮಿ ಹಾಗೂ ಇನ್ನಿತರ ಮುಖಂಡರುಗಳು ಹಾಜರಿದ್ದರು.

ಮಲೆ ಮಹದೇಶ್ವರಸ್ವಾಮಿ 3.13 ಕೋಟಿ ಒಡೆಯ

■ ಕಾಯಕಯೋಗಿ ಸುದ್ದಿ

ಚಾಮರಾಜನಗರ: ಹನೂರು ತಾಲ್ಲೂಕಿನ ಶ್ರೀ ಮಲೆ ಮಹದೇಶ್ವರ ಬೆಟ್ಟದಲ್ಲಿ ಮಂಗಳವಾರ ನಡೆದ ಹುಂಡಿ ಹಣ ಎಣಿಕೆಯಲ್ಲಿ ಈ ಬಾರಿ 25 ದಿನಗಳ ಅವಧಿಯಲ್ಲಿ ದಾಖಲೆಯ 3.13 ಕೋಟಿ ರೂ. ಸಂಗ್ರಹವಾಗಿದೆ.



ಮ. ಬೆಟ್ಟದ ಬಸ್ ನಿಲ್ದಾಣದ ಬಳಿಯ ವಾಣಿಜ್ಯ ಸಂಕೀರ್ಣದಲ್ಲಿ ಮಂಗಳವಾರ ಬೆಳಿಗ್ಗೆ 8 ಗಂಟೆಯಲ್ಲಿ ಸಾಲೂರು ಬೃಹನ್ ಮಠದ ಶ್ರೀ ಶಾಂತ ಮಲ್ಲಿಕಾರ್ಜುನ ಸ್ವಾಮಿ ಅವರ ಸಮ್ಮುಖದಲ್ಲಿ ಹುಂಡಿಗಳನ್ನು ತೆರೆಯಲಾಯಿತು. ಬಳಿಕ ಸಿಸಿ ಕ್ಯಾಮೆರಾ ಕಣ್ಣಾವಲಿನಲ್ಲಿ ಎಣಿಕೆ ಕಾರ್ಯ ಪ್ರಾರಂಭಿಸಲಾಯಿತು. ಎಣಿಕೆ ಕಾರ್ಯವು ಸಂಜೆ 10:30ರ ಗಂಟೆಯವರೆಗೂ ನಡೆಯಿತು. ಈ ಬಾರಿ ಮಹಾಶಿವರಾತ್ರಿ ಜಾತ್ರಾ ಮಹೋತ್ಸವ, ಸರ್ಕಾರಿ ರಜಾ ದಿನಗಳು ಹಾಗೂ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಲ್ಲೊಂದಾದ ಶಕ್ತಿ ಯೋಜನೆಯ ಉಚಿತ ಪ್ರಯಾಣದ ಹಿನ್ನೆಲೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಹೆಚ್ಚಿನ ಭಕ್ತರು ದೇವಸ್ಥಾನಕ್ಕೆ ಭೇಟಿ ನೀಡಿದ್ದರಿಂದ ಹರಕೆಯ ರೂಪದಲ್ಲಿ ಹಣ ಚಿನ್ನ ಹಾಗೂ ಬೆಳ್ಳಿ ಪದಾರ್ಥಗಳನ್ನು ಹುಂಡಿಗೆ ಹಾಕಿದ್ದಾರೆ. ಹುಂಡಿಗಳ ಎಣಿಕೆಯಲ್ಲಿ ಈ ಬಾರಿ 3,13,00,931 ರೂ. ಸಂಗ್ರಹವಾಗಿದೆ. ಚಿನ್ನ 47 ಗ್ರಾಂ ಮತ್ತು ಬೆಳ್ಳಿ 2 ಕೆಜಿ 309 ಗ್ರಾಂ ಸಂಗ್ರಹವಾಗಿದೆ.

ಇದಲ್ಲದೆ ಯು ಎಸ್ ಎ, ಬಾಂಗ್ಲಾದೇಶ ನೇಪಾಳ , ಮಲೇಶಿಯಾ ಸೇರಿದಂತೆ 7 ವಿದೇಶಿ ನೋಟುಗಳು, ಇದಲ್ಲದೆ ಚಲಾವಣೆಯಲ್ಲಿ ಇಲ್ಲದ 2000 ಮುಖಬೆಲೆಯ 26 ನೋಟುಗಳು ಹುಂಡಿಯಲ್ಲಿ ಹಾಕಿದ್ದಾರೆ

ಶ್ರೀ ಮಲೆ ಮಹದೇಶ್ವರ ಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಎ.ಈ ರಫು, ಉಪ ಕಾರ್ಯದರ್ಶಿ ಚಂದ್ರಶೇಖರ್, ಲೆಕ್ಕ ಅಧೀಕ್ಷಕ ನಾಗೇಶ್, ಬ್ಯಾಂಕ್ ಆಫ್ ಬರೋಡ ನೌಕರರು ಹಾಗೂ ಪ್ರಾಧಿಕಾರದ ಸಿಬ್ಬಂದಿ ಎಣಿಕೆ ಕಾರ್ಯದಲ್ಲಿ ಭಾಗವಹಿಸಿದ್ದರು.

ನಗರದ ಜಿಲ್ಲಾಡಳಿತದ ಭವನದ ಮುಂಭಾಗದಲ್ಲಿ ಆಕರ್ಷಕ ಮತದಾರರ ಆಮಂತ್ರಣ ಪತ್ರ ಅನಾವರಣ

ಚಾಮರಾಜನಗರ: ಜಿಲ್ಲೆಯಲ್ಲಿ ಈ ಬಾರಿ 18 ವರ್ಷ ತುಂಬಿದ ನೂತನ ಮತದಾರರನ್ನು ಮತಗಟ್ಟೆಗಳಿಗೆ ಸೆಳೆದು ಮತದಾನ ಪ್ರಮಾಣವನ್ನು ಹೆಚ್ಚಿಸುವ ಸಲುವಾಗಿ ನಗರದ ಜಿಲ್ಲಾಡಳಿತ ಭವನದ ಮುಂಭಾಗ (ಗೇಟ್)ದಲ್ಲಿ ಆಕರ್ಷಕವಾಗಿ ವಿನ್ಯಾಸಗೊಳಿಸಿ ಅಳವಡಿಸಲಾಗಿರುವ ಬೃಹತ್ ಮತದಾರರ ಬೃಹತ್ ಅಮಂತ್ರಣ ಪತ್ರವನ್ನು ಅನಾವರಣಗೊಳಿಸಲಾಯಿತು. ಲೋಕಸಭಾ ಸಾರ್ವತ್ರಿಕ ಚುನಾವಣೆ–2024ರ ಅಂಗವಾಗಿ ಜಿಲ್ಲಾ ಸ್ವೀಪ್ ಕಾರ್ಯಕ್ರಮದಡಿ ನಗರದಲ್ಲಿಂದು ಹಮ್ಮಿಕೊಳ್ಳಲಾಗಿದ್ದ ಜಾಗೃತಿ ಜಾಥಾ ಸಂದರ್ಭದಲ್ಲಿ ಜಿಲ್ಲೆಯ ಯುವ ಮತದಾರರನ್ನು ಮತಗಟ್ಟೆಗಳಿಗೆ ಕರೆತರಲು ಮದುವೆಯ ಆಹ್ವಾನ ಪತ್ರದ ಮಾದರಿಯಲ್ಲಿ ತಯಾರಿಸಿ ಅಳವಡಿಸಲಾಗಿರುವ ಏ.26ರಂದು 'ಮತದಾನದ ಮಮತೆಯ ಕರೆಯೋಲೆ' ಆಮಂತ್ರಣ ಪತ್ರವನ್ನು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಶಿಲ್ಪಾ ನಾಗ್ ಅವರು



ಉದ್ಘಾಟಿಸಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಆನಂದ್ರ ಪ್ರಕಾಶ್ ಮೀನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು, ಬಿ.ಆರ್.ಟಿ ಹುಲಿ ಸಂರಕ್ಷಿತ ಪ್ರದೇಶದ ಅರಣ್ಯ ಸಂರಕ್ಷಣಾಧಿಕಾರಿ ದೀಪಾ ಜೆ. ಕಂಟ್ರಾಕ್ಟರ್, ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಜಿಲ್ಲಾ ಚುನಾವಣಾ ರಾಯಭಾರಿ ದೀಪಾ ಬುದ್ದೆ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಪಿ. ಲಕ್ಷ್ಮೀ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಮಂಜುನಾಥ್, ಕೃಷ್ಣಪ್ಪ, ಇತರರು ಇದ್ದರು.

ನಾನು ಯಾವುದೇ ಕಾರಣಕ್ಕೂ ಕಾಂಗ್ರೆಸ್ ಪಕ್ಷ ಬಿಡುವುದಿಲ್ಲ: ಲೋಕೇಶ್ವರ್

■ ಕಾಯಕಯೋಗಿ ಸುದ್ದಿ

ತಿಪಟೂರು: ಲೋಕಸಭಾ ಚುನಾವಣೆ ಹತ್ತಿರವಾಗುತ್ತಿದ್ದಂತೆ ತಾಲೂಕಿನ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರಲ್ಲಿ ಲೋಕೇಶ್ವರ್ ಕಾಂಗ್ರೆಸ್ ತೊರೆದು ಬಿಜೆಪಿ ಸೇರುತ್ತಾರೆಂಬ ಊಹಾಪೋಹದ ಮಾತುಗಳು ಹರಿದಾಡುತ್ತಿವೆ. ಇದಕ್ಕೆ ಪೂರಕವಾಗಿ ಕೆಲವೊಂದಷ್ಟು ಜನ ಉರಿಯೋ ಬೆಂಕಿಗೆ ತುಪ್ಪ ಸುರಿಯುವ ಕೆಲಸವನ್ನು ಮಾಡುತ್ತಿದ್ದಾರೆಂದು ಲೋಕೇಶ್ವರ್ ಬೇಸರ ವ್ಯಕ್ತಪಡಿಸಿದರು.

ಕೆಲ ದಿನಗಳ ಹಿಂದೆ ಶಿವಮೊಗ್ಗದಲ್ಲಿ ಭಾರತೀಯ ಜನತಾ ಪಾರ್ಟಿ ಪಕ್ಷದ ಕಾರ್ಯಕ್ರಮವು ಮಾನ್ಯ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಅದ್ಧೂರಿಯಾಗಿ ನಡೆಯಿತು.ಅದೇ ಸಂದರ್ಭದಲ್ಲಿ ಕೆಲವೊಂದಷ್ಟು ತಾಲೂಕಿನ ಜನ ಹೋಗಿ ಮಾಜಿ ಮುಖ್ಯಮಂತ್ರಿಗಳಾದ



ಬಿ.ಎಸ್.ಯಡಿಯೂರಪ್ಪ ಮತ್ತು ಬಿಜೆಪಿ ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರರನ್ನು ಭೇಟಿ ಮಾಡಿ ಕಾಂಗ್ರೆಸ್ ಮುಖಂಡ ಲೋಕೇಶ್ವರ್ ಅವರನ್ನು ಮತ್ತೆ ಬಿಜೆಪಿ ಪಕ್ಷಕ್ಕೆ ಕರೆ ತರುವಂತೆ ಮನವಿ ಮಾಡಿದ್ದು, ಈ ವಿಚಾರವಾಗಿ ನನಗೆ ಇತ್ತೀಚಿಗಷ್ಟೇ ತಿಳಿದಿದ್ದು, ಸದ್ಯದಲ್ಲೇ ಚುನಾವಣೆ ಹತ್ತಿರ ಬರುತ್ತಿದ್ದು, ನಾನು ಪಕ್ಷ ಬಿಡುವುದಾಗಿ ಯಾವುದೇ ತೀರ್ಮಾನಕ್ಕೆ ಬಂದಿಲ್ಲ,

ನಾನು ಪಕ್ಷ ಬಿಡುತ್ತಿದ್ದೇನೆ ಎಂಬ ಸುಳ್ಳು ವದಂತಿಯನ್ನು ಅಬ್ಬಿಸಿದ್ದಾರೆ ಅಷ್ಟೇ. ಶ್ರೀರಾಮ ಸೇನೆ,ಬಜರಂಗದಳ,ಕೆಲ ಹಿಂದೂ ಸಂಘಟನೆಗಳ ಕಾರ್ಯಕರ್ತರು ಮತ್ತು ಬಿಜೆಪಿ ಪಕ್ಷದ ಕಾರ್ಯಕರ್ತರುಗಳು ಹೋಗಿ ಬಿಜೆಪಿ ವರಿಷ್ಠರನ್ನು ಕಂಡು ಮನವಿ ಮಾಡಿದ್ದಾರೆ, ಎಂಬ ವಿಚಾರ ನನಗೆ ತಿಳಿದು ಬಂದ ಬೆನ್ನಲ್ಲೇ ನನ್ನ ಕಾರ್ಯಕರ್ತರೊಂದಿಗೆ ಸಭೆ ನಡೆಸಿದ್ದೇನೆ.ವಿಧಾನಸಭಾ ಚುನಾವಣೆಯ ಫಲಿತಾಂಶದ ನಂತರ ತಾಲೂಕಿನ ಶಾಸಕರು ನನಗೆ ಮತ್ತು ನನ್ನ ಕಾರ್ಯಕರ್ತರಿಗೆ ಸೂಕ್ತ ಸ್ಥಾನಮಾನ ಕೊಡುತ್ತಿಲ್ಲವೆಂದು, ನೊಂದ ಕಾಂಗ್ರೆಸ್ ಕಾರ್ಯಕರ್ತರ ಸಭೆಯನ್ನು ಹಲವು ಬಾರಿ ನಡೆಸಿದ್ದೇನೆ.

ಆದರೆ ಈವರೆಗೂ ಶಾಸಕರಾಗಲಿ ಪಕ್ಷದ ವರಿಷ್ಠರಲ್ಲಿ ನಮ್ಮ ಮಾತಿಗೆ ಬೆಲೆ ಕೊಡುವುದರ ಜೊತೆಗೆ ಸ್ಪಂದಿಸುತ್ತಿಲ್ಲ. ಇದರಿಂದಾಗಿ ಪಕ್ಷಕ್ಕೆ ನಿಷ್ಠಾವಂತರಾಗಿ ದುಡಿದ ನಮಗೆ ಬೆಲೆ ಇಲ್ಲದಂತಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು. ಈ ವಿಚಾರವನ್ನು ಗಣನೀಯವಾಗಿ ಪರಿಗಣಿಸಿದ ಲೋಕಸಭಾ ಚುನಾವಣಾ ಅಭ್ಯರ್ಥಿಗಳು ತಮಗೆ ಬೆಂಬಲಿಸುವಂತೆ ದೂರವಾಣಿ ಕರೆ ಮಾಡಿ ಮಾತನಾಡಿದ್ದಾರೆ,ಚುನಾವಣಾ ಸಂದರ್ಭದಲ್ಲಿ ಇವೆಲ್ಲ ಸರ್ವೇಸಾಮಾನ್ಯ. ಕೂಡಲೇನಮ್ಮ ಕಾಂಗ್ರೆಸ್ ಪಕ್ಷದ ವರಿಷ್ಠರು ನಮ್ಮ ಕಾರ್ಯಕರ್ತರ ಬೇಡಿಕೆಗಳನ್ನು ಈಡೇರಿಸದಿದ್ದರೆ, ಲೋಕಸಭಾ ಚುನಾವಣೆಯ ಪ್ರಚಾರದಿಂದ ದೂರ ಉಳಿಯುವುದಾಗಿ, ನಗರದ ಖಾಸಗಿ ಹೋಟೆಲ್ ಕೌಸ್ತುಭದಲ್ಲಿ ಆಯೋಜನೆ ಮಾಡಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ನಿವೃತ್ತ ಎಸಿಪಿ ಹಾಗೂ ಕಾಂಗ್ರೆಸ್ ಮುಖಂಡ ಲೋಕೇಶ್ವರ್ ಮಾತನಾಡಿದರು.

ಇದೇ ಸಂದರ್ಭದಲ್ಲಿ ಸೊಪ್ಪುಗಣೇಶ್, ಭಾರತಿ ಮಂಜುನಾಥ್, ವನಿತಾ ಪ್ರಸನ್ನ ಕುಮಾರ್, ಶಿವಶಂಕರ್, ಬಸವರಾಜು,ಕೆಲ ಕಾಂಗ್ರೆಸ್ ಮುಖಂಡರು,ಕಾರ್ಯಕರ್ತರು ಮತ್ತು ಲೋಕೇಶ್ವರ್ ಅಭಿಮಾನಿಗಳು ಹಾಜರಿದ್ದರು.

ಉದ್ಯಮಿಗಳಾದ ಮುಖೇಶ್ ಅಂಬಾನಿ–ಅನಿಲ್ ಅಂಬಾನಿ ಮೇಲೆ ಕೇಂದ್ರ ಸರ್ಕಾರ ಕ್ರಮ ಏಕೆ ಜರುಗಿಸುತ್ತಿಲ್ಲ

ತಿಪಟೂರು: ಧರ್ಮದ ವಿಚಾರವನ್ನು ಮುನ್ನೆಲೆಗೆ ತಂದು ವಿಜ್ಞಾನ, ತಂತ್ರಜ್ಞಾನವನ್ನು ನಗಣ್ಯ ಮಾಡುತ್ತಿರುವುದೇ ಕೇಂದ್ರ ಸರ್ಕಾರದ ಸಾಧನೆ ಎಂದು ರಾಜ್ಯ ಸರ್ಕಾರದ ಗೃಹ ಸಚಿವ ಜಿ.ಪರಮೇಶ್ವರ್ ಛೇಡಿಸಿದರು.

ನಗರದ ಸರ್ಕಾರಿ ನೌಕರರ ಭವನದಲ್ಲಿ ತಿಪಟೂರು ತಾಲ್ಲೂಕು ಕಾಂಗ್ರೆಸ್ ಸಮಿತಿಯಿಂದ ಹಮ್ಮಿಕೊಂಡಿದ್ದ ತಾಲ್ಲೂಕು ಕಾಂಗ್ರೆಸ್ ಪದಾಧಿಕಾರಿಗಳ ಮತ್ತು ಮುಖಂಡರುಗಳ ಸಭೆಯನ್ನು ಉದ್ಘಾಟಿಸಿ ಮಾತನಾಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಧರ್ಮದ ವಿಚಾರವನ್ನು ಮುಂದಿಟ್ಟುಕೊಂಡು ದೇಶದ ಭವಿಷ್ಯವನ್ನು ಹಾಳು ಮಾಡುವ ಕಡೆ ಕೇಂದ್ರ ಸರ್ಕಾರ ಸಾಗಿದೆ. ದೇಶದಲ್ಲಿ ಬಿಜೆಪಿ ಪಕ್ಷದ ಚುನಾಯಿತ ಜನಪ್ರತಿನಿಧಿಗಳು ಸಂವಿಧಾನ ವಿರೋಧಿ ಹೇಳಿಕೆ ನೀಡಿದಾಗ ಕ್ರಮ ಜರುಗಿಸುತ್ತಿಲ್ಲ, ಆದರೆ ಬೇರೆ ಪಕ್ಷದ ಯಾವುದೇ ವ್

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ-5 | 28-03-2024

ಹಾಸನ-ರಾಮನಗರ

ಸುಭದ್ರಭಾರತ ನಿರ್ಮಾಣಕ್ಕೆ ಮೋದಿಯವರ ಆಡಳಿತ ಅತ್ಯವಶ್ಯಕ

■ ಕಾಯಕಯೋಗಿ ಸುದ್ದಿ

ಮಳವಳ್ಳಿ:ಸುಭದ್ರ ಭಾರತ ನಿರ್ಮಾಣಕ್ಕಾಗಿ,ದೇಶದ ಪ್ರಗತಿಗಾಗಿ ಪ್ರತಿಯೊಬ್ಬರೂ ಪ್ರದಾನಿ ನರೇಂದ್ರ ಮೋದಿಯವರನ್ನು ಬೆಂಬಲಿಸುವ ಮೂಲಕ ರಾಜ್ಯದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಕೂಟದ ಅಭ್ಯರ್ಥಿಗಳನ್ನು ಗೆಲ್ಲಿಸುವಂತೆ ಜಾತ್ಯಾತೀತ ಜನತಾದಳದ ರಾಷ್ಟ್ರೀಯ ಉಪಾಧ್ಯಕ್ಷರು ಹಾಗೂ ಮಾಜಿ ಪೋಲಿಸ್ ಕಮಿಷನರ್ ಜ್ಯೋತಿ ಪ್ರಕಾಶ್ ಮಿರ್ಜಿ ಕರೆ ನೀಡಿದರು.

ತಾಲೂಕಿನ ಹಲಗೂರು, ಹಾಡ್ಲಿ, ಕಿರುಗಾವಲು,ಚಿಕ್ಕಮೂಲಗೂಡು ಬೇಟಿ ನೀಡಿದ ಅವರು ನಂತರ ಧನಗೂರು, ಪೂರಿಗಾಲಿ, ಪಟ್ಟಣದ ಶಂಕರಮಠಕ್ಕೆ ಬೇಟಿ ನೀಡಿ ಶ್ರೀಗಳ ಅರ್ಶೀವಾದ ಪಡೆದು ಪ್ರಸ್ತುತ ರಾಜಕೀಯ ವಿದ್ಯಾಮನಗಳ ಬ್ಗಗೆ ಚರ್ಚೆ ನಡೆಸಿ ಕಾರ್ಯಕರ್ತರೊಂದಿಗೆ ಮಾಗನೂರಿನ ಶ್ರೀ ಶಿವರಾತ್ರೀಶ್ವರ ಬಡಾವಣೆಯ ನಾಡಗೌಡರ ನಿವಾಸಕ್ಕೆ ತೆರಳಿ ಅಭಿನಂಧನೆ ಸ್ವೀಕರಿಸಿ ಅವರು ಮಾತನಾಡಿದ ಅವರು ಸುಭದ್ರ ಭಾರತ ನಿರ್ಮಾಣಕ್ಕಾಗಿ , ದೇಶದ ಸರ್ವಾಂಗಿಣ ಪ್ರಗತಿಗಾಗಿ ಮೋದಿಯವರ ಆಢಳಿತ ಅತ್ಯವಶ್ಯಕವಾಗಿದೆ.ಈ ಈ ದಿಶೆಯಲ್ಲಿ ನಮ್ಮ ನಾಯಕರಾದ ಎಚ್ ಡಿ ದೇವೇಗೌಡರು ,ಎಚ್ ಡಿ ಕುಮಾರಸ್ವಾಮಿ ಅವರು ಬಿಜೆಪಿಯೊಂದಿಗೆ ಮೈತ್ರಿ ಮಾಡಿಕೊಂಡು ರಾಜ್ಯದಲ್ಲಿ ಜೆಡಿಎಸ್ ಬಿಜೆಪಿ ಸರ್ಕಾರ ಬರಲು ಹಾಗೂ ಕೇಂದ್ರದಲ್ಲಿ ಏನ್ ಡಿ ಎ ಸರ್ಕಾರ ಬರಲು ಹೊಂದಾಣಿಕೆ ಮಾಡಿ ಕೊಂಡಿದ್ದಾರೆಂದರು. ಬಿಜೆಪಿ ಮತ್ತು ಜೆಡಿಎಸ್ ಕಾರ್ಯ ಕರ್ತರಗಳು, ಮುಖಂಡರುಗಳು ತಮ್ಮ ತಮ್ಮ ಭಿನ್ನಾಭಿಪ್ರಾಯಗಳನ್ನು ಬದಿಗೊತ್ತಿ ದೇಶದ ಸುಭದ್ರತೆಗಾಗಿ ನರೇಂದ್ರ ಮೋದಿ ಅವರನ್ನು ಬೆಂಬಲಿಸಿ, ಮಂಡ್ಯ ಜಿಲ್ಲೆಯಲ್ಲಿ ಮೈತ್ರಿ ಅಭ್ಯರ್ಥಿ ಮಾಜಿ ಮುಖ್ಯಮಂತ್ರಿಗಳಾದ ಎಚ್ ಡಿ ಕುಮಾರಸ್ವಾಮಿ ಅವರ ಗೆಲುವಿಗೆ ಎಲ್ಲರೂ ಶ್ರಮಿಸುವಂತೆ ಕರೆ ನೀಡಿದರು.

ಈ ಸಂದರ್ಭದಲ್ಲಿ ಮುಖಂಡರಾದ ಕನ್ನಹಳ್ಳಿ ಪ್ರಸಾದ್,ಆಲದಹಳ್ಳಿ ಕಾಂತರಾಜು ಮುಖಂಡ, ಚಂದ್ರು, ಗ್ರಾಮ ಪಂಚಾಯಿತಿ ಸದಸ್ಯ ನಂಜುಂಡ, ಹಿರಿಯ ವಕೀಲರಾದ ರಾಜಶೇಖರ್ ಮುಖಂಡರಾದ ಶಂಭುಗೌಡ ಆರ್ ಪಾಟೀಲ್, ರಾಜ್ಯ ರೈತ ಮೋರ್ಚಾ ಪ್ರಧಾನ ಕಾರ್ಯದರ್ಶಿ ಎಚ್ ಆರ್ ಅಶೋಕ್ ಕುಮಾರ್ ವಕೀಲರಾದ ಈರಣ್ಣ ಸ್ಥಳೀಯ ಮುಖಂಡರುಗಳು ಕಾರ್ಯ ಕರ್ತರು, ನಾಡಗೌಡರ ಕುಟುಂಬದವರು ಉಪಸ್ಥಿತರಿದ್ದರು

ನಾಮಪತ್ರ ಸಲ್ಲಿಕೆಗೂ ಮುನ್ನ ದೇವಾಲಯ, ಮಠಕ್ಕೆ ಭೇಟಿ ನೀಡಿದ ಡಿಕೆಸು

■ ಕಾಯಕಯೋಗಿ ಸುದ್ದಿ

ಕನಕಪುರ : ಸಂಸದ ಡಿ.ಕೆ. ಸುರೇಶ್ ನಾಳೆ ಬೆಳಗ್ಗೆ ರಾಮನಗರದಲ್ಲಿ ನಾಮಪತ್ರ ಸಲ್ಲಿಕೆ ಮಾಡುವ ಮುನ್ನ ಇಂದು ತಾಲೂಕಿನ ದೇವಾಲಯದಲ್ಲಿ ಪೂಜೆ ಸಲ್ಲಿಸಿ, ಮಠಗಳಿಗೆ ಭೇಟಿ ನೀಡಿದರು.

ಬುಧವಾರ ಬೆಳಗ್ಗೆ ತಾಲೂಕಿನ ಕಸಬಾ ಕಲ್ಲಹಳ್ಳಿ ವೆಂಕಟರಮಣಸ್ವಾಮಿ ದೇವಾಲಯಕ್ಕೆ ಆಗಮಿಸಿ ದೇವರಿಗೆ ವಿಶೇಷ ಪೂಜೆ ಸಲ್ಲಿಸಿದ ನಂತರ ನಗರದ ಶ್ರೀ ದೇಗುಲ ಮಠಕ್ಕೆ ತೆರಳಿ ಪೂಜೆ ಸಲ್ಲಿಸಿದ ನಂತರ ಮಠಾಧೀಶರಾದ ಮುಮ್ಮಡಿ ನಿರ್ವಾಣ ಮಹಾಸ್ವಾಮಿಗಳ ಆಶೀರ್ವಾದ ಪಡೆದು, ಮರಳೇಗವಿ ಮಠಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿ ಡಾ. ಶಿವರುದ್ರ ಮಹಾಸ್ವಾಮಿಗಳ ಆಶೀರ್ವಾದ ಪಡೆದರು. ಕೋಡಿಹಳ್ಳಿ ಆಗಮಿಸಿ ಅವರ ತಾಯಿ ಗೌರಮ್ಮನವರ ಆಶೀರ್ವಾದ ಪಡೆದರು.

ಕಲ್ಲಹಳ್ಳಿ ಹಾಗೂ ಮರಳೇಗವಿ ಮಠಕ್ಕೆ ಆಗಮಿಸಿದಾಗ ಕಾಂಗ್ರೆಸ್ ಪಕ್ಷದ ನೂರಾರು






ಮುಖಂಡರು ಕಾರ್ಯಕರ್ತರು ಸಂಸದರನ್ನು ಸ್ವಾಗತಿಸಿ ಶುಭ ಹಾರೈಸಿದರು.

ವಿಧಾನ ಪರಿಷತ್ ಸದಸ್ಯ ಎಸ್. ರವಿ, ಬಿಡಿಸಿಸಿ ಬ್ಯಾಂಕ್ ಅಧ್ಯಕ್ಷ ಎಂ. ಡಿ. ವಿಜಯದೇವ್, ಬೆಂಗಳೂರು ಹಾಲು ಒಕ್ಕೂಟದ ಅಧ್ಯಕ್ಷ ರಾಜಕುಮಾರ, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಬಸಪ್ಪ, ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಆರ್. ಕೃಷ್ಣಮೂರ್ತಿ, ನಗರಸಭೆ ಮಾಜಿ ಅಧ್ಯಕ್ಷರುಗಳಾದ ಕೆ.ಎನ್. ದಿಲೀಪ್, ರಾಮಚಂದ್ರ, ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಹೊಸಕೋಟೆ ಪುರುಷೋತ್ತಮ್, ಟಿ. ಎ. ಪಿ.ಸಿ.ಎಂ.ಎಸ್. ಅಧ್ಯಕ್ಷ ಚಂದ್ರಶೇಖರ್, ಮಾಜಿ ಅಧ್ಯಕ್ಷ ತಮ್ಮಣ್ಣಗೌಡ, ಮುಖಂಡರುಗಳಾದ ರಾಯಸಂದ್ರ ರವಿ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರುಗಳು, ನಗರಸಭಾ ಮಾಜಿ ಅಧ್ಯಕ್ಷರು, ಉಪಾಧ್ಯಕ್ಷರುಗಳು ಮುಖಂಡರುಗಳು ಕಾರ್ಯಕರ್ತರು ಹಾಜರಿದ್ದರು

ಮಾ.28ರಿಂದ ನಾಮಪತ್ರ ಸ್ವೀಕಾರ: ಡಾ. ಅವಿನಾಶ್ ಮೆನನ್ ರಾಜೇಂದ್ರನ್

■ ಕಾಯಕಯೋಗಿ ಸುದ್ದಿ

ರಾಮನಗರ: ಕೇಂದ್ರ ಚುನಾವಣಾ ಆಯೋಗದ ಆದೇಶದಂತೆ ಮಾ. 28 ರಿಂದ ಏಪ್ರಿಲ್ 4 ರವರೆಗೆ ಸಾರ್ವತ್ರಿಕ ರಜಾ ದಿನಗಳನ್ನು ಹೊರತುಪಡಿಸಿ, ಉಳಿದ ದಿನಗಳಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಒಂದನೇ ಮಹಡಿಯ ಕೊಠಡಿ ಸಂಖ್ಯೆ 205ರಲ್ಲಿ ನಾಮಪತ್ರಗಳನ್ನು ಸ್ವೀಕರಿಸಲಾಗುವುದು ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ. ಅವಿನಾಶ್ ಮೆನನ್ ರಾಜೇಂದ್ರನ್ ಅವರು ತಿಳಿಸಿದರು.



ಅವರು ಇಂದು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದರು.

ನಾಮಪತ್ರ ಸಲ್ಲಿಸುವ ಅಭ್ಯರ್ಥಿಗಳು ಕಡ್ಡಾಯವಾಗಿ ಕೇಂದ್ರ ಚುನಾವಣಾ ಆಯೋಗದ ಷರತ್ತುಗಳನ್ನು ಪಾಲಿಸಬೇಕು. ನಾಮಪತ್ರ ಸಲ್ಲಿಸುವ ಅಭ್ಯರ್ಥಿಯೊಂದಿಗೆ 4 ಜನ ಪ್ರವೇಶಿಸಲು ಅವಕಾಶವಿರುತ್ತದೆ. ಓರ್ವ ಅಭ್ಯರ್ಥಿಯು 4 ನಾಮಪತ್ರಗಳನ್ನು ಸಲ್ಲಿಸಲು ಅವಕಾಶವಿದ್ದು, ಒಂದು ನಾಮಪತ್ರದ ಜೊತೆ ಠೇವಣಿ ಮೊತ್ತ ಹಾಗೂ ಪೂರ್ಣ ಪ್ರಮಾಣದ ದಾಖಲಾತಿಗಳನ್ನು ಸಲ್ಲಿಸಬೇಕು ಎಂದು ತಿಳಿಸಿದರು.

ಪ್ರತಿದಿನ ಸ್ವೀಕರಿಸುವ ನಾಮಪತ್ರಗಳ ವಿವರಗಳನ್ನು ಅದೇ ದಿನ ಮಧ್ಯಾಹ್ನ 3 ಗಂಟೆಯ ನಂತರ ಜಿಲ್ಲಾಧಿಕಾರಿಗಳ ಕಚೇರಿ ಸಂಕೀರ್ಣದಲ್ಲಿರುವ ನಾಮಫಲಕದಲ್ಲಿ ಅಳವಡಿಸಲಾಗುವುದು ಹಾಗೂ ಚುನಾವಣಾ ಆಯೋಗದ ವೆಬ್‌ಸೈಟಿನಲ್ಲಿಯೂ ಸಹ ಪ್ರಕಟಿಸಲಾಗುವುದು ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಾರ್ತಿಕ್ ರೆಡ್ಡಿ ಅವರು ಮಾತನಾಡಿ, ಚುನಾವಣಾಧಿಕಾರಿಗಳ ಕಚೇರಿಯ 100 ಮೀಟರ್ ವ್ಯಾಪ್ತಿಯ ಪ್ರದೇಶವನ್ನು ಗುರುತಿಸಿ ನಿಷೇಧಾಜ್ಞೆ ಜಾರಿ ಮಾಡಲಾಗುವುದು ಹಾಗೂ ಚುನಾವಣಾಧಿಕಾರಿಗಳ ಕಚೇರಿಯ ಸುತ್ತ ಪೊಲೀಸ್ ಬಂದೋಬಸ್ತ್ ಮಾಡಲಾಗುವುದು ಎಂದು ತಿಳಿಸಿದರು.

ನಾಮಪತ್ರ ಸಲ್ಲಿಸುವ ಅಭ್ಯರ್ಥಿಯೊಂದಿಗೆ 4 ಜನರ ಪ್ರವೇಶಕ್ಕೆ ಅನುಮತಿಯಿದ್ದು, ಅಭ್ಯರ್ಥಿಗಳೊಂದಿಗೆ ಬರುವವರಿಗೆ ಜಿಲ್ಲಾಧಿಕಾರಿಗಳ ಕಚೇರಿ ಸಂಕೀರ್ಣದಲ್ಲಿ ಆಸನದ ವ್ಯವಸ್ಥೆ ಮಾಡಲಾಗುವುದು ಎಂದು ತಿಳಿಸಿದರು.

ಅಭ್ಯರ್ಥಿಯು ನಾಮಪತ್ರ ಸಲ್ಲಿಸುವ ಸಂದರ್ಭದಲ್ಲಿ ರ್ಯಾಲಿ ಮಾಡಿದ್ದಲ್ಲಿ ಕಡ್ಡಾಯವಾಗಿ ಸಂಬಂಧಪಟ್ಟ ಎಆರ್‌ಓ ಗಳಿಂದ ಅನುಮತಿ ಪಡೆದಿರಬೇಕು ಎಂದರು.

ವಿವಿಧೆಡೆ ಅಬಕಾರಿ ದಾಳಿ

ಮಂಡ್ಯ : ಚುನಾವಣಾ ನೀತಿ ಸಂಹಿತೆ ಜಾರಿಯಾಗಿರುವ ಹಿನ್ನಲೆಯಲ್ಲಿ ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಅಬಕಾರಿ ಇಲಾಖೆಯ ವತಿಯಿಂದ ಮಾರ್ಚ್ 16 ರಿಂದ ಮಾರ್ಚ್ 26 ರವರೆಗೆ ವಿವಿಧೆಡೆ 197 ಕಡೆ ದಾಳಿ ನಡೆಸಿ ಘೋರ ಮೊಕದ್ದಮೆಗಳು-17, ಕಲಂ 15(ಎ) ರ ಅಡಿಯಲ್ಲಿ -147, ಸನ್ನದು ಷರತ್ತು ಉಲ್ಲಂಘನೆ ಅಡಿಯಲ್ಲಿ-21, ಹಾಗೂ 1-ಎನ್.ಡಿ.ಪಿ.ಎಸ್. ಪ್ರಕರಣದಲ್ಲಿ 1.400 ಕಿ.ಗ್ರಾಂ. ಒಣ ಗಾಂಜಾ ಸೇರಿ ಒಟ್ಟಾರೆ 186 ಪ್ರಕರಣಗಳನ್ನು ದಾಖಲಿಸಿ 159 ಆರೋಪಿಗಳನ್ನು ಬಂಧಿಸಿ ತನಿಖೆಯನ್ನು ಮುಂದುವರಿಸಿರುತ್ತಾರೆ.

ಸದರಿ ಪ್ರಕರಣಗಳಲ್ಲಿ ಒಟ್ಟು 279.780 ಲೀಟರ್ ಮದ್ಯ ಹಾಗೂ 36142 ಲೀಟರ್ ಬಿಯರ್ ಹಾಗೂ 3.600 ಲೀಟರ್ ವೈನ್ ಮತ್ತು 30 ಲೀಟರ್ ಸೇಂದಿಯನ್ನು ಜಪ್ತು ಮಾಡಿ 9 ದ್ವಿಚಕ್ರ ವಾಹನಗಳನ್ನು ವಶಪಡಿಸಿಕೊಂಡಿರುತ್ತಾರೆ. ವಶಪಡಿಸಿಕೊಂಡ ವಸ್ತುಗಳ ಅಂದಾಜು ಮೌಲ್ಯ ರೂ: 75,67,015/- (ಎಪ್ಪತ್ತೈದು ಲಕ್ಷದ ಅರವತ್ತೇಳು ಸಾವಿರದ ಹದಿನೈದು ರೂಪಾಯಿ) ಗಳಾಗಿರುತ್ತದೆ ಎಂದು ಮಂಡ್ಯ ಡೆಪ್ಯೂಟಿ ಕಮೀಷನರ್‌ಎಕ್ಸೈಜ್ ತಿಳಿಸಿದ್ದಾರೆ.

ಸಾಹಸಮಯ ಬೇಸಿಗೆ ಶಿಬಿರ

ಮಂಡ್ಯ : ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಜನರಲ್ ತಿಮ್ಮಯ್ಯ ರಾಷ್ಟ್ರೀಯ ಸಾಹಸ ಅಕಾಡೆಮಿ ವತಿಯಿಂದ 10 ರಿಂದ 17 ವರ್ಷ ವಯೋಮಿತಿಯ ಶಾಲಾ-ಕಾಲೇಜಿನ ವಿದ್ಯಾರ್ಥಿಗಳಿಗೆ ಸಾಹಸಮಯ ಶಿಬಿರವನ್ನು ಏಪ್ರಿಲ್ ಮತ್ತು ಮೇ 2024ರ ಮಾಹೆಗಳಲ್ಲಿ ಜಕ್ಕೂರು ಏರೋಡ್ರಮ್, ಬಾದಾಮಿ, ದಾಂಡೇಲಿ, ಬರ್ಮೊಳೆ, ವಾಣಿವಿಲಾಸ ಸಾಗರ, ಕಾರವಾರದಲ್ಲಿ ಆಯೋಜಿಸಲಾಗುತ್ತಿದೆ.

ಹೆಚ್ಚಿನ ಮಾಹಿತಿಗಾಗಿ Web:www.gethnaa.org ಹಾಗೂ ಸಹಾಯವಾಣಿ ಸಂಖ್ಯೆ 18004251448 ನ್ನು ಸಂಪರ್ಕಿಸಬಹುದು .

ಚೆಕ್ ಪೋಸ್ಟ್‌ಗಳಲ್ಲಿ ತಪಾಸಣೆ ವೇಳೆ 13772.720 ಲೀ ಮದ್ಯ ವಶಕ್ಕೆ

ರಾಮನಗರ: ಜಿಲ್ಲೆಯಾದ್ಯಂತ ಕಟ್ಟುನಿಟ್ಟಾಗಿ ಮಾದರಿ ನೀತಿ ಸಂಹಿತೆ ಜಾರಿಗೊಳಿಸಿದ್ದು ಮಾ. 27ರ ಬೆಳಿಗ್ಗೆ 9 ಗಂಟೆಯ ವರೆಗೆ ಒಟ್ಟು 13772.720 ಲೀ. ಮದ್ಯ ಜಿಲ್ಲೆಯ ವಿವಿಧ ಚೆಕ್‌ಪೋಸ್ಟಗಳಲ್ಲಿ ತಪಾಸಣೆ ವೇಳೆ ವಶಕ್ಕೆ ಪಡೆಯಲಾಗಿದೆ.

ಅಬಕಾರಿ ಇಲಾಖೆ ಕಾರ್ಯಾಚರಣೆ ವೇಳೆ 25,07,975 ರೂ. ಮೌಲ್ಯದ 13772.720 ಲೀ ಮದ್ಯ ಹಾಗೂ 6 ವಿವಿಧ ವಾಹನಗಳನ್ನು ವಶಕ್ಕೆ ಪಡೆದು ಪ್ರಕರಣಗಳನ್ನು ದಾಖಲಿಸಲಾಗಿದೆ.

ಚಿಕಿತ್ಸೆ ಫಲಿಸದೆ ಅಪರಿಚಿತ ವ್ಯಕ್ತಿ ಸಾವು

ರಾಮನಗರ: ರಾಮನಗರ ಟೌನಿನ ವಿಜಯನಗರದ ಆರ್ಚ್ ಬಳಿ ಅಪರಿಚಿತ ವ್ಯಕ್ತಿ ಅಸ್ವಸ್ಥನಾಗಿ ಬಳಲುತ್ತಿರುವುದನ್ನು ಸಾರ್ವಜನಿಕರು ಗಮನಿಸಿ ಅವರನ್ನು ಜಿಲ್ಲಾ ಸರ್ಕಾರಿ ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಿಸಲಾಗಿದ್ದು, ಚಿಕಿತ್ಸೆ ಫಲಕಾರಿಯಾಗದೆ ಅಪರಿಚಿತ ವ್ಯಕ್ತಿ ಮೃತಪಟ್ಟಿರುತ್ತಾರೆ.

ಇವರ ಹೆಸರು ಹಾಗೂ ವಿಳಾಸ ತಿಳಿದುಬಂದಿಲ್ಲ. ಕೋಲುಮುಖ, ಗೋಧಿಮೈಬಣ್ಣ, 5.5 ಅಡಿ ಎತ್ತರ, ಸಾಧಾರಣ ಮೈಕಟ್ಟು, ಇವರು ಕಪ್ಪು ಬಣ್ಣದ ಪ್ಯಾಂಟ್ ಹಾಗೂ ಬಿಳಿ ಮತ್ತು ನೀಲಿ ಬಣ್ಣದ ಗೆರೆಗಳಿರುವ ತುಂಬು ತೋಳಿನ ಸಿಮೆಂಟ್ ಬಣ್ಣದ ಚೆಕ್ಸ್ ಶರ್ಟ್ ಧರಿಸಿರುತ್ತಾರೆ.

ಇವರ ವಾರಸುದಾರರು ಯಾರದರು ಇದ್ದಲ್ಲಿ ಆರಕ್ಷಕ ಉಪ ನಿರೀಕ್ಷಕರು, ರಾಮನಗರ ಟೌನ್ ಪೊಲೀಸ್ ಠಾಣೆ, ರಾಮನಗರ ಟೌನ್. ಇವರನ್ನು ಸಂಪರ್ಕಿಸುವಂತೆ ಕೋರಲಾಗಿದೆ.

ಪ್ರವಾಸೋದ್ಯಮ ಬೆಳೆದಂತೆ ಹೋಟೆಲ್ ಉದ್ಯಮವು ಬೆಳೆಯಲುಸಾಧ್ಯ-ಬಿ.ಚಂದ್ರಶೇಖರ

ಚಾಮರಾಜನಗರ:- ಪ್ರವಾಸೋದ್ಯಮವು ಬೆಳೆದಂತೆ ಹೋಟೆಲ್ ಉದ್ಯಮಗಳು ಬೆಳೆಯಲು ಸಾಧ್ಯವಾಗುತ್ತದೆ. ಜೊತೆಗೆ ಉದ್ಯೋಗ ಸೃಷ್ಟಿಯಾಗುತ್ತದೆ. ಎಂದು ಕರ್ನಾಟಕ ರಾಜ್ಯ ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷರಾದ ಬಿ.ಚಂದ್ರಶೇಖರ ಹೆಬ್ಬಾರ್ ತಿಳಿಸಿದರು.

ನಗರದ ಕರಿನಂಜನಪುರದ ರಸ್ತೆಯಲ್ಲಿ ಇರುವ ಖಾಸಗಿ ಹೋಟೇಲ್‌ನಲ್ಲಿ ಚಾಮರಾಜನಗರ ಜಿಲ್ಲಾ ಹೋಟೆಲ್ ಮಾಲೀಕರ ಸಂಘದ ಉದ್ಘಾಟನ ಕಾರ್ಯಕ್ರಮದಲ್ಲಿ ಜ್ಯೋತಿಬೆಳಗಿಸಿ ಅವರು ಮಾತನಾಡಿದರು.

ಹೋಟೆಲ್ ಉದ್ಯಮ ಬಹಳಷ್ಟು ಜನರಿಗೆ ದಾರಿದೀಪವಾಗಿದೆ. ಇದರಲ್ಲಿ ಕಷ್ಟವು ಇದೆ ಸುಖವು ಇದೆ. 30 ವರ್ಷಗಳ ಹಿಂದೆ ಕಡಿಮೆ ಜನರು ಮಾತ್ರ ಹೋಟೆಲ್‌ಗಳನ್ನು ತೆರೆದು ಜೀವನ ನಡೆಸುತ್ತಿದ್ದರು. ಇತ್ತೀಚೀನ ದಿನಗಳಲ್ಲಿ ಹೋಟೆಲ್ ಉದ್ಯಮ ಬಹಳಷ್ಟು ಬೆಳೆದು ಬಿಟ್ಟಿದೆ. ಯಾವುದೇ ವೃತ್ತಿಯನ್ನು ಮಾಡಬೇಕಾದರೆ ಅದರ ಜೊತೆಗೆ ಕೈ ಜೋಡಿಸುವವರು ಬೇಕಾಗುತ್ತದೆ. ಅದೇ ಕಾರಣಕ್ಕೆ ಹೋಟೆಲ್ ಮಾಲೀಕರ ಸಂಘವನ್ನು ಸ್ಥಾಪಿಸಲಾಗಿದೆ. ಇದರ ಉದ್ದೇಶ ಸರ್ಕಾರದ ಜೊತೆಗೆ ಹೋಟೆಲ್ ಮಾಲೀಕರು ಸೇರಿಕೊಂಡು ಪ್ರವಾಸೋದ್ಯಮವಿರುವ ಜಾಗಗಳಲ್ಲಿ ಸಾರ್ವಜನಿಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಹೋಟೆಲ್‌ಗಳನ್ನು ತೆರೆದು ಉತ್ತಮ ಆಹಾರವನ್ನು ನೀಡಿದರೆ. ಫಲಹಾರ ಮಂದಿರಗಳು ಬೆಳೆಯಲು ಸಾಧ್ಯವಾಗುತ್ತದೆ ಎಂದರು.

ಚಾಮರಾಜನಗರ ಜಿಲ್ಲೆಯ ಸುತ್ತಲು ಪ್ರವಾಸಿ ಕೇಂದ್ರಗಳು ಇದೇ. ಅಲ್ಲಿ ಇರುವ ಹೋಟೆಲ್ ಉದ್ಯಮಿಗಳನ್ನು ಸಂಘದ ಸದಸ್ಯರಾಗಿ ಮಾಡಿದರೆ ಸಂಘವು ಉತ್ತಮ ಮಟ್ಟಕ್ಕೆ ಬೆಳೆಯಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಕರ್ನಾಟಕ ರಾಜ್ಯ ಹೋಟೆಲ್ ಮಾಲೀಕರ ಸಂಘದ ಗೌರವ ಕಾರ್ಯದರ್ಶಿ ಜಿ.ಕೆ.ಶೆಟ್ಟಿ ಮಾತನಾಡಿ ಚಾಮರಾಜನಗರ ಜಿಲ್ಲೆ ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷರು ಹಾಗೂ ಸದಸ್ಯರು ಸರ್ಕಾರಿ ಅಧಿಕಾರಿಗಳನ್ನು ಮತ್ತು ಸಾರ್ವಜನಿಕರನ್ನು ಪ್ರೀತಿಯಿಂದ ಗೌರವಿಸಬೇಕು. ಅವರಿಂದ ನಮ್ಮ ಉದ್ಯಮಕ್ಕೆ ನ್ಯಾಯ ಸಿಗಲಿದೆ. ಚಾಮರಾಜನಗರ ಜಿಲ್ಲೆಯು ಶೇಕಡ 50ರಷ್ಟು ಅರಣ್ಯ ಪ್ರದೇಶವನ್ನು ಹೊಂದಿದೆ. ಹೆಚ್ಚು ಪ್ರವಾಸೋದ್ಯವು ಇದೇ.



ಪ್ರವಾಸೋದ್ಯಮದಲ್ಲಿ ಹೋಟೆಲ್ ತೆರೆಯಲು ಬಯಸುವವರು ಅವರಿಗೆ ಮಾರ್ಗದರ್ಶನ ನೀಡುತ್ತೇನೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಚಾಮರಾಜನಗರ ಹೋಟೆಲ್ ಮಾಲಿಕರ ಸಂಘದ ಅಧ್ಯಕ್ಷ ನಂದ್ಯಪ್ಪ ಶೆಟ್ಟಿ ಅವರು ಮಾತನಾಡಿ ಇತ್ತೀಚೆಗೆ ಹೋಟೆಲ್ ನಡೆಸಲು ಕಾರ್ಮಿಕರ ಕೊರತೆ ಇದೆ. ಜನರಿಗೆ ಒಪ್ಪುವಂತೆ ರುಚಿಕರವಾದ ಆಹಾರವನ್ನು ಕೊಡಬೇಕಾದರೆ ಕಾರ್ಮಿಕರನ್ನು ನಾವೇ ರೆಡಿಮಾಡಬೇಕಿದೆ. ಇಷ್ಟೋ ಕಾರ್ಮಿಕರು ಸ್ವಂತ ಊರಿನಲ್ಲಿ ಕೆಲಸ ನಿರ್ವಹಿಸಲು ಒಪ್ಪುವುದಿಲ್ಲ, ಚಾಮರಾಜನಗರದ ಹಲವಾರು ಕಾರ್ಮಿಕರು ಬೆಂಗಳೂರು, ಮೈಸೂರುಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಹೋಟೆಲ್ ನಡೆಸಲು ಪೈಪೋಟಿ ನಡೆಸಬೇಕಿದೆ. ಬೆಲೆ ಏರಿಕೆಯಾದ ಸಂದರ್ಭದಲ್ಲಿ ಗ್ರಾಹಕರು ನಮ್ಮ ಜೊತೆ ಸಹಕರಿಸಿದರೆ ಉದ್ಯಮ ಬೆಳೆಯು ಸಾಧ್ಯವಾಗುತ್ತದೆ ಎಂದು ಹೇಳಿದರು.

ಚಾಮರಾಜನಗರ ಜಿಲ್ಲಾ ಹೋಟೆಲ್ ಮಾಲೀಕರ ಸಂಘದ ಕಾರ್ಯದರ್ಶಿ ಪ್ರತಾಪ್.ಎಸ್, ಪ್ರಸ್ತಾವಿಕವಾಗಿ ಮಾತನಾಡಿ ಹೋಟೆಲ್ ಉದ್ಯಮಕ್ಕೆ ಸೇರುವ ಸಂಸ್ಥೆಗಳು ಬಾರ್ & ರೆಸ್ಟೋರೆಂಟ್, ರೇರ್ಜಟ್, ಹೊಂಸ್ಟೆ, ಬೇಕರಿ, ಸ್ವೀಟ್‌ಸ್ಟಾಲ್, ಕ್ಯಾಟಿಂಗ್ ಗಳು ಇದರ ಅನುದಡಿಗೆ ಬರುತ್ತವೆ. ನಮ್ಮ ಸಂಘವನ್ನು ತಾಲ್ಲೂಕು ಸಂಘವನ್ನು ಕೋವಿಡ್ ಸಂದರ್ಭದಲ್ಲಿ ಸ್ಥಾಪಿಸಲಾಯಿತು. ಜಿಲ್ಲಾ ಸಂಘವನ್ನು ಇಂದು ಉದ್ಘಾಟನೆಯಾಗಲಿದೆ. ನಮ್ಮ ಸಂಘದಲ್ಲಿ 50 ಜನ ಸದಸ್ಯರು ಇದ್ದಾರೆ ಈ ಸಂಘ ಸದಸ್ಯತ್ವವನ್ನು ಜಿಲ್ಲಾದ್ಯಂತ ಮಾಡಲು ಹೊರಟಿದ್ದೇವೆ ಎಂದು ಹೇಳಿದರು.

ಮೈಸೂರು ಅಧ್ಯಕ್ಷರಾದ ಸಿ.ನಾರಾಯಣಗೌಡ, ಕರ್ನಾಟಕ ರಾಜ್ಯ ಹೋಟೆಲ್ ಮಾಲೀಕರ ಸಂಘದ ಉಪಾಧ್ಯಕ್ಷ ರವಿಶಾಸ್ತ್ರಿ ಕಾರ್ಯಕ್ರಮದಲ್ಲಿ ಮಾತನಾಡಿದರು. ಈ ಸಂದರ್ಭದಲ್ಲಿ ಎಲ್ಲರನ್ನು ಗೌರವಿಸಲಾಯಿತು.

ಕಾರ್ಯಕ್ರಮದಲ್

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ–6 | 28–03–2024

ಬೆಂಗಳೂರು

ಚೆಕ್‌ಪೋಸ್ಟ್‌ಗೆ ತಹಶೀಲ್ದಾರ್ ಭೇಟಿ, ಪರಿಶೀಲನೆ

■ ಕಾಯಕಯೋಗಿ ಸುದ್ದಿ

ಕೃಷ್ಣರಾಜಪೇಟೆ: ಮಂಡ್ಯ ಲೋಕಸಭಾ ಕ್ಷೇತ್ರದಲ್ಲಿ ಮುಕ್ತ ಹಾಗೂ ನ್ಯಾಯಸಮ್ಮತ ಚುನಾವಣೆ ನಡೆಸಲು ಸನ್ನದ್ಧವಾಗಿರುವ ಕೆ.ಆರ್.ಪೇಟೆ ತಹಸೀಲ್ದಾರ್ ಡಾ.ಲೋಕೇಶ್ ತಾಲ್ಲೂಕಿನ ವ್ಯಾಪ್ತಿಯ ಚೆಕ್ ಪೋಸ್ಟ್ ಗಳಿಗೆ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಕೃಷ್ಣರಾಜಪೇಟೆ ತಾಲೂಕಿನ ಮೈಸೂರು ಜಿಲ್ಲಾ ವ್ಯಾಪ್ತಿಯ ಭೇರ್ಯ ರಸ್ತೆಯ ಸಿಂಗನಹಳ್ಳಿ ಗ್ರಾಮ, ಚನ್ನರಾಯಪಟ್ಟಣ ರಸ್ತೆಯ ಗಡಿ ಗ್ರಾಮವಾದ ಆನೆಗೋಳ ಗ್ರಾಮ ಹಾಗೂ ಶ್ರವಣಬೆಳಗೊಳ ರಸ್ತೆಯ ಅಘಲಯ ಗ್ರಾಮದಲ್ಲಿ ಚೆಕ್ ಪೋಸ್ಟ್ ಗಳನ್ನು ಸ್ಥಾಪಿಸಲಾಗಿದೆ. ಹಣಕಾಸು, ಮದ್ಯ ಸೇರಿದಂತೆ ಯಾವುದೇ ವಸ್ತುಗಳನ್ನು ಅಕ್ರಮವಾಗಿ ಸಾಗಾಟ ಮಾಡುವುದನ್ನು ತಡೆಯಲು ಹದ್ದಿನ ಕಣ್ಣು ಇಡಲಾಗಿದೆ. ಬಿಗಿ ಪೊಲೀಸ್ ಭದ್ರತೆ ಕೈಗೊಂಡು ಅಧಿಕಾರಿಗಳನ್ನು ನಿಯೋಜಿಸಲಾಗಿದೆ ಎಂದು ಡಾ. ಲೋಕೇಶ್ ಪತ್ರಕರ್ತರಿಗೆ ಮಾಹಿತಿ ನೀಡಿದರು.

ಭಾರತ ದೇಶದ ಚುನಾವಣಾ ಆಯೋಗದ ನಿರ್ದೇಶನದಂತೆ ಮಂಡ್ಯ ಲೋಕಸಭಾ ಕ್ಷೇತ್ರದ ವ್ಯಾಪ್ತಿಯ ಕೆ.ಆರ್.ಪೇಟೆ ತಾಲ್ಲೂಕಿನ 261 ಮತಗಟ್ಟೆಗಳಲ್ಲಿ ಮುಕ್ತ ಹಾಗೂ ನ್ಯಾಯ ಸಮ್ಮತ ಚುನಾವಣೆ ನಡೆಸಲು ಸಕಲ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ.1500 ಜನ ಸಿಬ್ಬಂದಿಗಳು ಚುನಾವಣಾ ಕಾರ್ಯದಲ್ಲಿ ಭಾಗವಹಿಸುತ್ತಿದ್ದಾರೆ.



ಕೃಷ್ಣರಾಜಪೇಟೆ ತಾಲ್ಲೂಕಿನ ವ್ಯಾಪ್ತಿಯಲ್ಲಿ ಯಾವುದೇ ರೀತಿಯ ಕಾನೂನು ಬಾಹಿರವಾದ ಚಟುವಟಿಕೆಗಳು ನಡೆಯುತ್ತಿರುವುದು ಕಂಡು ಬಂದರೆ ತಾಲೂಕು ಕಚೇರಿಗೆ ಅಥವಾ ಪೊಲೀಸ್ ಠಾಣೆಗೆ ಮಾಹಿತಿ ನೀಡಿ ತಾಲ್ಲೂಕು ಆಡಳಿತ ದೊಂದಿಗೆ ಕೈಜೋಡಿಸಿ ಸಹಕರಿಸಬೇಕೆಂದು ಸಹ ಚುನಾವಣಾಧಿಕಾರಿಗಳೂ ಆಗಿರುವ ತಹಶೀಲ್ದಾರ್ ಡಾ. ಲೋಕೇಶ್ ತಿಳಿಸಿದರು.

ಕೊನೆಯ ಚುನಾವಣೆ ಅಸ್ತ್ರ ಬಳಸುತ್ತಿರುವ ಮಾಜಿ ಸಿಎಂ ಮೊಯಿಲಿ

ಅಭ್ಯರ್ಥಿ ಘೋಷಿಸುವಲ್ಲಿ ವಿಳಂಬ

■ ಕಾಯಕಯೋಗಿ ಸುದ್ದಿ

ದೇವನಹಳ್ಳಿ :ಜಿಲ್ಲೆಯ ಲೋಕಸಭಾ ಚುನಾವಣೆಯ ಕಾಂಗ್ರೆಸ್ ಅಭ್ಯರ್ಥಿ ಆಯ್ಕೆ ಕಸರತ್ತು ಮುಂದುವರಿದಿದ್ದು ಮಾಜಿ ಮುಖ್ಯಮಂತ್ರಿ ಎಂ.ವೀರಪ್ಪ ಮೊಯಿಲಿ 'ಟಿಕೆಟ್‌ಗೆ ಬಿಗಿ ಪಟ್ಟು ಹಿಡಿದಿರುವ ಪರಿಣಾಮ ಕಾಂಗ್ರೆಸ್ ಟಿಕೆಟ್ ಕಂಗ್ಗಟ್ಟು ಆಗಿ ಪರಿಣಮಿಸಿದೆ.

4 ಬಾರಿ ಸಂಸದ ಆರ್.ಎಲ್.ಜಾಲಪ್ಪ ನಂತರ ಕ್ಷೇತ್ರವನ್ನು ಎರಡು ಬಾರಿ ಪ್ರತಿನಿಧಿಸಿ ಮೂರನೇ ಬಾರಿಗೆ ಹ್ಯಾಟ್ರಿಕ್ ಗೆಲುವು ಸಾಧಿಸಲಾಗದೇ ಮೋದಿ ಅಲೆಯಲ್ಲಿ ಸೋತ ಎಂ.ವೀರಪ್ಪ ಮೊಯಿಲಿ 4ನೇ ಬಾರಿಗೆ ಈಗ ಕ್ಷೇತ್ರದಲ್ಲಿ ಸ್ಪರ್ಧಿಸಲು ದೆಹಲಿ ಕದತಟ್ಟಿರುವ ಕಾರಣದಿಂದ ಟಿಕೆಟ್ ಆಯ್ಕೆ ಕೈ ಪಾಳೆಯದಲ್ಲಿ ಕಂಗ್ಗಟಾಗಿ ಯಾರಿಗೆ ಒಲಿಯುತ್ತೆ ಎನ್ನುವ ಕುತೂಹಲ ಮತ್ತಷ್ಟು ಹೆಚ್ಚಿಸಿದೆ. ಲೋಕಸಭಾ ಚುನಾವಣೆ ಘೋಷಣೆಗೂ ಮೊದಲು ಹಾಗೂ ಆನಂತರ ಮೊಯಿಲಿಗಿಂತ ರಕ್ಷಾ ರಾಮಯ್ಯ ಹೆಸರು ಮುಂಚೂಣಿಗೆ ಬಂದಿತ್ತು. ಆದರೆ, ಹಲವು ದಿನ ಗಳಿಂದ ಮೊಯಿಲಿ ದೆಹಲಿ ಕದತಟ್ಟಿರುವ ಕಾರಣ ಚಿಕ್ಕಬಳ್ಳಾಪುರ ಕ್ಷೇತ್ರಕ್ಕೆ ಅಂತಿಮ ಅಭ್ಯರ್ಥಿ



ಆಯ್ಕೆ ಮಾಡುವುದು ಕಾಂಗ್ರೆಸ್ ವರಿಷ್ಠರಿಗೆ ಸವಾಲಾಗಿದೆ. ಈಗಾಗಲೇ ರಾಜ್ಯದಲ್ಲಿ ಬಹುತೇಕ ಕ್ಷೇತ್ರಗಳಿಗೆ ಸಚಿವರ, ಶಾಸಕರ ಮಕ್ಕಳಿಗೆ ಮಣೆ ಹಾಕಿದ್ದು, ಇದರ ಬಗ್ಗೆ ಮೊಯಿಲಿ ಪರೋಕ್ಷವಾಗಿ ಬೇಸರ ವ್ಯಕ್ತಪಡಿಸಿ ದ್ದರು. ರಾಜ್ಯದಲ್ಲಿ ಹಿರಿಯ ತಲೆಗಳಿಗೆ ಕೊಕ್ ಕೊಡಲಾಗಿದೆ. ಅದೇ ರೀತಿ ಚಿಕ್ಕಬಳ್ಳಾಪುರ ಕ್ಷೇತ್ರದಲ್ಲಿ ಮೊಯಿಲಿಗೆ ಟಿಕೆಟ್ ಕೊಡಲು ಒಪ್ಪದ ರಾಜ್ಯ ನಾಯಕರು ರಕ್ಷಾ ರಾಮಯ್ಯ ಹೆಸರು ಶಿಪಾರಸು ಮಾಡಿದ್ದಾರೆ. ಆದರೆ, ಕೊನೆ ಗಳಿಗೆಯಲ್ಲಿ ಎಚ್ಚೆತ್ತಿಕೊಂಡಿರುವ ಮೊಯಿಲಿ ಇದು ನನ್ನ ಕೊನೆ ಚುನಾವಣೆ, ಚಿಕ್ಕಬಳ್ಳಾಪುರ ಟಿಕೆಟ್ ನನಗೆ ಬೇಕೆಂದು ಹಠ ಹಿಡಿದು ಸೋನಿಯಾಗಾಂಧಿ, ಮಲ್ಲಿಕಾರ್ಜುನ ಖರ್ಗೆ ಮೂಲಕ ಒತ್ತಡ ತರುವ ಕೆಲಸ ಮಾಡುತ್ತಿರುವ ಪರಿಣಾಮ ರಕ್ಷಾ' ರಾಮಯ್ಯ ಹೆಸರು ಅಂತಿಮಗೊಳ್ಳುವುದಕ್ಕೆ ಬ್ರೇಕ್ ಬಿದ್ದಿದೆ.

ಒಬಿಸಿ ಸಮುದಾಯಕ್ಕೆ ಟಿಕೆಟ್ ಕೊಡುವುದಿದ್ದರೆ ನನಗೆ ಕೊಡಿ ಎಂದು ಮೊಯಿಲಿ ಪಟ್ಟು ಹಿಡಿದಿದ್ದಾರೆ. ಟಿಕೆಟ್‌ಗೆ ಶಿವಶಂಕರರೆಡ್ಡಿ ಲಾಭಿ: ಇದರ ನಡುವೆ ಜಿಲ್ಲೆಯ ಗೌರಿಬಿದನೂರು ಮಾಜಿ ಸಚಿವ ಎನ್.ಎಚ್.ಶಿವಶಂಕರರೆಡ್ಡಿ ಕೂಡ ತಮ್ಮನ್ನು ಪರಿಗಣಿಸುವಂತೆ ಒತ್ತಡ ತರುತ್ತಿದ್ದಾರೆ. ಟಿಕೆಟ್‌ಗೆ ಮೂವರು ಪ್ರಬಲ ಆಕಾಂಕ್ಷಿಗಳಿದ್ದು ಚಿಕ್ಕಬಳ್ಳಾಪುರ ಕ್ಷೇತ್ರದ ಟಿಕೆಟ್ ಆಯ್ಕೆ ವಿಳಂಬವಾಗುತ್ತಿದೆ ಎನ್ನಲಾಗುತ್ತಿದ್ದು ಇದೇ ಕಾರಣಕ್ಕೆ ಸೋಮವಾರ ಅಥವಾ ಮಂಗಳ ವಾರ ಪ್ರಕಟಗೊಳ್ಳಬೇಕಿದ್ದ ಬಾಕಿ ಪಟ್ಟಿ ವಿಳಂಬ ಆಗಿದೆ ಎಂದು ಕಾಂಗ್ರೆಸ್ ಮೂಲಗಳು ತಿಳಿಸಿವೆ.

ಮಾ.28 ರಂದು ಲೋಕಸಭಾ ಚುನಾವಣೆಗೆ ಅಧಿಸೂಚನೆ ಪ್ರಕಟವಾಗಿ ಅಂದಿನಿಂದಲೇ ನಾಮಪತ್ರ ಸಲ್ಲಿಕೆ ಕಾರ್ಯ ಶುರುವಾಗಲಿದೆ. ಏ.4ಕ್ಕೆ ನಾಮಪತ್ರ ಸಲ್ಲಿಕೆ ಕೊನೆ ದಿನವಾಗಿದೆ. ಅಧಿಸೂಚನೆಗೂ ಮುನ್ನವೆ ಕ್ಷೇತ್ರಕ್ಕೆ ಕಾಂಗ್ರೆಸ್ ಅಭ್ಯರ್ಥಿ ಪ್ರಕಟಿಸುತ್ತಾ? ಮೊಯಿಲಿ ಮತ್ತೆ ಕಣಕ್ಕೆ ಇಳಿತಾರಾ ಅಥವಾ ರಕ್ಷಾ ರಾಮಯ್ಯಗೆ ಟಿಕೆಟ್ ಒಲಿಯುತ್ತಾ? ಇಬ್ಬರ ಜಗಳದಲ್ಲಿ ಶಿವಶಂಕರರೆಡ್ಡಿ ಲಾಭ ಆಗುತ್ತ ಎಂಬುದು ಕುತೂಹಲ ಹುಟ್ಟಿಸಿದೆ.

ನಿಷ್ಠಾವಂತ ಹಿಂದುಳಿದ ವರ್ಗದ ಜಿಲ್ಲಾಧಿಕಾರಿಗೆ ರಾಜಕೀಯವಾಗಿ ಕಿರುಕುಳ ಖಂಡನೀಯ

ದೇವನಹಳ್ಳಿ: ಕಾಡುಗೊಲ್ಲ ಜನಾಂಗವನ್ನು ಎಸ್ಟಿಗೆ ಸೇರಿಸುವ ಬಗ್ಗೆ ರಾಜ್ಯಸಭೆಯ ಅಧಿವೇಶನದಲ್ಲಿ ಮಾತನಾಡಿದ್ದ ಎಚ್.ಡಿ.ದೇವೇಗೌಡರು ದೊಡ್ಡ ದೊಡ್ಡಭಾಷಣ ಮಾಡಿ ನಮ್ಮ ಸಮಾಜವನ್ನು ರಾಜಕೀಯವಾಗಿ ಮುಖ್ಯವಾಹಿನಿಗೆ ತರುತ್ತೇನೇ ಎಂದು ಹೇಳಿದ್ದರು ಆದರೆ ಈಗ ನಮ್ಮ ಗೊಲ್ಲ ಸಮಾಜದ ಹಾಸ ಜಿಲ್ಲಾಧಿಕಾರಿ ಸತ್ಯಭಮರವರನ್ನು ರಾಜಕೀಯ ದುರುದ್ದೇಶದಿಂದ ಚುನಾವಣಾಧಿಕಾರಿಗಳಿಗೆ ತಪ್ಪು ಮಾಹಿತಿ ನೀಡಿ ವರ್ಗಾವಣೆ ಹುನ್ನಾರ ಮಾಡುತ್ತಿರುವುದು ಖಂಡನೀಯ ಎಂದರು.

ದೇವನಹಳ್ಳಿಯಲ್ಲಿ ಮಾಧ್ಯಮ ಪ್ರತಿನಿದಿಗಳೊಂದಿಗೆ ಮಾತನಾಡಿದ ಕರ್ನಾಟಕ ಯಾದವ ಯುವ ವೇದಿಕೆಯ ಸಂಸ್ಥಾಪಕ ರಾಜ್ಯಾಧ್ಯಕ್ಷ ಸುಧಾಕರ್ ಯಾದವ್ ಇತ್ತೀಚೆಗೆಷ್ಟೇ ನಮ್ಮ ಸಮಾಜದ ಮುಖಂಡರನ್ನು ಜೆಪಿ ಭವನದಲ್ಲಿ ಕರೆಯಿಸಿ ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಜೆಡಿಎಸ್ ಗೆ ಬೆಂಬಲಿಸಿದರೆ ನಿಮ್ಮ ಸಮಾಜವನ್ನು ಎಸ್ಟಿಗೆ ಸೇರಿಸುತ್ತೆನೆ ಎಂದು ಸುಳ್ಳು ಭರವಸೆ ನೀಡಿ ಈಗ ಅದೇ ಸಮಾಜದ ಉತ್ತಮ ಮಹಿಳಾ ಅಧಿಕಾರಿಗೆ ರಾಜಕೀಯವಾಗಿ ಕಿರುಕುಳ ನೀಡಲು ಹೊರಟಿರುವುದು ಸಲ್ಲದು, ಸತ್ಯಭಾಮ ರವರು ಹಾಸನ ಜಿಲ್ಲಾಧಿಕಾರಿಯಾಗಿ ನಿಗದಿತ ಸಮಯದಲ್ಲಿ ಸರ್ಕಾರದ ಎಲ್ಲಾ ಕೆಲಸಗಳನ್ನು ಪ್ರಾಮಾಣಿಕವಾಗಿ ಮಾಡಿದ್ದಾರೆ ಹಾಸನಾಂಭ ದೇವಾಲಯವನ್ನು ಹಾಗೂ ಹಾಸನ ಜಿಲ್ಲೆಯನ್ನು ಇಡೀ ದೇಶವೇ ನೋಡುವಂತೆ ಅಭಿವೃದ್ದಿಪಡಿಸಿ ಹಾಸನಾಂಭ ಉತ್ಸವ ಯಶಸ್ವಿ ಮಾಡಿದ್ದಾರೆ ಆದರೆ ನಮ್ಮ ಸಮಾಜವನ್ನು ಎಸ್ಟಿಗೆ ಸೇರಿಸುತೆತೆವೆ ಎಂದಿದ್ದ ಗೌಡರು ಇಂದು ನಮ್ಮ ಸಮಾಜದ ಅಧಿಕಾರಿಗಳನ್ನು ಗುರಿಯಾಗಿಸಿಕೊಂಡು ತುಳಿಯುವ ಕೆಲಸ ಮಾಡುತ್ತಿದ್ದಾರೆ ಇದೇ ರೀತಿ ಇವರ ನಡೆ ಮೂಮದುವರಿದರೆ ಹಾಸನ ಜಿಲ್ಲೆಯಲ್ಲಿ ಹಾಗೂ ಜೆಡಿಎಸ ಸ್ಪರ್ಧಿಸುವ ಕಡೆ ನಮ್ಮ ಜನಾಂಗ ಚುನಾವಣೆಯಲ್ಲಿ ತಕ್ಕ ಉತ್ತರ ನೀಡಲಿದೆ ಅಷ್ಟೇ ಅಲ್ಲದೇ ನಮ್ಮ ಸಮಾಜದ ಅಧಿಕಾರಿಗಳಿಗೆ ಅನಗತ್ಯ ಕಿರುಕುಳ ನೀಡಿದರೆ ರಾಜ್ಯಾದ್ಯಂತ ಉಗ್ರ ಹೋರಾಟ ಮಾಡಬೇಕಾಗುತ್ತದೆ ಎಂದು ಗುಡುಗಿದರು.

ಅಭ್ಯರ್ಥಿಯ ಬದಲಾವಣೆ ಕೆಲವರ ವೈಯಕ್ತಿಕ ಅಭಿಪ್ರಾಯವಷ್ಟೆ

■ ಕಾಯಕಯೋಗಿ ಸುದ್ದಿ

ದೇವನಹಳ್ಳಿ : ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬದಲಾವಣೆ ವಿಚಾರ ಕೇವಲ ಆಸೆ ದುರಾಸೆಯಿಂದ ನೀಡುವ ವ್ಯಾಖ್ಯಾನ ಅದು ಕೆಲವರ ವೈಯಕ್ತಿಕ ಅಭಿಪ್ರಾಯವಷ್ಟೆ. ಭಾರತೀಯ ಜನತಾ ಪಕ್ಷ ವಿಶ್ವದಲ್ಲಿ ದೊಡ್ಡ ಕಾರ್ಯಕರ್ತರನ್ನು ಹೊಂದಿರುವ ರಾಷ್ಟ್ರೀಯ ಪಕ್ಷವಾಗಿದೆ. ಸದಾ ಯೋಚಿತವಾದ ತೀರ್ಮಾನಗಳನ್ನು ಕೈಗೊಳ್ಳುತ್ತಾರೆ ಎಂದು ಚಿಕ್ಕಬಳ್ಳಾಪುರ ಲೋಕ ಸಭಾ ಕ್ಷೇತ್ರದ ಬಿಜೆಪಿ ಪಕ್ಷದ ಅಭ್ಯರ್ಥಿ ಡಾ.ಕೆ.ಸುಧಾಕರ್ ಪರೋಕ್ಷವಾಗಿ ಶಾಸಕ ಎಸ್.ಆರ್.ವಿಶ್ವನಾಥ್‌ಗೆ ಟಾಂಗ್ ನೀಡಿದ್ದಾರೆ.

ದೇವನಹಳ್ಳಿ ಪಟ್ಟಣದ ಬೈಪಾಸ್ ರಸ್ತೆಯಲ್ಲಿರುವ ಬಿಜೆಪಿ ಪಕ್ಷದ ಕಚೇರಿಯಲ್ಲಿ ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ನಡೆದ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದರು.

ಮುಂದಿನ ದಿನಗಳಲ್ಲಿ ಪಕ್ಷದಲ್ಲಿರುವ ಯಾವುದೇ ರೀತಿಯ ಭಿನ್ನಾಭಿಪ್ರಾಯಗಳನ್ನು ದೂರ ಮಾಡಿ ಎಲ್ಲರನ್ನೂ ಒಗ್ಗೂಡಿಸಿ ಚುನಾವಣೆ ಯಲ್ಲಿ ಗೆಲುವು ಸಾಧಿಸುವುದು ಖಚಿತ,ಮಗನಿಗೆ ಟಿಕೇಟ್ ತಪ್ಪಿರುವುದಕ್ಕೆ



ವಿಶ್ವನಾಥ್ ರವರಿಗೆ ಬೇಸರವಿರಬಹುದು. ನನ್ನ ಜೊತೆ ವೇದಿಕೆ ಹಂಚಿಕೊಳ್ಳುವುದಿಲ್ಲ ಎಂದು ಕೋಪದಿಂದ ಮಾತಾಡಿದ್ದಾರೆ ಅವು ರಾಜಕೀಯದಲ್ಲಿ ಮಾಮೂಲಿ ಮುಂದೆ ಅವರು ಸಮಯ ಕೊಟ್ಟಾಗ ಮನೆಗೆ ಭೇಟಿ ನೀಡಿ ಮಾತುಕತೆ ನಡೆಸುತ್ತೇನೆ. ಪಕ್ಷದ ಕಟ್ಟಾಳಾಗಿ ವರ್ತಿಸುತ್ತಾರೆ ಎಂಬ ಆಶಾ ಭಾವನೆಯಲ್ಲಿದ್ದೇನೆ ಎಂದರು.

ಇದೇ ಸಂದರ್ಭದಲ್ಲಿ ಮಾಜಿ ಶಾಸಕರುಗಳಾದ ಪಿಳ್ಳಮುನಿಶಾಮಪ್ಪ ಮತ್ತು ಜಿ .ಚಂದ್ರಣ್ಣ ಮುಖಂಡರುಗಳಾದ ಎಕೆಪಿ ನಾಗೇಶ್, ಓಬದ್ದೇನಹಳ್ಳಿ ಮುನಿಯಪ್ಪ, ನಂಜೇಗೌಡ ,ದೇಸು ನಾಗರಾಜು,ಜಿಲ್ಲಾ ಉಪಾಧ್ಯಕ್ಷ ಬೂದಿಗೆರೆ ನಾರಾಯಣಸ್ವಾಮಿ ,ಪ್ರಧಾನ ಕಾರ್ಯದರ್ಶಿ ಎಚ್. ಎಂ ರವಿಕುಮಾರ್ ,ಜಿಲ್ಲಾ ಅಸಂಘಟಿತ ಕಾರ್ಮಿಕ ಪ್ರಕೋಷ್ಠದ ಪ್ರಧಾನ ಸಂಚಾಲಕ ಅಂಬರೀಶ್ ಗೌಡ, ತಾಲೂಕು ಅಧ್ಯಕ್ಷ ಸುಂದರೇಶ್(ಸುನೀಲ್) ಸೇರಿದಂತೆ ಭಾರತೀಯ ಜನತಾ ಪಾರ್ಟಿಯ ಎಲ್ಲಾ ಪದಾಧಿಕಾರಿಗಳು ಹಾಗೂ ಬೂತ್ ಮಟ್ಟದ ಸದಸ್ಯರುಗಳು,ಕಾರ್ಯಕರ್ತರು ಭಾಗವಹಿಸಿದ್ದರು.

ಪ್ರತಿಯೊಬ್ಬರೂ ಮತದಾನ ಮಾಡಿ ರಾಷ್ಟ್ರ ನಿರ್ಮಾಣಕ್ಕೆ ಕೊಡುಗೆ ನೀಡಿ

■ ಕಾಯಕಯೋಗಿ ಸುದ್ದಿ

ದೇವನಹಳ್ಳಿ: ತಾಲ್ಲೂಕಿನ ಎಂ.ಸಿ.ಸಿ ಮುಖ್ಯಸ್ಥರಿಗೆ ಚುನಾವಣಾ ಕುರಿತು ಎಂ.ಸಿ.ಸಿ ಕಾರ್ಯಚಟುವಟಿಕೆಗಳ ಮತ್ತು ಸ್ವೀಪ್ ಬಗ್ಗೆ ಪರಿಶೀಲನೆ ಮಾಡಿ ಮತದಾರರಲ್ಲಿ ಅರಿವು ಮೂಡಿಸಿ ಶೇ.100 ರಷ್ಟು ಪ್ರತಿಯೊಬ್ಬರೂ ಮತದಾನ ಮಾಡಿ ರಾ?ಟ್ರ ನಿರ್ಮಾಣಕ್ಕೆ ಕೊಡುಗೆ ನೀಡಬೇಕು ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಕೆ.ಎನ್ ಅನುರಾಧ ಹೇಳಿದರು.

ದೇವನಹಳ್ಳಿ ತಾಲ್ಲೂಕು ಪಂಚಾಯತಿ ಆವರಣದಲ್ಲಿ ಮತದಾನ ಕುರಿತು ಅರಿವು ಮತ್ತು ಜಾಗೃತಿ ಕಾರ್ಯಕ್ರಮ ನಡೆಯಿತು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ ಮತ್ತು ಜಿಲ್ಲಾ ಸ್ವೀಪ್ ಸಮಿತಿ , ತಾಲ್ಲೂಕು ಆಡಳಿತ, ತಾಲ್ಲೂಕು ಸ್ವೀಪ್ ಸಮಿತಿ ಸಹಯೋಗದಲ್ಲಿ ಸಾರ್ವತ್ರಿಕ ಲೋಕಸಭಾ ಚುನಾವಣೆ ಹಿನ್ನೆಲೆ ಸಾರ್ವಜನಿಕರಿಗೆ ಮತದಾನ ಕುರಿತು ಅರಿವು ಮತ್ತು ಜಾಗೃತಿ ಕಾರ್ಯಕ್ರಮದಲ್ಲಿ ಅಧಿಕಾರಿಗಳಿಗೆ ಸಭೆ ನಡೆಸಿದರು.

ಇಂದು ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ಎಂ.ಸಿ.ಸಿ ಕಾರ್ಯಚಟುವಟಿಕೆಗಳ ಮತ್ತು



ಸ್ವೀಪ್ ಬಗ್ಗೆ ಪರಿಶೀಲಿಸಿ ಮಾಡಿ ಮತದಾನ ವನ್ನು ಪ್ರತಿಯೊಬ್ಬ ಸಾರ್ವಜನಿಕನ ಹಕ್ಕಾಗಿದ್ದು ಚಾಚೂ ತಪ್ಪದೇ ಮತದಾನ ಮಾಡಿ ರಾಷ್ಟ್ರ ನಿರ್ಮಾಣಕ್ಕೆ ಎಲ್ಲರೂ ಕೊಡುಗೆ ನೀಡಬೇಕು. ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಮತದಾನದ ಅರಿವನ್ನು ಜಾಗೃತಿಯನ್ನು ಮೂಡಿಸುತ್ತಿದ್ದೇವೆ. ಚುನಾವಣೆಗೆ ಸಂಬಂಧಿಸಿದ ನಾಯಕರ , ಪಕ್ಷದ ಚಿನ್ಹೆಗಳ ಬ್ಯಾನರ್ ಮತ್ತು ಬಿತ್ತಿಪತ್ರ ಗಳನ್ನು ಮರೆಮಾಚಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಬೇರೆ ಎಲ್ಲಾದರೂ ಕಂಡುಬಂದಲ್ಲಿ ತಿಳಿಸಿದರೆ ಅಧಿಕಾರಿಗಳು ಅದನ್ನು ತೆರವುಗೊಳಿಸುವ ಕೆಲಸ ಮಾಡಿತ್ತಾರೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ದೇವನಹಳ್ಳಿ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಹಣಾಧಿಕಾರಿ ಮಂಜುನಾಥ್, ಜಿಲ್ಲಾ ಪಂಚಾಯತಿ ಮುಖ್ಯ ಯೋಜ ನಾಧಿ ಕಾರಿ ರಾಮಕೃಷ್ಣಪ್ಪ, ತಹಸೀಲ್ದಾರ್ ಶಿವರಾಜ್, ಗ್ರೇಡ್–2 ತಹಸೀಲ್ದಾರ್ ಉಷಾ, ಎಂ.ಸಿ.ಸಿ. ತಂಡಗಳ ಮುಖ್ಯಸ್ಥರು , ಸದಸ್ಯರು, ತಾಲ್ಲೂಕು ಮಟ್ಟದ ಅಧಿಕಾರಿಗಳು ಹಾಜರಿದ್ದರು.

ಯುವಕರು ಕ್ರೀಡೆಗಳಲ್ಲಿ ತೊಡಗಿಸಿಕೊಳ್ಳಿ: ಮಂಜುನಾಥ್

■ ಕಾಯಕಯೋಗಿ ಸುದ್ದಿ

ದೇವನಹಳ್ಳಿ: ಯುವಕರು ಟಿವಿ, ಮೊಬೈಲ್‌ಗಳಿಗೆ ಮಾರಿಹೋಗಬಾರದು. ಕ್ರೀಡೆಗಳಲ್ಲಿ ತೊಡಗಿಸಿಕೊಳ್ಳಬೇಕು. ಆರೋಗ್ಯ ಮತ್ತು ದೇಹದ ಸಮತೋಲನ ಕಾಪಾಡಿಕೊಳ್ಳಲು ಇಂತಹ ಪಂದ್ಯಾವಳಿಯಲ್ಲಿ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು. ಎಂದು ಜಿಪಂ ಮಾಜಿ ಸದಸ್ಯ ಕೆ.ಸಿ.ಮಂಜುನಾಥ್ ತಿಳಿಸಿದರು.

ತಾಲೂಕಿನ ಕನ್ನಮಂಗಲ ಗ್ರಾಮದಲ್ಲಿ 12ನೇ ವಾರ್ಷಿಕೋತ್ಸವ ಅಂಗವಾಗಿ ಎರಡು ದಿನದ ಕ್ರಿಕೇಟ್ ಟೂರ್ನಿಮೆಂಟ್‌ನ ವಿಜೇತ ತಂಡಗಳಿಗೆ ಬಹುಮಾನವನ್ನು ವಿತರಿಸಿ ಮಾತನಾಡಿದರು. 12ನೇ ಕ್ರಿಕೆಟ್ ಟೂರ್ನಿಮೆಂಟ್‌ನಲ್ಲಿ ಕನ್ನಮಂಗಲ ಎ ಟೀಮ್ ಮತ್ತು ಬಿ ಟೀಮ್ ಫೈನಲ್‌ಗೆ ಬಂದಿದ್ದು, ಕನ್ನಮಂಗಲ ಗ್ರಾಮದ ತಂಡವು ಫೈನಲ್‌ಗೆ ಆಯ್ಕೆಯಾಗಿದ್ದು, ಸಮಿಫೈನಲ್‌ಗೆ ಸಾವಕನಹಳ್ಳಿ ತಂಡವು ಭಾಗವಹಿಸಿದ್ದು, ಪ್ರಥಮ ಕನ್ನಮಂಗಲ ತಂಡ, ದ್ವಿತೀಯ ಯರ್ತಿಗಾನ ಹಳ್ಳಿ ತಂಡ ವಿಜೇತರಾಗಿದ್ದು, ಬಹುಮಾನ ವಿತರಿಸಿ ಪ್ರೋತ್ಸಾಹಿಸಲಾಗುತ್ತಿದೆ ಎಂದು ಹೇಳಿದರು.

ಕನ್ನಮಂಗಲ ಗ್ರಾಪಂ ಸದಸ್ಯ



ಕೆ.ಆರ್.ನಾಗೇಶ್ ಮಾತನಾಡಿ, ಪ್ರತಿಯೊಬ್ಬರು ಕ್ರೀಡಾಮನೋಭಾವವನ್ನು ಇಟ್ಟುಕೊಳ್ಳಬೇಕು. ಸಮಾಜದಲ್ಲಿ ದುಶ್ಚಟಗಳಿಗೆ ಬಹಳ ಬೇಗ ಆಕರ್ಷಿತರಾಗುತ್ತಾರೆ. ಇದರಿಂದ ಹೊರಬರಬೇಕಾದರೆ, ಆಗಾಗ್ಗೆ ಗ್ರಾಮೀಣ ಪ್ರದೇಶಗಳಲ್ಲಿ ಇಂತಹ ಕ್ರೀಡಾಕೂಟಗಳನ್ನು ಆಯೋಜಿಸಿದರೆ ಅವರ ಮನಸ್ಥಿತಿ ಚೆನ್ನಾಗಿರುತ್ತದೆ ಎಂದು ಸಲಹೆ ಮಾಡಿದರು.

ಇದೇ ಸಂದರ್ಭದಲ್ಲಿ ಕನ್ನಮಂಗಲ ಗ್ರಾಪಂ ಮಾಜಿ ಅಧ್ಯಕ್ಷ ನಾಗೇಶ್, ಸಂದೀಪ್, ಮಂಜುನಾಥ್, ಕ್ರೀಡಾಸ್ಪರ್ಧಿಗಳು, ವಿಜೇತ ತಂಡಗಳು ಇದ್ದರು.

ಮೊದಲನೇ ಪುಟದಿಂದ

ಬಿಜೆಪಿ ಜೆಡಿಎಸ್ ಮೈತ್ರಿ ಸೋಲಿಸಲು ಸಿಎಂ ಕರೆ

ದೇವೇಗೌಡರ ಅನುಕೂ